
ಸುದ್ದಿಗಳ ಹೊನಲು

# ಸಂಜೆ ಮುಗಿಲು

ವೇಣು ಸಾರಥ್ಯದಲ್ಲಿ...

ಸಂಪುಟ: 21, ಸಂಚಿಕೆ: 184, ಪುಟಗಳು: 8, ಶನಿವಾರ, 13 ಏಪ್ರಿಲ್ 2024 RNI NO. KARKAN/2002/08054

epaper: www.sanjemugilu.com

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ


### ಸುಭಾಷಿತ

ಸ್ವಲ್ಪ ಉಳ್ಳವನು ಬಡವನಲ್ಲ;
ಇನ್ನೂ ಬೇಕೆನ್ನುವವನು ಬಡವ

। ಸೆಬೇಕಾ

### ಪಂಚಾಂಗ

(ಶನಿವಾರ 13, ಏಪ್ರಿಲ್ -2024)

- ಶ್ರೀ ಕ್ರೋಧಿ ನಾಮ ಸಂವತ್ಸರ,
- ಉತ್ತರಾಯಣ, ವಸಂತ ಋತು,
- ಚೈತ್ರ ಮಾಸ, ಶುಕ್ಲ ಪಕ್ಷ,
- ಪಂಚಮಿ, ಷಷ್ಠಿ
- ರೋಹಿಣಿ ನಕ್ಷತ್ರ.
- ರಾಹುಕಾಲ - 09:04AM 10:40 AM
- ಗುಳಿಕಕಾಲ - 05:52 AM 07:28 AM
- ಯಮಗಂಡಕಾಲ - 1:52 PM 3:28 PM

## ಶ್ರೀರಾಮುಲು ಬಳಿ ಕೋಟ್ಯಾಂತರ ರೂ.
# ಆಸ್ತಿ, ಸಾಲ ಇಲ್ಲ

**ಬಳ್ಳಾರಿ:** ಬಳ್ಳಾರಿ ಲೋಕಸಭಾ ಕ್ಷೇತ್ರದಬಿಜೆಪಿ ಅಭ್ಯರ್ಥಿಯಾಗಿರುವ ಬಿ. ಶ್ರೀರಾಮುಲು ಅವರು ಇಂದು(ಏ.12) ಬಳ್ಳಾರಿ ನಗರದ ಎಸ್ ಪಿ ಸರ್ಕಲ್ ನಿಂದ ಜಿಲ್ಲಾಧಿಕಾರಿ ಕಚೇರಿವರೆಗೆ ರೋಡ್ ಶೋ ನಡೆಸಿ ನಾಮಪತ್ರ ಸಲ್ಲಿಸಿದರು. ಈ ವೇಳೆ ಶ್ರೀರಾಮುಲುಗೆ ಆನಂದ ಸಿಂಗ್, ಜನಾರ್ದನರೆಡ್ಡಿ ಪತ್ನಿ ಅರುಣಾಲಕ್ಷ್ಮೀ ಸಾಥ್ ನೀಡಿದರು. ಇದೇ ವೇಳೆ ಅವರ ಆಸ್ತಿ ವಿವರ ಸಲ್ಲಿಸಿದ್ದು, ಒಟ್ಟು 45 ಕೋಟಿ 88 ಲಕ್ಷದ 2 ಸಾವಿರದ 320 ರೂ. ಆಸ್ತಿ ಹೊಂದಿದ್ದಾರೆ. ಪುಟ 2



## ವಿಶ್ವೇಶ್ವರ ಹೆಗಡೆ ಕಾಗೇರಿ ಸಾಲ ಇಲ್ಲ
# ಟ್ರಸ್ಟ್‌ಗೆ ಸಾಲ ಕೊಟ್ಟಿದ್ದಾರೆ

**ಕಾರವಾರ:** ಉತ್ತರ ಕನ್ನಡ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿಯಾಗಿ ವಿಶ್ವೇಶ್ವರ ಹೆಗಡೆ ಕಾಗೇರಿ ಅವರು ನಾಮಪತ್ರ ಸಲ್ಲಿಸಿದರು. ತಮ್ಮ ಬೆಂಬಲರೊಂದಿಗೆ ಮೆರವಣಿಗೆ ಮೂಲಕ ತೆರಳಿ ಕಾರವಾರದಲ್ಲಿ ಚುನಾವಣಾಧಿಕಾರಿಗೆ ತಮ್ಮ ಉಮೇದುವಾರಿಕೆ ಸಲ್ಲಿಸಿದರು. ಇನ್ನು ತಮ್ಮ ಹೆಸರಿನಲ್ಲಿ ಒಟ್ಟು 16.76 ಕೋಟಿ ರೂ. ಮೌಲ್ಯದ ಆಸ್ತಿ ಇದೆ ಎಂದು ಅಫಿಡವಿಟ್ ನಲ್ಲಿ ಘೋಷಿಸಿದ್ದಾರೆ. ವಿಶೇಷ ಅಂದ್ರೆ, ವಿಶ್ವೇಶ್ವರ ಹೆಗಡೆ ಕಾಗೇರಿ ಅವರು ಯಾವುದೇ ಸಾಲ ಮಾಡಿಕೊಂಡಿಲ್ಲ. ಬದಲಿಗೆ ಸಂಘ ಪರಿವಾರದ ದೀನದಯಾಳ ಟ್ರಸ್ಟ್‌ಗೆ 24.50 ಲಕ್ಷ ರೂ. ಕೈ ಸಾಲ ಕೊಟ್ಟಿದ್ದಾರೆ.



ವಿಶ್ವೇಶ್ವರ ಹೆಗ್ಡೆ ಕಾಗೇರಿ ಅವರು ನಾಮಪತ್ರ ಸಲ್ಲಿಕೆ ವೇಳೆ ಒಟ್ಟು 16.76 ಕೋಟಿ ರೂ. ಮೌಲ್ಯದ ಆಸ್ತಿಯನ್ನು ಘೋಷಿಸಿದ್ದಾರೆ. ವಾರ್ಷಿಕ ಆದಾಯ ವೈಯಕ್ತಿಕ- 36,31,300 ರೂಪಾಯಿ, ಅವಿಭಕ್ತ ಕುಟುಂಬದ ಆದಾಯ 45,18,753 ರೂ, ಮೊದಲ ಪುತ್ರಿ ಜಯಲಕ್ಷ್ಮೀ ಆದಾಯ 5,51,540 ರೂ, ಕೈಯಲ್ಲಿ 5 ಲಕ್ಷ ರೂ, ಹಣ, ಅವಿಭಕ್ತ ಕುಟುಂಬದ ಬಳಿ 1 ಲಕ್ಷ ರೂ, ವಿವಿಧ ಬ್ಯಾಂಕುಗಳಲ್ಲಿರುವ ಒಟ್ಟು ಎಫ್‌ಡಿ- 1,11,48,727 ರೂ,. ಪತ್ನಿ ಭಾರತಿ ಬಳಿ 4,72,053 ರೂ, ಅವಿಭಕ್ತ ಕುಟುಂಬಕ್ಕೆ ಸೇರಿದ್ದು 1,08,69,516 ರೂ, ಎರಡನೇ ಪುತ್ರಿ ರಾಜಲಕ್ಷ್ಮೀ- 8,53,776 ರೂ. ಇದೆ ಎಂದು ಮಾಹಿತಿ ನೀಡಿದ್ದಾರೆ.

ಪತ್ನಿ ಭಾರತಿ ಹೆಗಡೆ ಅವರಿಗಿಂತ ವಿಶ್ವೇಶ್ವರ ಹೆಗಡೆ ಕಾಗೇರಿ ಅವರೇ ಹೆಚ್ಚಿನ ಚಿನ್ನ, ಬೆಳ್ಳಿ ಹೊಂದಿದ್ದಾರೆ. ಪತ್ನಿ ಬಳಿ 1.100 ಕೆ.ಜಿ. ಚಿನ್ನ ಇದ್ದರೆ, ಕಾಗೇರಿ ಬಳಿ 1.250 ಕೆ.ಜಿ. ಚಿನ್ನ, 3.500 ಕೆ.ಜಿ. ಬೆಳ್ಳಿ ಇದೆ. ಇನ್ನು ಕಾಗೇರಿ ಅವರು ತಮ್ಮ ಪತ್ನಿ, ಮಕ್ಕಳ ಹೆಸರಿನಲ್ಲಿ ಯಾವುದೇ ಜಮೀನು ಇಲ್ಲ ಎಂದು ಉಲ್ಲೇಖಿಸಿದ್ದಾರೆ. ಪುಟ 2

## ಸಂಕ್ಷಿಪ್ತ ಸುದ್ದಿ

### ಬಬಲೇಶ್ವರನ ಅರ್ಜುಣಗಿ ಗ್ರಾಮದ ಬಳಿ ಭೀಕರ ರಸ್ತೆ
## ಅಪಘಾತ



**ವಿಜಯಪುರ:** ಬಬಲೇಶ್ವರ ತಾಲೂಕಿನ ಅರ್ಜುಣಗಿ ಗ್ರಾಮದ ಬಳಿ ಭೀಕರ ರಸ್ತೆ ಅಪಘಾತ ಸಂಭವಿಸಿ ಕಾರಿನಲ್ಲಿದ್ದ ವಿಜಯಪುರ ಮೂಲದ ನಾಲ್ವರು ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಅರ್ಜುನ ಕುಶಾಲಸಿಂಗ್ ರಜಪೂತ (32), ರವಿನಾಥ ಪತ್ತಾರ (52), ಪುಷ್ಪಾ ರವಿನಾಥ ಪತ್ತಾರ (40), ಮೇಘರಾಜ ರಜಪೂತ (12) ಮೃತ ದುರ್ದೈವಿಗಳು. ಕಾರಿನಲ್ಲಿ ನಾಲ್ವರು ವಿಜಯಪುರದಿಂದ ಜಮುಖಂಡಿಯಲ್ಲಿರುವ ದೇವಸ್ಥಾನಕ್ಕೆ ಹೊರಟಿದ್ದರು. ಪುಟ 2

### ಪ್ರೀತಿಸಿದವಳನ್ನೇ ಕೊಲೆ ಮಾಡಿದ
## ಪ್ರಿಯತಮ

**ತುಮಕೂರು:** ಇದೆ ಏಪ್ರಿಲ್ 1ರ ಬೆಳ್ಳಂಬೆಳಿಗ್ಗೆ ದೊಡ್ಡಗುಣಿ ರಸ್ತೆ ಬಳಿ ಸುಟ್ಟ ಸ್ಥಿತಿಯಲ್ಲಿ ಮಹಿಳೆಯೊಬ್ಬಳ ಶವ ಪತ್ತೆಯಾಗಿತ್ತು. ಯಾರೋ ಅಪರಿಚಿತರು ಕೊಲೆ ಮಾಡಿ ಬಿಸಾಡಿ ಹೋಗಿರುವುದು ಖಚಿತವಾಗಿತ್ತು. ಸ್ಥಳೀಯರ ಮಾಹಿತಿ ಮೇರೆಗೆ ಚೇಳೂರು ಪೊಲೀಸರು ಕೂಡ ಭೇಟಿ ನೀಡಿ, ಪರಿಶೀಲನೆ ನಡೆಸಿ ಪ್ರಕರಣ ದಾಖಲಿಸಿಕೊಂಡಿದ್ದರು. ಬಳಿಕ ತುಮಕೂರು ಎಸ್ ಪಿ ಅಶೋಕ್ ವೆಂಕಟ್ ಮಾರ್ಗದರ್ಶನದಲ್ಲಿ ಶಿರಾ ಡಿವೈಎಸ್ ಪಿ ಬಿಕೆ ಶೇಖರ್ ನೇತೃತ್ವದಲ್ಲಿ ತನಿಖೆ ನಡೆಸಿ, ಇದೀಗ ಕೊಲೆ ಪ್ರಕರಣದ ರಹಸ್ಯವನ್ನ ಬಯಲು ಮಾಡಿದ್ದಾರೆ.





ಪತ್ತೆಯಾದ ಮಹಿಳೆ ಸುಟ್ಟ ಪರಿಸ್ಥಿತಿಯಲ್ಲಿ ಇದ್ದಳು. ಆದರೆ, ಬಟ್ಟೆ, ಕಾಲು ಉಂಗುರ ಸರಿಯಾಗಿ ಸುಟ್ಟಿರಲಿಲ್ಲ. ಜೊತೆಗೆ ಮಹಿಳೆಯನ್ನ ಸಾಯಿಸಲು ಬಳಸಿದ್ದ ಪೆಟ್ರೋಲ್ ಬಾಟಲ್ ನಿಂದ ಆರೋಪಿ ಪತ್ತೆಗೆ ಸಹಕಾರ ಆಗಿದೆ. ಇದೆಲ್ಲವೂ ಸೀಜ್ ಮಾಡಿದ ಪೊಲೀಸರು ಕೂಡಲೇ ಆರೋಪಿಗಾಗಿ ಹಾಗೂ ಮೃತ ಮಹಿಳೆ ಯಾರು ಎಂದು ಪತ್ತೆ ಮಾಡಲು ಶುರು ಮಾಡಿದ್ದಾರೆ. ಪುಟ 2

## ಚುನಾವಣೆ, ಪ್ರಚಾರ ವೀಕ್ಷಿಸಲು 25 ವಿದೇಶಿ ನಾಯಕರಿಗೆ ಆಹ್ವಾನ
# ಬಿಜೆಪಿ ಪ್ರಚಾರ ತಯಾರಿ

**ನವದೆಹಲಿ:** ಈ ಬಾರಿ ಲೋಕಸಭೆ ಚುನಾವಣೆ ಪ್ರಚಾರ ಕಾವೇರಿದೆ. ಎಲ್ಲ ಕಡೆ ತಮ್ಮ ಪಕ್ಷಗಲ ಪರ ಭರ್ಜರಿಯಾಗಿ ಪ್ರಚಾರ ಮಾಡುತ್ತಿದ್ದಾರೆ. ಸಾಮಾಜಿಕ ಜಾಲತಾಣದಿಂದ ಹಿಡಿದು ಎಲ್ಲ ರೀತಿಯ ಪ್ರಚಾರ ತಂತ್ರಗಳನ್ನು ರಾಜಕೀಯ ಪಕ್ಷಗಳು ಮಾಡುತ್ತಿದೆ. ಇದರ ನಡುವೆ ಬಿಜೆಪಿ ಶತಾಯಗತಾಯ ಈ ಬಾರಿ ಮತ್ತೆ ನಾವು ಅಧಿಕಾರಕ್ಕೆ ಬರಲೇಬೇಕು, 400ಕ್ಕಿಂತ ಹೆಚ್ಚು ಸ್ಥಾನವನ್ನು NDA ಮಿತ್ರ ಪಕ್ಷ ಪಡೆಯಲೇಬೇಕು ಎಂಬ ಗುರಿಯನ್ನು ಇಟ್ಟುಕೊಂಡಿದೆ. ಬಿಜೆಪಿ ಈಗಾಗಲೇ ದೊಡ್ಡ ಮಟ್ಟದಲ್ಲಿ ಪ್ರಚಾರವನ್ನು ಪ್ರಾರಂಭಿಸಿದೆ. ಇನ್ನು ಈ ಪ್ರಚಾರಕ್ಕೆ ಸ್ಟಾರ್ ನಟ-ನಟಿಯರನ್ನು ಕೂಡ ಬಳಸಿಕೊಂಡಿದೆ. ಇದೇ ಮೊದಲ ಬಾರಿಗೆ ಬೇರೆ ದೇಶ ರಾಜಕೀಯ ನಾಯಕರನ್ನು ಭಾರತದ ಚುನಾವಣೆ ಹಾಗೂ ಪ್ರಚಾರವನ್ನು ವೀಕ್ಷಿಸಲು ಆಹ್ವಾನ ನೀಡಲಾಗಿದೆ. ಈ ಬಾರಿ ಬಿಜೆಪಿ ಪ್ರಚಾರದಲ್ಲಿ ವಿದೇಶಿ ನಾಯಕರು ಭಾಗಿಯಾಗುತ್ತಿದ್ದಾರೆ.

ಈ ನಾಯಕರು ಭಾರತೀಯ ಜನತಾ ಪಕ್ಷದ ಆಹ್ವಾನದ ಮೇರೆಗೆ ಭಾರತದಲ್ಲಿರುತ್ತಾರೆ. ಭಾರತೀಯ ಎಕ್ಸ್‌ಪ್ರೆಸ್ ಪ್ರತಿಕೆ ವರದಿಯ ಪ್ರಕಾರ ಇದು ವಿಶ್ವದ ಅತಿದೊಡ್ಡ ಚುನಾವಣಾ ಪ್ರಚಾರವಾಗಿದೆ. ಸದ್ಯಕ್ಕೆ, ಬಿಜೆಪಿಯು 25 ರಾಷ್ಟ್ರಗಳ ರಾಜಕೀಯ ಪಕ್ಷಗಳಿಗೆ ಆಹ್ವಾನವನ್ನು ಕಳುಹಿಸಿದ್ದು, ಹದಿಮೂರು ಪಕ್ಷಗಳು ಇದುವರೆಗೆ ಆಹ್ವಾನವನ್ನು ಸ್ವೀಕರಿಸಿವೆ ಎಂದು ವರದಿ ಹೇಳಿದೆ.

ಯುನೈಟೆಡ್ ಸ್ಟೇಟ್ಸ್‌ನ ಎರಡು ರಾಜಕೀಯ ಪಕ್ಷಗಳು ಆಡಳಿತಾರೂಢ ಡೆಮೋಕ್ರಾಟ್‌ಗಳು ಮತ್ತು ಆಪ್ ರಿಪಬ್ಲಿಕನ್‌ಗಳನ್ನು ಆಹ್ವಾನಿಸಲಾಗಿಲ್ಲ ಏಕೆಂದರೆ ಅಲ್ಲಿಯೂ ಕೂಡ ಚುನಾವಣೆ ನಡೆಯುವ ಕಾರಣ ಅವರು ಈ ಪ್ರಚಾರಕ್ಕೆ ಬರುತ್ತಿಲ್ಲ ಎಂದು ವರದಿ ಹೇಳಿದೆ. ಯುನೈಟೆಡ್ ಕಿಂಗ್‌ಡಮ್‌ನ ಕನ್ಸರ್ವೇಟಿವ್ ಮತ್ತು ಲೇಬರ್ ಪಕ್ಷಗಳು ಮತ್ತು ಜರ್ಮನಿಯ ಕ್ರಿಶ್ಚಿಯನ್ ಡೆಮಾಕ್ರಾಟ್‌ಗಳು ಮತ್ತು ಸಾಮಾಜಿಕ ಪ್ರಜಾಪ್ರಭುತ್ವವಾದಿ ಪಕ್ಷವನ್ನು ಆಹ್ವಾನಿಸಲಾಗಿದೆ. ಪುಟ 2



## ಬೆಂಗಳೂರು ಬ್ಲಾಸ್ಟ್: ಆರೋಪಿಗಳನ್ನು ಹಿಡಿಯಲು ನೆರವಾಗಿದ್ದು ನಮ್ಮ ಪೊಲೀಸ್
# ಸಿಡಿಗುಟ್ಟಿದ ಮಮತಾ ಬ್ಯಾನರ್ಜಿ

**ಕೋಲ್ಕತಾ:** ಬೆಂಗಳೂರಿನ ರಾಮೇಶ್ವರಂ ಕೆಫೆಯಲ್ಲಿ ಕಳೆದ ತಿಂಗಳು ನಡೆದಿದ್ದ ಬಾಂಬ್ ಸ್ಫೋಟ ಪ್ರಕರಣದಲ್ಲಿ ಎನ್ ಐಎ ತಂಡ ಕೋಲ್ಕತಾದಲ್ಲಿ ಇಬ್ಬರು ಆರೋಪಿಗಳನ್ನು ಬಂಧಿಸಿದೆ. ಈ ವಿಚಾರ ಈಗ ಬಿಜೆಪಿ ಮತ್ತು ಟಿಎಂಸಿ ಮಧ್ಯೆ ವಾಗ್ಯುದ್ಧಕ್ಕೆ ಕಾರಣವಾಗಿದೆ. ಪಶ್ಚಿಮ ಬಂಗಾಳ ಉಗ್ರಗಾಮಿಗಳ ಅಡಗುದಾಣವಾಗಿದೆ ಎಂದು ಬಿಜೆಪಿ ಐಟಿ ಸೆಲ್ ಮುಖ್ಯಸ್ಥ ಅಮಿತ್ ಮಾಳವೀಯ ಸೋಷಿಯಲ್ ಮೀಡಿಯಾದಲ್ಲಿ ಹೇಳಿದ್ದಾರೆ. ಈ ಹೇಳಿಕೆಗೆ ಪಶ್ಚಿಮ ಬಂಗಾಳ ಪೊಲೀಸ್ ಮತ್ತು ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ತೀವ್ರ ಆಕ್ಷೇಪ ವ್ಯಕ್ತಪಡಿಸಿದ್ದಾರೆ. ಇಬ್ಬರು ಶಂಕಿತ ಉಗ್ರರಾದ ಮುಸ್ಸಾವಿರ್ ಹುಸೇನ್ ಶಾಝಿಬ್ ಹಾಗೂ ಅವರ ಸಹಚರ ಅಬ್ದುಲ್ ಮದೀನ್ ಅಹ್ಮದ್ ತಾಹಾ ಅವರನ್ನು ಕೋಲ್ಕತಾದಲ್ಲಿ ಬಂಧಿಸಲು ಎನ್ ಐಎಗೆ ಕೋಲ್ಕತಾ ಪೊಲೀಸ್ ನೆರವಾಗಿದೆ ಎಂದು ತಿರುಗೇಟು ನೀಡಿದ್ದಾರೆ.



ಕೂಚ್ ಬಿಹಾರ್ ನಲ್ಲಿ ಚುನಾವಣಾ ಪ್ರಚಾರ ಸಭೆ ನಡೆಸುತ್ತಿದ್ದ ವೇಳೆ ಸಿಎಂ ಮಮತಾ ಬ್ಯಾನರ್ಜಿ ಇಬ್ಬರು ಶಂಕಿತ ಉಗ್ರರ ಬಂಧನದ ಘಟನೆಯನ್ನು ಉಲ್ಲೇಖಿಸಿದ್ದಾರೆ. 'ಈ ಇಬ್ಬರು ವ್ಯಕ್ತಿಗಳು ಬಂಗಾಳಕ್ಕೆ ಬಂದ ಎರಡೇ ಗಂಟೆಯೊಳಗೆ ಬಂಧಿಸಲಾಗಿದೆ. ಇದು ತಮ್ಮ ರಾಜ್ಯದಲ್ಲಿರುವ ಕಾನೂನು ಜಾರಿ ಸಂಸ್ಥೆಗಳ ಕ್ರಿಯಾಶೀಲತೆಯನ್ನು ತೋರಿಸುತ್ತದೆ.

'ಆರೋಪಿಗಳು ಇಲ್ಲಿಯವರಲ್ಲ, ಕರ್ನಾಟಕದವರು. ಬಂಗಾಳಕ್ಕೆ ಬಂದು ಎರಡು ಗಂಟೆಗಳಿಂದ ಅಡಿಗಿಕೊಂಡಿದ್ದರು. ಈ ಎರಡು ಗಂಟೆಯಲ್ಲಿ ನಮ್ಮ ಪೊಲೀಸರು ಇವರನ್ನು ಹಿಡಿದುಹಾಕಿದ್ದಾರೆ. ಈ ಮನುಷ್ಯರು ಬಂಗಾಳ ಸುರಕ್ಷಿತ ಅಲ್ಲ ಎನ್ನುತ್ತಿದ್ದಾರೆ,' ಎಂದು ಮಮತಾ ಬ್ಯಾನರ್ಜಿ ಆಕ್ರೋಶ ವ್ಯಕ್ತಪಡಿಸಿದ್ದಾರೆ.

**ಬಿಜೆಪಿ ನಾಯಕನಿಗೆ ತಿರುಗೇಟು ನೀಡಿದ ಬಂಗಾಳ ಪೊಲೀಸ್:** ಬಿಜೆಪಿಯ ಅಮಿತ್ ಮಾಳವೀಯ ಹೇಳಿಕೆಗೆ ಪಶ್ಚಿಮ ಬಂಗಾಳ ಪೊಲೀಸ್ ಕೂಡ ತಿರುಗೇಟು ನೀಡಿದೆ. ಪುಟ 2

## ದಾವಣಗೆರೆಯಲ್ಲಿ ಬಿಜೆಪಿಗೆ ಬಿಗ್ ಶಾಕ್, ಮಾಜಿ ಶಾಸಕ, ಆರ್‌ಎಸ್‌ಎಸ್ ಕಟ್ಟಾಳು
# ಕಾಂಗ್ರೆಸ್ ಸೇರ್ಪಡೆ

**ದಾವಣಗೆರೆ:** ಹಾಲಿ ಸಂಸದ ಸಿದ್ದೇಶ್ವರ್ ಬದಲಿಗೆ ಈ ಬಾರಿ ದಾವಣಗೆರೆ ಲೋಕಸಭಾ ಟಿಕೆಟ್ ಅವರ ಪತ್ನಿಗೆ ನೀಡಲಾಗಿದೆ. ಇದರಿಂದ ಬಿಜೆಪಿಯಲ್ಲೇ ಅಸಮಾಧಾನ ಭುಗಿಲೆದ್ದಿದೆ. ಅದರಲ್ಲೂ ಪ್ರಮುಖವಾಗಿ ಎಂಪಿ ರೇಣುಕಾಚಾರ್ಯ ಕೋಪ ತಣ್ಣಗಾಗುತ್ತಿಲ್ಲ. ಖುದ್ದು ಬಿಎಸ್ ಯಡಿಯೂರಪ್ಪ ಸಂಧಾನ ಮಾಡಿದರೂ ಸಹ ಮತ್ತೆ ಭಿನ್ನಮತ ಸ್ಫೋಟಗೊಂಡಿದೆ. ಇದರ ಮಧ್ಯ ಆರ್ ಎಸ್ ಎಸ್ ಕಟ್ಟಾಳು ಬಿಜೆಪಿಗೆ ಶಾಕ್ ಕೊಟ್ಟಿದ್ದಾರೆ. ಹೌದು ಮಾಜಿ ಶಾಸಕ, ಆರ್ ಎಸ್ ಎಸ್ ಕಟ್ಟಾಳು ಟಿ.ಗುರುಸಿದ್ದನಗೌಡ ಅವರು ಬಿಜೆಪಿ ತೊರೆದು ಕಾಂಗ್ರೆಸ್ ಸೇರ್ಪಡೆಯಾದರು. ಪುಟ 2



# ಮಲ್ಲಿಕಾರ್ಜುನ್ ಖರ್ಗೆ ಅಳಿಯ ಕೂಡ ಕೋಟ್ಯಾಧೀಶ

**ಕಲಬುರಗಿ:** 2024 ರ ಲೋಕಸಭಾ ಚುನಾವಣಾ ಅಖಾಡ ದಿನೇ ದಿನೇ ರಂಗೇರುತ್ತಿದೆ. ವಿಧಾನಸಭೆ ಚುನಾವಣೆ ವೇಳೆ ರಾಜ್ಯದಲ್ಲಿ ಗ್ಯಾರಂಟಿ ಯೋಜನೆಗಳ ಮೂಲಕ ಬಿಜೆಪಿಗೆ ಶಾಕ್ ಕೊಟ್ಟಿದ್ದ ಕಾಂಗ್ರೆಸ್, ಇದೀಗ ಲೋಕಸಭಾ ಚುನಾವಣೆಯಲ್ಲೂ ಭರಪೂರ ಗ್ಯಾರಂಟಿ ಯೋಜನೆಗಳನ್ನ ಘೋಷಿಸಿದೆ. ಅದರಂತೆ(ಏ.12) ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅಳಿಯ, ಕಲಬುರಗಿ ಲೋಕಸಭಾ ಕಾಂಗ್ರೆಸ್ ಅಭ್ಯರ್ಥಿ ರಾಧಾಕೃಷ್ಣ ಜಿಲ್ಲಾಧಿಕಾರಿ ಕಚೇರಿಗೆ ತೆರಳಿ ಕೆಪಿಸಿಸಿ ಅಧ್ಯಕ್ಷ ಡಿಕೆ ಶಿವಕುಮಾರ್ ನೇತೃತ್ವದಲ್ಲಿ ನಾಮಪತ್ರ ಸಲ್ಲಿಸಿದರು. ಈ ವೇಳೆ ರಾಧಾಕೃಷ್ಣ ಅವರು ಆಸ್ತಿವಿವರ ಸಲ್ಲಿಸಿದರು.

ರಾಧಾಕೃಷ್ಣ ದೊಡ್ಡಮನಿ ಹಾಗೂ ಪತ್ನಿ ಜಯಶ್ರೀ ಇಬ್ಬರು ಕೋಟ್ಯಾಧಿಪತಿಗಳು. ರಾಧಾಕೃಷ್ಣ ದೊಡ್ಡಮನಿ ಒಟ್ಟು ಆಸ್ತಿ 29.48 ಕೋಟಿ ರೂ. ಇದೆ. ಜೊತೆಗೆ 4.18 ಕೋಟಿ ಸಾಲ ಪಡೆದಿದ್ದಾರೆ. ಇವರ ಹೆಸರಲ್ಲಿ ಇನ್ನೋವಾ, ಮಹಿಂದ್ರಾ ಬುಲೆರೋ ಕಾರುಗಳಿವೆ. ಇನ್ನು 255 ಗ್ರಾಂ ಚಿನ್ನ, 6 ಕೆ.ಜಿ ಬೆಳ್ಳಿ ಹೊಂದಿರುವ ರಾಧಕೃಷ್ಣ, 18 ಎಕರೆ ಕೃಷಿ ಜಮೀನು ಹೊಂದಿದರೆ, ಪುಟ 2



### ಹಿರಿಯ ಪತ್ರಕರ್ತ ಮೊದಲಿಯಾರ್‌ಗೆ ಗೌರವ
# ಪತ್ರಕರ್ತರ ಸಂಘದಿಂದ ಸನ್ಮಾನ

**ಬೆಂಗಳೂರು:** ಎಂಥಹ ಕಠಿಣ ಪರಿಸ್ಥಿತಿಗಳು ಎದುರಾದರೂ ಪತ್ರಕರ್ತರು ತಮ್ಮ ನಿಲುವನ್ನು ಸಡಿಲಿಸಬಾರದು. ಅದು ನಾವೇ ಕಂಕಣ ಪಡೆದುಕೊಂಡು ಮಾಧ್ಯಮ ವೃತ್ತಿಗೆ ನೀಡುವ ಗೌರವ ಎಂದು ಹಿರಿಯ ಪತ್ರಕರ್ತರಾದ ಗಂಗಾಧರ ಮೊದಲಿಯಾರ್ ಅವರು ಅಭಿಪ್ರಾಯಪಟ್ಟರು.

ಮಲ್ಲತ್ತಳ್ಳಿಯಲ್ಲಿರುವ ಅವರ ಮನೆಯಲ್ಲಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ (ಕೆ.ಯು.ಡಬ್ಲ್ಯೂ.ಜೆ) ಹಮ್ಮಿಕೊಂಡ ಮನೆಯಂಗಳದಲ್ಲಿ ಮನದುಂಬಿ ನಮನ ಸಮಾರಂಭದಲ್ಲಿ ಸಂಘದ ಸನ್ಮಾನ ಸ್ವೀಕರಿಸಿ ಮಾತನಾಡಿದರು.

ವಿದ್ಯಾರ್ಥಿ ಜೀವನದಿಂದಲೇ ಪತ್ರಿಕೆಗೆ ಬರೆಯುವ ಮೂಲಕ ಒಂದಿಷ್ಟು ಸಂಪಾದನೆ ಮಾಡಿಕೊಂಡು ಓದು ಮುಂದುವರಿಸಿಕೊಂಡು ಬಂದಿದ್ದು, ಮುಂದೆ ಪತ್ರಕರ್ತನಾಗುವ ಅವಕಾಶವನ್ನು ನೀಡಿತು. ಹಾಗಾಗಿ ನಾಲ್ಕು ದಶಕಗಳ ಕಾಲ ಸಂಯುಕ್ತ ಕರ್ನಾಟಕ ಮತ್ತು ಪ್ರಜಾವಾಣಿ ಪತ್ರಿಕೆಯಲ್ಲಿ ಕೆಲಸ ಮಾಡಲು ಸಾಧ್ಯವಾಯಿತು ಎಂದರು.



ಸವಾಲುಗಳ ನಡುವೆಯೇ ಪತ್ರಕರ್ತರು ಕೆಲಸ ಮಾಡಬೇಕಿದೆ. ಪತ್ರಕರ್ತರು ಯಾವುದೇ ರೀತಿಯಲ್ಲೂ ತಮ್ಮ ವ್ಯಕ್ತಿತ್ವಕ್ಕೆ ಕುಂದುಂಟಾಗುವ ರೀತಿಯಲ್ಲಿ ನಡೆದುಕೊಂಡರೆ ಎಲ್ಲೂ ಕೂಡಾ ಗುರುತಿಸಿಕೊಳ್ಳುವುದು ಅಸಾಧ್ಯ ಎಂದರು.

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಉಪಾಧ್ಯಕ್ಷ, ಪ್ರಧಾನ ಕಾರ್ಯದರ್ಶಿ ಮತ್ತು ರಾಜ್ಯಾಧ್ಯಕ್ಷ ಹೀಗೆ ವಿವಿಧ ಹುದ್ದೆಗಳನ್ನು ವಹಿಸಿಕೊಂಡು ಸಂಘಟನಾತ್ಮಕ ಕಾರ್ಯಗಳನ್ನು ವಿವಿಧ ಸವಾಲುಗಳ ಮಧ್ಯೆ ಹತ್ತಾರು ವರ್ಷಗಳ ಕಾಲ ನಿರ್ವಹಿಸಿರುವುದು ತೃಪ್ತಿ ಕೊಟ್ಟಿದೆ. ಮಾಧ್ಯಮ ಅಕಾಡೆಮಿಯ ಸೇವೆಗೂ ಕೆಯುಡಬ್ಲೂಜೆ ಕಾರಣ. ನನ್ನ ಸೇವೆ ಗುರುತಿಸಿ ಟಿ.ಎಸ್.ಆರ್. ಪ್ರಶಸ್ತಿ ಸೇರಿದಂತೆ ಸರ್ಕಾರದ ವಿವಿಧ ಉನ್ನತ ಸ್ಥಾನಮಾನಗಳು ತನ್ನನ್ನು ಹುಡುಕಿಕೊಂಡು ಬಂದಿವೆ ಎಂದೂ ಅವರು ಅಭಿಪ್ರಾಯಪಟ್ಟರು. ಪುಟ 2

## 'ಇಂಡಿಯಾ' ಮೈತ್ರಿಕೂಟಕ್ಕೆ
# ಬಹುಮತ ಅನುಮಾನವೆಂದ ಸಿಎಂ

**ಬೆಂಗಳೂರು:** ಲೋಕಸಭೆ ಚುನಾವಣೆಗೂ ಮುನ್ನವೇ ಕರ್ನಾಟಕ ಸಿಎಂ ಸಿದ್ದರಾಮಯ್ಯ ಸೋಲೊಪ್ಪಿಕೊಂಡರೇ ಎಂಬ ಅನುಮಾನ ಇದೀಗ ವ್ಯಕ್ತವಾಗಿದೆ. ಇದಕ್ಕೆ ಕಾರಣ ಅವರು ನೀಡಿರುವ ಮಹತ್ವದ ಹೇಳಿಕೆ. 'ಇಂಡಿಯಾ' ಮೈತ್ರಿಕೂಟಕ್ಕೆ ಲೋಕಸಭೆ ಚುನಾವಣೆಯಲ್ಲಿ ಬಹುಮತ ಸಿಗದೇ ಇರಬಹುದು ಎಂದು ಅವರು 'ಪಿಟಿಐ' ಸುದ್ದಿಸಂಸ್ಥೆಗೆ ನೀಡಿದ ಸಂದರ್ಶನದಲ್ಲಿ ಹೇಳಿದ್ದಾರೆ.

'ಇಂಡಿಯಾ' ಮೈತ್ರಿಕೂಟ ಲೋಕಸಭೆ ಚುನಾವಣೆಯಲ್ಲಿ ಸಂಪೂರ್ಣ ಬಹುಮತವನ್ನು ಪಡೆಯದಿರಬಹುದು. ಆದರೆ ಅದೇ ಎನ್ ಡಿಎ ಮೈತ್ರಿಕೂಡ ಕೂಡ ಸಂಪೂರ್ಣ ಬಹುಮತವನ್ನು ಪಡೆಯುವುದಿಲ್ಲ. ಆದ್ದರಿಂದ, 'ಇಂಡಿಯಾ' (ಬಣ) ಮೈತ್ರಿಕೂಟವು ಪಶ್ಚಿಮ ಬಂಗಾಳದ ಸಿಎಂ ಮಮತಾ ಬ್ಯಾನರ್ಜಿ, ಒಡಿಶಾದ ಸಿಎಂ ನವೀನ್ ಪಟ್ನಾಯಕ್, ಸಿಪಿಐ (ಎಂ) ಮತ್ತು ಇತರ ರಾಜಕೀಯ ಪಕ್ಷಗಳನ್ನು ಅವಲಂಬಿಸಬೇಕಾಗಬಹುದು ಎಂದು ಸಿದ್ದರಾಮಯ್ಯ ಹೇಳಿದ್ದಾರೆ.



ಎನ್‌ಡಿಎ ಹೆಸರಿನಲ್ಲಿ ಬಿಜೆಪಿ ಕೂಡ ಇತರ ರಾಜಕೀಯ ಪಕ್ಷಗಳೊಂದಿಗೆ ಮೈತ್ರಿ ಮಾಡಿಕೊಳ್ಳುತ್ತಿದೆ. ಬಿಜೆಪಿಯೊಂದೇ ಬಹುಮತದಿಂದ ಅಧಿಕಾರಕ್ಕೆ ಬಂದಿಲ್ಲ. ಬಿಜೆಪಿ ತನ್ನ ಮತದಾನದ ಶೇಕಡಾವಾರು ಪ್ರಮಾಣವನ್ನು ಹೆಚ್ಚಿಸಿರಬಹುದು, ಆದರೆ ಅದರ ಅರ್ಥ ಬಿಜೆಪಿ ತಾನಾಗಿ ಅಧಿಕಾರಕ್ಕೆ ಬಂದಿದೆ ಎಂದಲ್ಲ ಎಂದು ಸಿದ್ದರಾಮಯ್ಯ ಅಭಿಪ್ರಾಯಪಟ್ಟಿದ್ದಾರೆ.

ಲೋಕಸಭೆ ಚುನಾವಣೆಗೆ ಕೆಲವೇ ದಿನಗಳು ಬಾಕಿ ಇರುವಾಗ ಸಿದ್ದರಾಮಯ್ಯ ಅವರಿಂದ ಈ ಹೇಳಿಕೆ ಮೂಡಿಬಂದಿದೆ. ಲೋಕಸಭೆಗೆ ಒಟ್ಟು 7 ಹಂತಗಳಲ್ಲಿ ಮತದಾನ ನಡೆಯಲಿದ್ದು, ಮೊದಲ ಹಂತದ ಮತದಾನ ಏಪ್ರಿಲ್ 19ರಂದು ನಡೆಯಲಿದೆ. ಕರ್ನಾಟಕದಲ್ಲಿ ಏಪ್ರಿಲ್ 26ರಂದು 14 ಕ್ಷೇತ್ರಗಳಿಗೆ ಮತ್ತು ಮೇ 7ರಂದು ಉಳಿದ 14 ಕ್ಷೇತ್ರಗಳಿಗೆ ಮತದಾನ ನಡೆಯಲಿದೆ.

**ಸಿಎಂ ಬದಲಾವಣೆ ಬಗ್ಗೆ ಏನಂದರು ಸಿದ್ದರಾಮಯ್ಯ:** ಕರ್ನಾಟಕ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದು ಎರಡೂವರೆ ವರ್ಷಗಳ ನಂತರ ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರಿಗೆ ಮುಖ್ಯಮಂತ್ರಿ ಕುರ್ಚಿ ಬಿಟ್ಟುಕೊಡಬೇಕೇ ಎಂಬ ಊಹಾಪೋಹಗಳ ಬಗ್ಗೆ ಪ್ರತಿಕ್ರಿಯಿಸಿದ ಸಿದ್ದರಾಮಯ್ಯ, ಅದು ಪಕ್ಷದ ಹೈಕಮಾಂಡ್ ಯಾವ ನಿರ್ಧಾರ ತೆಗೆದುಕೊಳ್ಳುತ್ತದೆ ಎಂಬುದರ ಮೇಲೆ ಅವಲಂಬಿತವಾಗಿರುತ್ತದೆ ಎಂದರು. ಪುಟ 2

# ದಾವಣಗೆರೆಯಲ್ಲಿ 12.50 ಕೋಟಿ ರೂ. ಮೌಲ್ಯದ ಚಿನ್ನಾಭರಣ, ವಜ್ರ ಜಪ್ತಿ!

**ರಾಮನಗರ:** ಚುನಾವಣೆ ನೀತಿ ಸಂಹಿತೆ ಜಾರಿ ಹಿನ್ನೆಲೆಯಲ್ಲಿ ಫುಲ್ ಅಲರ್ಟ್ ಆಗಿರುವ ಚುನಾವಣಾಧಿಕಾರಿಗಳು ದಾಖಲೆಯಿಲ್ಲದೇ ಸಾಗಿಸುತ್ತಿದ್ದ ಕೋಟಿ ಕೋಟಿ ರೂ. ಬೆಲೆ ಬಾಳುವ ಚಿನ್ನ, ವಜ್ರ, ಆಭರಣವನ್ನು ಜಪ್ತಿ ಮಾಡಿದ್ದಾರೆ. ರಾಮನಗರ, ದಾವಣಗೆರೆ ಜಿಲ್ಲೆಗಳಲ್ಲಿ ನಡೆದ ಪ್ರತ್ಯೇಕ ಪ್ರಕರಣಗಳಲ್ಲಿ ಕೋಟ್ಯಂತರ ರೂ. ಮೌಲ್ಯದ ಚಿನ್ನಾಭರಣ, ಕಚ್ಚಾ ಚಿನ್ನ ಹಾಗೂ ವಜ್ರಗಳನ್ನ ಅಧಿಕಾರಿಗಳು ಜಪ್ತಿ ಮಾಡಿದ್ದಾರೆ. ರಾಮನಗರದ ಹೆಜ್ಜಾಲ ಚೆಕ್‌ಪೋಸ್ಟ್ ಬಳಿ ದಾಖಲೆ ಇಲ್ಲದೇ ಸಾಗಿಸುತ್ತಿದ್ದ,



30 ಕೆಜಿಗೂ ಹೆಚ್ಚು ಚಿನ್ನ, 10 ಕೆಜಿಯಷ್ಟು ಬೆಳ್ಳಿಯನ್ನ ಚುನಾವಣಾಧಿಕಾರಿಗಳು ಜಪ್ತಿ ಮಾಡಿದ್ದಾರೆ. ಬೆಂಗಳೂರಿನಿಂದ ಮೈಸೂರಿಗೆ ತೆರಳುತ್ತಿದ್ದ ವಾಹನಗಳನ್ನು ತಪಾಸಣೆ ನಡೆಸುತ್ತಿದ್ದ ವೇಳೆ ಮಲಬಾರ್ ಗೋಲ್ಡ್ ಡೈಮಂಡ್ ಕಂಪನಿಗೆ ಸೇರಿದ್ದು ಎನ್ನಲಾದ ವಾಹನದಲ್ಲಿ ಚಿನ್ನ, ಬೆಳ್ಳಿ ಪತ್ತೆಯಾಗಿದೆ. ಸೂಕ್ತ ದಾಖಲೆ ಇಲ್ಲದಿದ್ದರಿಂದ ಅಧಿಕಾರಿಗಳು ಚಿನ್ನವನ್ನ ಜಪ್ತಿ ಮಾಡಿದ್ದಾರೆ. ಸೂಕ್ತ ದಾಖಲೆ ತೋರಿಸಿ, ಹಿಂಪಡೆದುಕೊಳ್ಳುವಂತೆ ಚುನಾವಣಾಧಿಕಾರಿಗಳು ತಿಳಿಸಿದ್ದಾರೆ.

**12.50 ಕೋಟಿ ರೂ. ಮೌಲ್ಯದ ಚಿನ್ನಾಭರಣ ಸೀಜ್:** ಮತ್ತೊಂದು ಪ್ರಕರಣದಲ್ಲಿ ದಾಖಲೆ ಇಲ್ಲದೇ ಸಾಗಿಸುತ್ತಿದ್ದ 12.50 ಕೋಟಿ ರೂ. ಮೌಲ್ಯದ ಚಿನ್ನ ಹಾಗೂ ವಜ್ರವನ್ನು ದಾವಣಗೆರೆಯ ನಗರದ ಲೋಕಿಕೆರೆ ಚೆಕ್‌ಪೋಸ್ಟ್ ಬಳಿ ವಶಕ್ಕೆ ಪಡೆದಿದ್ದಾರೆ. ವಿವಿಧ ಆಭರಣ ಅಂಗಡಿಗಳಿಗೆ ಸಾಗಿಸುತ್ತಿದ್ದ ಚಿನ್ನಾಭರಣವನ್ನು ಸೂಕ್ತ ದಾಖಲೆಗಳಿಲ್ಲದ ಕಾರಣ ವಶಕ್ಕೆ ಪಡೆಯಲಾಗಿದೆ. ಚುನಾವಣಾ ಅಧಿಕಾರಿ ರೇಣುಕಾ, ಕಮರ್ಷಿಯಲ್ ಟ್ಯಾಕ್ಸ್‌ನ ಇಲಾಖೆ ಉಪ ಆಯುಕ್ತ ಮಂಜುನಾಥ್ ನೇತೃತ್ವದಲ್ಲಿ ಜಪ್ತಿ ಮಾಡಲಾಗಿದೆ.

# ರಸ್ತೆ ಅಪಘಾತದಲ್ಲಿ ಕಾರಾಗೃಹ ಸಿಬ್ಬಂದಿ ಸಾವು

**ಧಾರವಾಡ:** ಗರಗ ಗ್ರಾಮದ ಬಳಿ ಕಾರು ಮತ್ತು ಬೈಕ್ ನಡುವೆ ಅಪಘಾತ ಸಂಭವಿಸಿ, ಬೈಕ್ ನಲ್ಲಿದ್ದ ಕಾರಾಗೃಹ ಸಿಬ್ಬಂದಿ ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಧಾರವಾಡ ಕೇಂದ್ರ ಕಾರಾಗೃಹದ ಸಿಬ್ಬಂದಿ ರುದ್ರಪ್ಪ ಸಿದ್ದಣ್ಣವರ ಮೃತ ದುರ್ದೈವಿ. ಬೆಳಗಾವಿ ಜಿಲ್ಲೆಯ ಬೈಲಹೊಂಗಲ ತಾಲೂಕಿನ ಬೆಳವಡಿ ಗ್ರಾಮದ ರುದ್ರಪ್ಪ ಅವರು ಕರ್ತವ್ಯ ಮುಗಿಸಿ ವಾಪಸ್ ಮನೆಗೆ ತೆರಳುತ್ತಿದ್ದಾಗ ಅಪಘಾತ ಸಂಭವಿಸಿದೆ. ಗರಗ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದಿರುವ ಘಟನೆ ನಡೆದಿದೆ.

# ಅಪರಿಚಿತ ವಾಹನಕ್ಕೆ ಡಿಕ್ಕಿ ಹೊಡೆದು ಬೈಕ್ ಸವಾರ ಸಾವು

**ಬೆಂಗಳೂರು:** ಅಪರಿಚಿತ ವಾಹನಕ್ಕೆ ಡಿಕ್ಕಿ ಹೊಡೆದ ಪರಿಣಾಮ ಬೈಕ್ ಸವಾರ ಮೃತಪಟ್ಟಿರುವ ಘಟನೆ ಕೆಂಗೇರಿ ಸಂಚಾರಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ತಡರಾತ್ರಿ ನಡೆದಿದೆ. ಮುಖೇಶ್ (22) ಮೃತ ದುರ್ದೈವಿ. ಮುಖೇಶ್ ಬೈಕ್ ನಲ್ಲಿ ನೈಸ್ ರಸ್ತೆಯ ಹೊಸಕೆರೆಹಳ್ಳಿಯಿಂದ ತೆರಳುತ್ತಿದ್ದನು. ಅತಿವೇಗವಾಗಿ ಬೈಕ್ ಚಲಾಯಿಸುತ್ತಿದ್ದು, ನಿಯಂತ್ರಣ ತಪ್ಪಿ ಅಪರಿಚಿತ ವಾಹನಕ್ಕೆ ಡಿಕ್ಕಿ ಹೊಡೆದಿದ್ದಾರೆ. ಅಪಘಾತದಲ್ಲಿ ಮುಖೇಶ್ ತಲೆಗೆ ಗಂಭೀರ ಗಾಯವಾಗಿ ಸ್ಥಳದಲ್ಲೇ ಮೃತಪಟ್ಟಿದ್ದಾನೆ. ಘಟನಾ ಸ್ಥಳಕ್ಕೆ ಕೆಂಗೇರಿ ಸಂಚಾರಿ ಠಾಣೆ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

# ಕಾಂಗ್ರೆಸ್‌ಗೆ ಸೆಡ್ಡು ಹೊಡೆದ ವಿನಯ್ ಕುಮಾರ್!

**ದಾವಣಗೆರೆ:** ದಾವಣಗೆರೆ ಲೋಕಸಭಾ ಕ್ಷೇತ್ರದಿಂದ ಕಾಂಗ್ರೆಸ್ ಟಿಕೆಟ್ ಕೈತಪ್ಪಿದ್ದರಿಂದ ಪಕ್ಷದ ವಿರುದ್ಧ ತಿರುಗಿಬಿದ್ದಿರುವ ವಿನಯ್ ಕುಮಾರ್ ಪಕ್ಷೇತರ ನಾಮಪತ್ರ ಸಲ್ಲಿಸಿದ್ದಾರೆ. ಶುಕ್ರವಾರ ಪಕ್ಷೇತರ ಅಭ್ಯರ್ಥಿಯಾಗಿ ನಾಮಪತ್ರ ಸಲ್ಲಿಸಿದ್ದಾರೆ. ಕಾಂಗ್ರೆಸ್ ಅಭ್ಯರ್ಥಿ ಪ್ರಭಾ ಮಲ್ಲಿಕಾರ್ಜುನ್ ನಾಮಪತ್ರ ಸಲ್ಲಿಕೆ ಮಾಡಿದ ಬೆನ್ನಲ್ಲೆ ಪಕ್ಷೇತರ ಅಭ್ಯರ್ಥಿಯಾಗಿ ವಿನಯ್ ಕುಮಾರ್ ನಾಮಪತ್ರ ಸಲ್ಲಿಸಿದ್ದಾರೆ. ತಮ್ಮ ಬೆಂಬಲಿಗರೊಂದಿಗೆ ದಾವಣಗೆರೆ ಡಿಸಿ ಕಚೇರಿಯಲ್ಲಿ ನಾಮಪತ್ರ ಸಲ್ಲಿಸಿದ್ದಾರೆ. ವಿನಯ್ ಕುಮಾರ್ 2024 ಲೋಕಸಭಾ ಚುನಾವಣೆಯಲ್ಲಿ ದಾವಣಗೆರೆಯಿಂದ ಸ್ಪರ್ಧಿಸಲು ಪ್ರಬಲ ಟಿಕೆಟ್ ಆಕಾಂಕ್ಷಿಯಾಗಿದ್ದರು. ಆದರೆ ಕಾಂಗ್ರೆಸ್ ಸಚಿವ ಮಲ್ಲಿಕಾರ್ಜುನ್ ಪತ್ನಿ ಪ್ರಭಾ ಅವರಿಗೆ ಟಿಕೆಟ್ ನೀಡಿದ್ದರಿಂದ ಬಂಡಾಯವಾಗಿ ಚುನಾವಣೆಗೆ ಸ್ಪರ್ಧಿಸಿದ್ದಾರೆ. ಯಾವುದೇ ಕಾರಣಕ್ಕೂ ನಾಮಪತ್ರ ವಾಪಸ್ ಪಡೆಯುವುದಿಲ್ಲ ಎಂದು ಪಟ್ಟು ಹಿಡಿದಿದ್ದಾರೆ.



**ಹಿಂದೆ ಸರಿಯುವ ಮಾತೇ ಇಲ್ಲ:** ನಾಮ ಪತ್ರ ಸಲ್ಲಿಸಿ ಮಾತನಾಡಿದ ವಿನಯ್, ಪಕ್ಷೇತರ ಅಭ್ಯರ್ಥಿಯಾಗಿ ನಾಮಪತ್ರ ಸಲ್ಲಿಸಿದ್ದೇನೆ. ಯಾವುದೇ ಕಾರಣಕ್ಕೂ ನಾಮಪತ್ರ ವಾಪಸ್ ಪಡೆಯುವುದಿಲ್ಲ, ನನ್ನನ್ನು ಯಾರು ಸಹ ಯಾವುದೇ ಮಾತುಕತೆಗೆ ಕರೆದಿಲ್ಲ. ಹಾಗಾಗಿ ಖಚಿತವಾಗಿ ಸ್ಪರ್ಧೆ ಮಾಡುತ್ತೇನೆ, ನಾಮಪತ್ರ ವಾಪಸ್ ಪಡೆಯುವುದಿಲ್ಲ. ಜಿಲ್ಲೆಯ ಜನತೆ ಎರಡು ಫ್ಯಾಮಿಲಿಯವರನ್ನ ರಿಜೆಕ್ಟ್ ಮಾಡಿ ನನಗೆ ಜನ ಆಶೀರ್ವಾದ ಮಾಡಲಿದ್ದಾರೆ ಎನ್ನುವ ವಿಶ್ವಾಸವಿದೆ. ಜೂನ್ 4ರಂದು ಜಯಭೇರಿ ಭಾರಿಸೋದು ಪಕ್ಕಾ ಎಂದರು.

**ದುಡುಕಿನ ನಿರ್ಧಾರವಲ್ಲ:** ನಾನು ಈಗಾಗಲೇ ಎಲ್ಲಾ ಹಳ್ಳಿಗಳಿಗೂ ರೀಚ್ ಆಗಿದ್ದೇನೆ. ಕೆಲವೊಂದು ಕಡೆ ಭಯದ ವಾತಾವಾರಣ ಇದೆ. ಹೀಗಾಗಿ ಕೆಲವರು ನನ್ನ ಜೊತೆ ಬಂದಿಲ್ಲ. ನಾನೇನು ಅವಸರ ಮಾಡಿಕೊಂಡಿಲ್ಲ, ದುಡಕಿಲ್ಲ, ಯೋಚನೆ ಮಾಡಿಯೇ ಚುನಾವಣೆಗೆ ನಾಮಪತ್ರ ಸಲ್ಲಿಕೆ ಮಾಡಿದ್ದೇನೆ. ಜನ ಹೊಸ ಅವಕಾಶಕ್ಕಾಗಿ ಕಾಯುತ್ತಿದ್ದಾರೆ. ಯಾವುದೇ ಕಾರಣಕ್ಕೂ ನಾಮಪತ್ರ ವಾಪಸ್ ಪಡೆಯುವುದಿಲ್ಲ ಎಂದು ವಿನಯ್ ಕುಮಾರ್ ಸ್ಪಷ್ಟಪಡಿಸಿದ್ದಾರೆ.

ಕಾಂಗ್ರೆಸ್‌ನಿಂದ ಕಣಕ್ಕಿಳಿಯುತ್ತಿರುವ ಸಚಿವ ಎಸ್ ಎಸ್ ಮಲ್ಲಿಕಾರ್ಜುನ್ ಪತ್ನಿ ಪ್ರಭಾ ಮಲ್ಲಿಕಾರ್ಜುನ ಇಂದು ನಾಮಪತ್ರ ಸಲ್ಲಿಸಿದ್ದಾರೆ. ಜಿಲ್ಲೆಯ ಜನಾಭಿಪ್ರಾಯದ ಆಧಾರ ಮೇಲೆ ಪ್ರಭಾರನ್ನ ಕಾಂಗ್ರೆಸ್ ಅಭ್ಯರ್ಥಿ ಮಾಡಲಾಗಿದೆ ಎಂದು ಮಲ್ಲಿಕಾರ್ಜುನ ತಿಳಿಸಿದ್ದಾರೆ. ಲೋಕಸಭಾ ಕ್ಷೇತ್ರಕ್ಕೆ ಒಳಪಡುವ 8 ವಿಧಾನಸಭಾ ಕ್ಷೇತ್ರಗಳಲ್ಲಿ ಕೂಡ ಪ್ರಭಾ ಮಲ್ಲಿಕಾರ್ಜುನರ ಮೇಲೆ ಆಶೀರ್ವಾದ ಇದೆಉತ್ತಮವಾದ ಕೆಲಸಗಳನ್ನು ಮಾಡುವ ಸಲುವಾಗಿ ಕಾಂಗ್ರೆಸ್ ಅಭ್ಯರ್ಥಿ ಗೆಲ್ಲಲಿದ್ದಾರೆ. ಗ್ಯಾರಂಟಿ ಯೋಜನೆಗಳು ಬಡ ಜನರಿಗೆ ತಲುಪಿದ್ದು, ಜೀವನ ನಿರ್ವಹಣೆಗೆ ಸಹಕಾರಿಯಾಗಿದೆ. ಕಾಂಗ್ರೆಸ್ ಗೆ ಸಾಕಷ್ಟು ಜನರು ಸೇರ್ಪಡೆಯಾಗುತ್ತಾರೆ ಕಾದು ನೋಡಿ ಎಂದು ವಿಪಕ್ಷಗಳ ಪಾಳಯಕ್ಕೆ ಶಾಕ್ ಕೊಟ್ಟಿದ್ದಾರೆ.

# ದೇವೇಗೌಡರ ಕುಟುಂಬ ಹಿಂದಿನಿಂದಲೂ ಡಿಕೆಶಿ ಮೇಲೆ ಹಗೆತನ ಸಾಧಿಸುತ್ತಿದೆ

**ರಾಮನಗರ:** ದೇವೇಗೌಡರ ಕುಟುಂಬ ಹಿಂದಿನಿಂದಲೂ ಡಿ.ಕೆ.ಶಿವಕುಮಾರ್ ಮೇಲೆ ಹಗೆತನ ಸಾಧಿಸುತ್ತಿದೆ. ನಮಗೆ ಆ ಭಾವನೆ ಇಲ್ಲ ಎಂದು ಕಾಂಗ್ರೆಸ್ ಅಭ್ಯರ್ಥಿ ಡಿ.ಕೆ. ಸುರೇಶ್ ಆರೋಪಿಸಿದ್ದಾರೆ.



ಒಕ್ಕಲಿಗ ನಾಯಕರ ಜೊತೆ ಚುಂಚನಗಿರಿ ಶ್ರೀಗಳನ್ನು ಕುಮಾರಸ್ವಾಮಿ ಭೇಟಿ ಮಾಡಿದ ವಿಚಾರ ಕುರಿತು ರಾಮನಗರದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಡಿ.ಕೆ.ಸುರೇಶ್ ತಿರುಗೇಟು ನೀಡಿದ್ದಾರೆ.

ಹಿಂದೆ ಸರ್ಕಾರ ತೆಗೆಯುವ ಸಂದರ್ಭದಲ್ಲಿ ಯಾರು ನಾಯಕತ್ವ ವಹಸಿಕೊಂಡಿದ್ರು. ಅವ್ರ ಜೊತೆ ಸ್ವಾಮೀಜಿಗಳನ್ನ ಭೇಟಿ ಮಾಡಿರುವುದನ್ನು ಡಿಕೆ ಶಿವಕುಮಾರ್ ಪ್ರಸ್ತಾಪ ಮಾಡಿದ್ದಾರೆ. ಒಕ್ಕಲಿಗ ಸಮುದಾಯ ಸ್ವಾಭಿಮಾನಿಗಳು. ಯಾರನ್ನ ಯಾವ ಸಂದರ್ಭದಲ್ಲಿ ಏನು ಮಾಡಬೇಕು ಎಂಬುದು ಸಮುದಾಯಕ್ಕೆ ಗೊತ್ತಿದೆ ಎಂದು ಜೆಡಿಎಸ್‌ಗೆ ಟಾಂಗ್ ಕೊಟ್ಟಿದ್ದಾರೆ.

ಡಿ.ಕೆ.ಶಿವಕುಮಾರ್ ಒಂದು ಪಕ್ಷದ ರಾಜ್ಯಾಧ್ಯಕ್ಷರಾಗಿದ್ದಾರೆ. ಎಲ್ಲಾ ಸಮುದಾಯವನ್ನು ಒಟ್ಟಿಗೆ ತೆಗೆದುಕೊಂಡು ಹೋಗುವ ಜವಾಬ್ದಾರಿ ಇದೆ. ಸಮುದಾಯದ ಬೆಂಬಲ ಕೂಡ ಇದೆ. ಕುಮಾರಸ್ವಾಮಿ ರಾಜಕೀಯವಾಗಿ ಏನೇನೊ ಹೇಳ್ತಾ ಇರ್ತಾರೆ. ಅವರು ಹೇಳೋದು ಎಲ್ಲಾ ಸತ್ಯಾ ಇದ್ಯಾ? ದೇವೇಗೌಡರ ಕುಟುಂಬ ಹಿಂದಿನಿಂದಲೂ ಕೂಡ ಡಿ.ಕೆ.ಶಿವಕುಮಾರ್ ಮೇಲೆ ಹಗೆತನ ತೋರಿಸುತ್ತಿದೆ. ನಮಗೆ ಆ ಭಾವನೆ ಇಲ್ಲ ಎಂದು ಟಾಂಗ್ ಕೊಟ್ಟಿದ್ದಾರೆ.

ಸಮಾಜದ ಅಭಿವೃದ್ಧಿ ದೃಷ್ಟಿಯಿಂದ ನಾವು ಸಹಕಾರ ನೀಡುತ್ತಾ ಬಂದಿದ್ದೇವೆ. ಅವರು ಬೇರೆ ಬೇರೆ ವ್ಯಾಖ್ಯಾನ ಮಾಡುತ್ತಾದ್ದಾರೆ ಎಂದರೆ ಅದೆಲ್ಲದಕ್ಕೂ ನಾನು ಉತ್ತರ ಕೊಡಲ್ಲ ಎಂದರು. ಡಿಕೆಶಿ ಕೊತ್ವಾಲ್ ರಾಮಚಂದ್ರನ ಶಿಷ್ಯ ಎಂಬ ಹೆಚ್ ಡಿಕೆ ಹೇಳಿಕೆ ಬಗ್ಗೆ ಮಾತನಾಡಿ, ಇದು ಚುನಾವಣೆ ಸಂದರ್ಭ. ಈ ಎಲ್ಲಾ ಹೇಳಿಕೆಗಳಿಗೂ ಆಮೇಲೆ ಸಭೆ ಕರೆಯಲಿ ಉತ್ತರ ಕೊಡುತ್ತೇನೆ. ಈಗ ಅದರ ವಿಚಾರ ಬೇಡ ಎಂದಿದ್ದಾರೆ.

# ಒಳ್ಳೆಯ ಕೆಲಸ ಮಾಡಿದ್ದೇನೆಂದು ಹೇಳ್ತೀರಾ ಆದ್ರೆ, ಮತಗಟ್ಟೆಗೆ ಹೋದಾಗ ಮರೆತು ಬಿಡ್ತೀರಾ

**ಕಲಬುರಗಿ:** ಲೋಕಸಭಾ ಚುನಾವಣೆ ಹಿನ್ನಲೆ ಬಿಸಿಲ ನಾಡು ಕಲಬುರಗಿಯಲ್ಲಿ ಕಾಂಗ್ರೆಸ್ ಅಬ್ಬರದ ಪ್ರಚಾರ ನಡೆಸಿದ್ದು, ಈ ವೇಳೆ ಮಾತನಾಡಿದ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, 'ಕಾಂಗ್ರೆಸ್‌ನ 25 ಗ್ಯಾರಂಟಿಗಳಿದ್ದು, ಎಲ್ಲ ಭರವಸೆ ಈಡೇರಿಸುತ್ತೇವೆ. ಎಲ್ಲೇ ಕೇಳಿದರೂ ನಾನು ಒಳ್ಳೆಯ ಕೆಲಸ ಮಾಡಿದ್ದೇನೆಂದು ಹೇಳುತ್ತಿರಾ, ಆದರೆ, ಮತಗಟ್ಟೆಗೆ ಹೋದಾಗ ನಿಮಗೆ ಏನು ಅನಿಸುತ್ತೋ ಗೊತ್ತಿಲ್ಲ, ನಮ್ಮನ್ನೇ ಮರೆತು ಬಿಡ್ತೀರಾ ಎಂದು ಮಲ್ಲಿಕಾರ್ಜುನ ಖರ್ಗೆ ಬೇಸರ ವ್ಯಕ್ತಪಡಿಸಿದರು.

ಈ ಬಾರಿ ಕಾಂಗ್ರೆಸ್ ಅಭ್ಯರ್ಥಿ ರಾಧಾಕೃಷ್ಣಗೆ ವೋಟ್ ಕೊಟ್ಟು ನೋಡಿ. 5 ವರ್ಷಗಳಲ್ಲಿ ಕಲಬುರಗಿಯಲ್ಲಿ ಬದಲಾವಣೆ ಆಗುತ್ತದೆ. ನಾನು ಇನ್ನೂ ಸತ್ತಿಲ್ಲ, ಜನರ ಸೇವೆ



ಮಾಡಲು ಬದ್ಧನಾಗಿದ್ದೇನೆ. ಭಾಷಣದ ವೇಳ ಮಲ್ಲಿಕಾರ್ಜುನ ಖರ್ಗೆ ಭಾವುಕರಾದರು. 'ನನ್ನ ಗುರಿ ನಿಜವಾಗಿಯೂ ಕಲ್ಯಾಣ ಕರ್ನಾಟಕ ಮಾಡುವುದಾಗಿದೆ. ಕಲ್ಯಾಣ ಕರ್ನಾಟಕ ಭಾಗಕ್ಕೆ 371ಜೆ ಸ್ಥಾನಮಾನ ತಂದು ಕೊಟ್ಟಿದ್ದೇನೆ. ಈ ಮೂಲಕ ಸಂವಿಧಾನದ ಪುಸ್ತಕದಲ್ಲಿ ಕಲಬುರಗಿ ಹೆಸರು ಸೇರಿಸಿದ್ದೇನೆ ಎಂದರು.

ಇದರ ಜೊತೆಗೆ ಕೇಂದ್ರಿಯ ವಿಶ್ವ ವಿದ್ಯಾಲಯ, ಇಎಸ್ಐ, ಜವಳಿ ಪಾರ್ಕ್, ನ್ಯಾಷನಲ್ ಹೈವೇ ಎಲ್ಲವೂ ಮಾಡಿದ್ದೆ. ಬಿಜೆಪಿಯವರಿಗೆ ಈ ಭಾಗದ ಅಭಿವೃದ್ಧಿ ಬೇಕಾಗಿಲ್ಲ. ಈ ಭಾಗಕ್ಕೆ ಬಿಜೆಪಿ ಕೊಡುಗೆ ಶೂನ್ಯವಾಗಿದೆ. ನನ್ನ ಗುರಿ ಒಂದೇ ಈ ಭಾಗವನ್ನು ಅಭಿವೃದ್ಧಿ ಮಾಡುವ ಮೂಲಕ ಬಸವಣ್ಣನ, ಅಂಬೇಡ್ಕರ್ ತತ್ವ ಉಳಿಯಬೇಕು ಎನ್ನುವುದು. ಇದು ಕೇವಲ ರಾಧಕೃಷ್ಣ ಎಲೆಕ್ಷನ್ ಅಲ್ಲ, ಬದಲಾಗಿ ದೇಶದ ಸಂವಿಧಾನ, ಪ್ರಜಾಪ್ರಭುತ್ವ ಉಳಿಸುವ ಚುನಾವಣೆ. ಈಗಾಗಲೆ ಮೋದಿ ಎಲ್ಲ ಮಷಿನರಿ ಬಳಸಿಕೊಂಡು ಪ್ರಜಾಪ್ರಭುತ್ವ ಹಾಳು ಮಾಡುತ್ತಿದ್ದಾರೆ. ಅದನ್ನ ನಾವು ಉಳಿಸಬೇಕಾಗಿದೆ. ಅದಕ್ಕಾಗಿ ನೀವೆಲ್ಲಾ ಕಾಂಗ್ರೆಸ್‌ಗೆ ಮತ ನೀಡಿ ಎಂದರು.

## ಬೆಂಗಳೂರಿನಲ್ಲಿ ಐಪಿಎಲ್ ಪಂದ್ಯ

# ನಮ್ಮ ಮೆಟ್ರೋ ಸೇವೆ ಅವಧಿ ವಿಸ್ತರಣೆ



**ಬೆಂಗಳೂರು:** ಈಗಾಗಲೇ ಐಪಿಎಲ್ ಶುರುವಾಗಿದ್ದು, ಕ್ರಿಕೆಟ್ ಪ್ರೇಮಿಗಳು ಸಂತಸದಲ್ಲಿದ್ದಾರೆ. ಅದರಂತೆ ಬೆಂಗಳೂರಿನ ಚಿನ್ನಸ್ವಾಮಿ ಸ್ಟೇಡಿಯಂನಲ್ಲಿ ಏಪ್ರಿಲ್ 15, ಮೇ 4, 12 ಹಾಗೂ 18 ರಂದು ಐಪಿಎಲ್ ಪಂದ್ಯಾವಳಿಗಳನ್ನು ಆಯೋಜನೆ ಮಾಡಲಾಗಿದೆ. ಈ ಹಿನ್ನೆಲೆ ಐಪಿಎಲ್ ಪ್ರಿಯರಿಗಾಗಿ ಮೆಟ್ರೋ ಅವಧಿ ವಿಸ್ತರಣೆ ಮಾಡಿ ಬಿಎಂಆರ್‌ಸಿಎಲ್ ಆದೇಶ ಹೊರಡಿಸಿದೆ. ಪಂದ್ಯದ ವೇಳೆ ಮೆಟ್ರೋ ಸಂಚಾರದ ಅವಧಿಯನ್ನ ಮಧ್ಯರಾತ್ರಿ ಮಧ್ಯರಾತ್ರಿ 11.30 ವರೆಗೂ ವಿಸ್ತರಿಸಿದೆ.

ಇನ್ನು ಮೆಟ್ರೋ ನಿಲ್ದಾಣಗಳಲ್ಲಿ ರಿಟರ್ನ್ ಪೇಪರ್ ಟಿಕೆಟ್ ವಿತರಣೆ ಕೂಡ ಲಭ್ಯವಿದ್ದು, ಪಂದ್ಯದ ವೇಳೆ ಮಧ್ಯಾಹ್ನ 2 ಗಂಟೆಯಿಂದ ಎಲ್ಲಾ ನಿಲ್ದಾಣಗಳಲ್ಲಿ 50 ರೂಪಾಯಿ ಪೇಪರ್ ಟಿಕೆಟ್ ಸಿಗಲಿದೆ. ಕಬ್ಬನ್ ಪಾರ್ಕ್ ಮತ್ತು ಎಂ.ಜಿ ರಸ್ತೆ ಮೆಟ್ರೋ ನಿಲ್ದಾಣದಲ್ಲಿ ಪೇಪರ್ ಟಿಕೆಟ್‌ಗೆ ವ್ಯವಸ್ಥೆ ಮಾಡಲಾಗಿದೆ. ಪೇಪರ್ ಟಿಕೆಟ್ ಪಡೆದು ಎಲ್ಲಾ ಮೆಟ್ರೋ ನಿಲ್ದಾಣಕ್ಕೆ ಪ್ರಯಾಣ ಬೆಳೆಸಲು ಅವಕಾಶ ಇದೆ. ಆದರೆ, ಈ ಟಿಕೆಟ್ ರಾತ್ರಿ 8 ರಿಂದ ದಿನದ ಸೇವೆಗಳು ಕೊನೆಗೊಳ್ಳುವರೆಗೆ ಮಾತ್ರ ಮಾನ್ಯವಾಗಲಿದೆ.

ಕ್ಯೂಆರ್ ಕೋಡ್ ಟಿಕೆಟ್‌ಗಳು, ಸ್ಮಾರ್ಟ್ ಕಾರ್ಡ್‌ಗಳು ಮತ್ತು ಎನ್‌ಸಿಎಂಸಿ ಕಾರ್ಡ್‌ಗಳನ್ನು ಸಹ ಬಳಸಬಹುದು. ವಾಟ್ಸ್ ಆಪ್, ನಮ್ಮ ಮೆಟ್ರೋ ಆ್ಯಪ್, ಪೇಟಿಎಂ ಮೂಲಕ ಕ್ರಿಕೆಟ್ ಪಂದ್ಯದ ಆರಂಭಕ್ಕೆ ಮುಂಚಿತವಾಗಿ ಕ್ಯೂಆರ್ ಟಿಕೆಟ್‌ಗಳನ್ನು ಖರೀದಿಸಲು ಸಾರ್ವಜನಿಕರಿಗೆ ಅವಕಾಶ ಕಲ್ಪಿಸಲಾಗಿದೆ. ಟಿಕೆಟ್ ಕೌಂಟರ್‌ಗಳಲ್ಲಿ ಜನಸಂದಣಿಯನ್ನು ತಪ್ಪಿಸಲು ಈ ನಿರ್ಣಯ ಕೈಗೊಳ್ಳಲಾಗಿದ್ದು, ಪ್ರಯಾಣಿಕರು ಈ ಸೌಲಭ್ಯವನ್ನು ಬಳಸಿಕೊಳ್ಳಲು ನಮ್ಮ ಮೆಟ್ರೋ ಸೂಚಿಸಿದೆ.

# ಕೆಎಸ್ ಈಶ್ವರಪ್ಪ ನಾಮಪತ್ರ ಸಲ್ಲಿಕೆ; ನೋಟಿಸ್ ಸಾಧ್ಯತೆ

**ಶಿವಮೊಗ್ಗ:** ಬಿಜೆಪಿ ಬಂಡಾಯ ಅಭ್ಯರ್ಥಿ, ಮಾಜಿ ಸಚಿವ ಕೆಎಸ್ ಈಶ್ವರಪ್ಪ ಅವರು ಪಕ್ಷೇತರ ಅಭ್ಯರ್ಥಿಯಾಗಿ ಶಿವಮೊಗ್ಗ ಲೋಕಸಭೆ ಕ್ಷೇತ್ರದಲ್ಲಿ ಕಣಕ್ಕಿಳಿದಿದ್ದು, ನಿನ್ನೆ ನಾಮಪತ್ರ ಸಲ್ಲಿಸಿದರು. ಬೃಹತ ಮೆರವಣಿಗೆ ಮುಖಾಂತರ ಜಿಲ್ಲಾಧಿಕಾರಿಗಳ ಕಚೇರಿಗೆ ಬಂದು ಉಮೇದುವಾರಿಕೆ ಸಲ್ಲಿಸಿದರು.



ಪುತ್ರ ಕಾಂತೇಶ್‌ಗೆ ಹಾವೇರಿ ಲೋಕಸಭಾ ಕ್ಷೇತ್ರದ ಟಿಕೆಟ್ ಸಿಗದ ಹಿನ್ನೆಲೆಯಲ್ಲಿ ಅಸಮಾಧಾನಗೊಂಡಿರುವ ಬಿಜೆಪಿ ಹಿರಿಯ ಮುಖಂಡ ಕೆಎಸ್ ಈಶ್ವರಪ್ಪ ಅವರು ಶಿವಮೊಗ್ಗ ಕ್ಷೇತ್ರದಿಂದ ಪಕ್ಷೇತರ ಅಭ್ಯರ್ಥಿಯಾಗಿ ಸ್ಪರ್ಧಿಸಿದ್ದಾರೆ. ಆದರೆ ಕೆಎಸ್ ಈಶ್ವರಪ್ಪ ಅವರು ಹೇಳಿಕೊಂಡತೆ 'ರಾಜ್ಯ ಬಿಜೆಪಿಯಲ್ಲಿನ ಕುಟುಂಬ ರಾಜಕಾರಣದ ವಿರೋಧಿಸಿ ಸ್ಪರ್ಧೆ ಮಾಡುತ್ತಿದ್ದೇನೆ' ಎಂದಿದ್ದಾರೆ.

ಈ ಲೋಕಸಭೆ ಚುನಾವಣೆಯಲ್ಲಿ ಗೆದ್ದರೆ ನಾನು ನರೇಂದ್ರ ಮೋದಿಯವರಿಗೆ ಬೆಂಬಲ ನೀಡುತ್ತೇನೆ ಎಂದು ಕೆಎಸ್ ಈಶ್ವರಪ್ಪ ಅವರು ಈಗಾಗಲೆ ಹೇಳಿದ್ದಾರೆ. ಇನ್ನು ಪಕ್ಷದ ವಿರುದ್ಧ ಬಂಡಾಯವೆದ್ದು ಪಕ್ಷೇತರ ಅಭ್ಯರ್ಥಿಯಾಗಿ ನಾಮಪತ್ರ ಸಲ್ಲಿಕೆ ಮಾಡಿರುವ ಕೆಎಸ್ ಈಶ್ವರಪ್ಪ ಅವರಿಗೆ ಬಿಜೆಪಿ ನೋಟಿಸ್ ನೀಡುವ ಸಾಧ್ಯತೆ ಇದೆ.

ಶಿವಮೊಗ್ಗ ಕ್ಷೇತ್ರದ ಪಕ್ಷೇತರ ಅಭ್ಯರ್ಥಿಯಾಗಿ ನಾಮಪತ್ರ ಸಲ್ಲಿಸಿದ್ದೇನೆ. ಪ್ರತಿ ಮನೆ ಮನೆಗೆ ಹೋಗಿ ಈಶ್ವರಪ್ಪ ಏಕೆ ಚುನಾವಣೆಗೆ ನಿಂತಿದ್ದಾರೆ, ಏನು ಅನ್ಯಾಯ ಆಗಿದೆ ಅಂತ ನಮ್ಮ ಕಾರ್ಯಕರ್ತರು ತಿಳಿಸುತ್ತಾರೆ. ಅಪ್ಪ ಮಕ್ಕಳ ಕೈಯಲ್ಲಿ ಪಕ್ಷ ಏಕೆ ಇದೆ? ಚುನಾವಣೆ ಬಳಿಕ ನಂತರ ಬಿಜೆಪಿಯಲ್ಲಿ ಕೆಲವು ಬದಲಾವಣೆ ಆಗುತ್ತದೆ. ಪಕ್ಷ ಶುದ್ದೀಕರಣ ಆಗುವ ವಿಶ್ವಾಸ ಇದೆ ಎಂದು ನಾಮಪತ್ರ ಸಲ್ಲಿಕೆ ಬಳಿಕ ಬಂಡಾಯ ಅಭ್ಯರ್ಥಿ ಕೆ.ಎಸ್.ಈಶ್ವರಪ್ಪ ಹೇಳಿದರು.

## ಆಸ್ತಿ, ಸಾಲ ಇಲ್ಲ

**ಶ್ರೀರಾಮುಲು ಆಸ್ತಿ ವಿವರ ಇಲ್ಲಿದೆ**

● **ಒಟ್ಟು ಆಸ್ತಿಯ ಮೌಲ್ಯ**; 45.88 ಕೋಟಿ ರೂ. ● ನಗದು: 5.50 ಲಕ್ಷ ರೂ. ● ಒಟ್ಟು ಚರಾಸ್ತಿ: 6.22 ಕೋಟಿ ರೂ. ● ಸ್ಥಿರಾಸ್ತಿ: 39.65 ಕೋಟಿ ರೂ. ● ವಾಹನ: ಬಿಎಂಡಬ್ಲ್ಯು, ಇನೋವಾ ಕಾರು, ಅಶೋಕ್ ಲೇಲ್ಯಾಂಡ್ ಬಸ್ ● ಚಿನ್ನ: 4.27 ಕೆ.ಜಿ. ● ಬೆಳ್ಳಿ: 9.50 ಕೆ.ಜಿ. ● ಸಾಲ: 6.69 ಕೋಟಿ ರೂ. ● ಅಪರಾಧ ಪ್ರಕರಣ: 4

**ಶ್ರೀರಾಮುಲು ಪತ್ನಿ ಆಸ್ತಿ ವಿವರ ಇಲ್ಲಿದೆ**

● **ಒಟ್ಟು ಆಸ್ತಿಯ ಮೌಲ್ಯ:** 22.57 ಕೋಟಿ ರೂ. ● ನಗದು: 2.50 ಲಕ್ಷ ರೂ. ● ಒಟ್ಟು ಚರಾಸ್ತಿ: 2.28 ಕೋಟಿ ರೂ. ● ಸ್ಥಿರಾಸ್ತಿ: 20.29 ಕೋಟಿ ರೂ. ● ವಾಹನ: ಇಲ್ಲ ● ಚಿನ್ನ: 2.33 ಕೆ.ಜಿ

● ಬೆಳ್ಳಿ: ಇಲ್ಲ ● ಸಾಲ: ಇಲ್ಲ

## ಟ್ರಸ್ಟ್‌ಗೆ ಸಾಲ ಕೊಟ್ಟಿದ್ದಾರೆ

ಉಳಿತಾಯ ಖಾತೆಯಲ್ಲಿ 3,04,81,874 ರೂ., ಪತ್ನಿ ಖಾತೆಯಲ್ಲಿ 8,07,552ರೂ, ಅವಿಭಕ್ತ ಕುಟುಂಬದ್ದು 2,15,34,528 ರೂ, ಅವಿಭಕ್ತ ಕುಟುಂಬದ ಚಾಲ್ತಿ ಖಾತೆಯಲ್ಲಿ 23,50,458 ರೂ ಇರುವುದಾಗಿ ತಿಳಿಸಿದ್ದಾರೆ. ವಿವಿಧ ಬಾಂಡ್ ಗಳಲ್ಲಿನ ಹೂಡಿಕೆ 5 ಲಕ್ಷ ರೂ, ಪೋಸ್ಟ್ ಹೂಡಿಕೆ- 27,400 ರೂಪಾಯಿ, ಇನ್ಶುರೆನ್ಸ್ ಪಾಲಿಸಿ 21,25,219, ಇನ್ನು ಶಿರಸಿ ದೀನದಯಾಳ್ ಟ್ರಸ್ಟ್‌ಗೆ 24,50,000 ರೂ. ಸಾಲ ನೀಡಿದ್ದಾರೆ.

## ಬಿಜೆಪಿ ಪ್ರಚಾರ ತಯಾರಿ

ನೆರೆಯ ರಾಷ್ಟ್ರವಾದ ಬಾಂಗ್ಲಾದೇಶ ಆಡಳಿತಾರೂಢ ಶೇಖ್ ಹಸೀನಾ ನೇತೃತ್ವದ ಅವಾಮಿ ಲೀಗ್ ಹಾಗೂ ನೇಪಾಳದ ಪ್ರಮುಖ ರಾಜಕೀಯ ಪಕ್ಷಗಳೂ ಆಹ್ವಾನ ಪಟ್ಟಿಯಲ್ಲಿವೆ. ಇನ್ನು ಈ ಪ್ರಚಾರದಲ್ಲಿ ಭಾಗವಹಿಸುವ ನಾಯಕರು ಪ್ರಧಾನಿ ಮೋದಿ, ಗೃಹಸಚಿವ ಅಮಿತ್ ಶಾ, ಜೆಪಿ ನಡ್ಡಾ ಪರ ಪ್ರಚಾರದಲ್ಲಿ ಭಾಗವಹಿಸಲಿದ್ದಾರೆ ಎಂದು ಹೇಳಲಾಗಿದೆ.

## ಸಿಡಿಗುಟ್ಟಿದ ಮಮತಾ ಬ್ಯಾನರ್ಜಿ

ಅವರ ಹೇಳಿಕೆಯನ್ನು ಸುಳ್ಳಿನ ಪರಮಾವಧಿ ಎಂದು ಬಣ್ಣಿಸಿದೆ.

'ರಾಮೇಶ್ವರಂ ಕೆಫೆ ಸ್ಫೋಟ ಪ್ರಕರಣದಲ್ಲಿ ಪೂರ್ವ ಮೇದಿನಿಪುರ್ ನಲ್ಲಿ ಕೇಂದ್ರ ಗುಪ್ತಚರ ಸಂಸ್ಥೆಗಳು ಹಾಗೂ ಪಶ್ಚಿಮ ಬಂಗಾಳ ಪೊಲೀಸರಿಂದ ನಡೆದ ಜಂಟಿ ಕಾರ್ಯಾಚರಣೆಯಲ್ಲಿ ಇಬ್ಬರು ಶಂಕಿತ ಆರೋಪಿಗಳನ್ನು ಬಂಧಿಸಲಾಗಿದೆ.

'ಕೇಂದ್ರೀಯ ಏಜೆನ್ಸಿಗಳು ಪಶ್ಚಿಮ ಬಂಗಾಳದ ಪಾತ್ರವನ್ನು ಗುರುತಿಸಿವೆ. ಪಶ್ಚಿಮ ಬಂಗಾಳ ಯಾವತ್ತೂ ಕೂಡ ಉಗ್ರರಿಗೆ ಅಡಗುದಾಣವಾಗಿರಲಿಲ್ಲ. ರಾಜ್ಯದ ಜನರ ಸುರಕ್ಷತೆಗೆ ಪೊಲೀಸರು ಸದಾ ಕಟಿಬದ್ಧರಾಗಿರುತ್ತಾರೆ,' ಎಂದು ಬಂಗಾಳ ಪೊಲೀಸ್ ನ ಎಕ್ಸ್ ಖಾತೆಯಿಂದ ಪೋಸ್ಟ್ ಆಗಿದೆ.

## ಕಾಂಗ್ರೆಸ್ ಸೇರ್ಪಡೆ

ದಾವಣಗೆರೆ ಜಿಲ್ಲೆ ಜಗಳೂರು ಕ್ಷೇತ್ರದ ಮಾಜಿ ಶಾಸಕ ಟಿ.ಗುರುಸಿದ್ದನಗೌಡ ಅವರ ನಿವಾಸಕ್ಕೆ ಸಚಿವ ಎಸ್.ಎಸ್. ಮಲ್ಲಿಕಾರ್ಜುನ್ ಭೇಟಿ ನೀಡಿ ಅವರನ್ನು ಕಾಂಗ್ರೆಸ್ ಗೆ ಸೇರ್ಪಡೆ ಮಾಡಿಕೊಂಡರು. ಇನ್ನು ಇದೇ ವೇಳೆ ದಾವಣಗೆರೆ ಕ್ಷೇತ್ರದ ಬಿಜೆಪಿ ಟಿಕೆಟ್ ಆಕಾಂಕ್ಷಿಯಾಗಿದ್ದ ಗುರುಸಿದ್ದನಗೌಡ ಪುತ್ರ ಡಾ.ರವಿಕುಮಾರ್ ಸಹ ಕಾಂಗ್ರೆಸ್ ಸೇರಿದರು. ಈ ಮೂಲಕ ಬಿಜೆಪಿಗೆ ಆಘಾತವಾಗಿದೆ.

ಈ ವೇಳೆ ಮಾತನಾಡಿರುವ ಸಚಿವ ಎಸ್ ಎಸ್ ಮಲ್ಲಿಕಾರ್ಜುನ, ದಾವಣಗೆರೆ ಬಿಜೆಪಿಯಲ್ಲಿ ಉಸಿರು ಗಟ್ಟುವ ವಾತಾವರಣ ಇದೆ. ಇದೇ ಕಾರಣಕ್ಕೆ ಕಟ್ಟಾ ಆರ್ ಎಸ್ ಎಸ್ ವ್ಯಕ್ತಿ ಆಗಿದ್ದ ಗುರುಸಿದ್ದನಗೌಡರು ಕಾಂಗ್ರೆಸ್ ಸೇರಿದ್ದಾರೆ. ಗುರುಸಿದ್ದನಗೌಡ್ರು ಮತ್ತು ಅವರ ಬೆಂಬಲಿಗರು ಕಾಂಗ್ರೆಸ್ ಪಕ್ಷ ಸೇರಿರುವುದರಿಂದ ನಮಗೆ ಆನೆ ಬಲ ಬಂದಂತಾಗಿದೆ.ಅವರ ಮಾರ್ಗದರ್ಶನದಲ್ಲಿ ನಾವುಗಳು ಮುನ್ನಡೆಯುತ್ತವೆ ಎಂದರು.

ಕಾಂಗ್ರೆಸ್ ಸೇರ್ಪಡೆ ಬಳಿಕ ಮಾತನಾಡಿದ ಮಾಜಿ ಶಾಸಕ ಟಿ.ಗುರುಸಿದ್ದನಗೌಡ, ಮಾಜಿ ಸಿಎಂ ಯಡಿಯೂರಪ್ಪ ಕೆಜೆಪಿ ಮೂಡ್ ನಿಂದ ಹೊರಬಂದಿಲ್ಲ. ಸಂಸದ ಸಿದ್ದೇಶ್ವರ ಸರ್ವಾಧಿಕಾರಿ ವರ್ತನೆಯಿಂದ ನನಗೆ ಬೇಸರ ಆಗಿದೆ. ಇದೇ ಕಾರಣಕ್ಕೆ ಬಿಜೆಪಿ ಬಿಟ್ಟು ನಾನು ಕಾಂಗ್ರೆಸ್ ಸೇರ್ಪಡೆಯಾಗಿದ್ದೇನೆ. 20 ವರ್ಷಗಳಿಂದ ಸಂಸದರಾಗಿರುವ ಸಿದ್ದೇಶ್ವರ ನಮಗೆ ಟಿಕೆಟ್ ಕೊಡಬೇಕಿತ್ತು. ಈ ಬಾರಿ ನನ್ನ ಪುತ್ರ ಡಾ.ರವಿಕುಮಾರ್ ಗೆ ಬಿಜೆಪಿ ಟಿಕೆಟ್ ಕೊಡಬೇಕಿತ್ತು. ಸಿದ್ದೇಶ್ವರಗೆ ವಯಸ್ಸಾಗಿದೆ, ಹೀಗಾಗಿ ತಮ್ಮ ಪತ್ನಿಗೆ ಟಿಕೆಟ್ ಕೊಡಿಸಿದ್ದಾರೆ. ದಾವಣಗೆರೆ ಜಿಲ್ಲೆಯ ಬಿಜೆಪಿಯನ್ನು ತಮ್ಮ ಹಿಡಿತದಲ್ಲಿ ಇಟ್ಟುಕೊಂಡಿದ್ದಾರೆ ಎಂದು ಕಿಡಿಕಾರಿದರು.

## ಅಳಿಯ ಕೂಡ ಕೋಟ್ಯಾಧೀಶ

16.32 ಕೋಟಿ ಮೌಲ್ಯದ ಕೃಷಿಯೇತರ ಜಮೀನು ಕೂಡ ಇವರ ಹೆಸರಲ್ಲಿದೆ. 2.59 ಕೋಟಿಯ ವಾಣಿಜ್ಯ ಕಟ್ಟಡ ಕೂಡ ಇದೆ. ಇನ್ನು ರಾಧಾಕೃಷ್ಣ ಅವರ ಪತ್ನಿ ಡಾ.ಜಯಶ್ರೀ ಕೂಡ 13.03 ಕೋಟಿ ಆಸ್ತಿ ಒಡತಿಯಾಗಿದ್ದಾರೆ. ಇವರ ಬಳಿ 810 ಗ್ರಾಂ ಚಿನ್ನ, 11 ಕೆ ಜಿ ಬೆಳ್ಳಿ ಇದೆ.

ಇನ್ನು ಇಂದು ಕಲಬುರಗಿ ನಗರದ ಎನ್‌ವಿ ಕಾಲೇಜು ಮೈದಾನದಲ್ಲಿ ಕಾಂಗ್ರೆಸ್ ಬೃಹತ್ ಸಮಾವೇಶ ಆಯೋಜಿಸಿತ್ತು. ಸಮಾವೇಶವನ್ನ ಜ್ಯೋತಿ ಬೆಳಗಿಸುವುದರ ಮೂಲಕ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಕೆಪಿಸಿಸಿ ಅಧ್ಯಕ್ಷ ಡಿಕೆ ಶಿವಕುಮಾರ್ ಉದ್ಘಾಟಿಸಿದರು. ಇದೇ ವೇಳೆ ಮಾತನಾಡಿದ್ದ ಮಲ್ಲಿಕಾರ್ಜುನ ಖರ್ಗೆ, 'ಪ್ರಧಾನಿ ವಿರುದ್ಧ ವಾಗ್ದಾಳಿ ನಡೆಸಿದರು. ನಾನು ಮಂತ್ರಿಯಾಗಿದ್ದಾಗ ಕಲ್ಯಾಣ ಕರ್ನಾಟಕ ಭಾಗ ಸೇರಿದಂತೆ ರಾಜ್ಯಕ್ಕೆ ಸಾಕಷ್ಟು ಕೊಡುಗೆಗಳನ್ನ ಕೊಟ್ಟಿದ್ದೇನೆಂದು ಖರ್ಗೆ ಹೇಳಿದರು. ನಮ್ಮದು ಇನ್ನೂ 25 ಗ್ಯಾರಂಟಿಗಳಿದ್ದು, ಅದನ್ನ ಮಾಡಿ ತೋರಿಸುತ್ತೇವ., ಖರ್ಗೆ ಒಳ್ಳೆಕೆಲಸ ಮಾಡಿದ್ದಾರೆಂದು ಹೇಳ್ತಾರೆ. ಆದರೆ, ಮತಗಟ್ಟೆಗೆ ಹೋದಾಗ ಏನು ಅನ್ನಸ್ತೋ ಗೊತ್ತಿಲ್ಲ, ನಮ್ಮನ್ನೆ ಮರೆತು ಬಿಡ್ತಾರೆ. ನಾನಿನ್ನು ಸತ್ತಿಲ್ಲ, ಬದುಕಿದ್ದೇನೆ. ಕೆಲಸ ಮಾಡಲು ಬದ್ಧನಾಗಿದ್ದೇನೆಂದು ಖರ್ಗೆ ಭಾವುಕರಾದರು. ಅದೇನೆ ಇರಲಿ ಕಾಂಗ್ರೆಸ್ ಗ್ಯಾರಂಟಿ ವರ್ಸಸ್ ಮೋದಿ ಗ್ಯಾರಂಟಿ ಮಧ್ಯೆ ಇದೀಗ ವಾರ್ ಶುರುವಾಗಿದ್ದು, ಈ ಬಾರಿ ಲೋಕಸಭಾ ಚುನಾವಣೆ ಮೇಲೆ ಯಾವ ಪ್ರಭಾವ ಬೀರುತ್ತವೆ ಕಾದು ನೋಡಬೇಕು.

## ಅನುಮಾನವೆಂದ ಸಿಎಂ

ಅದೆಲ್ಲಾ ಹೈಕಮಾಂಡ್ ನಿರ್ಧಾರವನ್ನು ಅವಲಂಬಿಸಿರುತ್ತದೆ. ಹೈಕಮಾಂಡ್ ನಿರ್ಧರಿಸಿದರೆ ನಾನೇ ಮುಂದುವರಿಯುತ್ತೇನೆ. ಇಲ್ಲವಾದಲ್ಲಿ ಹೈಕಮಾಂಡ್ ನಿರ್ಧಾರದಂತೆ ನಡೆಯುತ್ತೇನೆ ಎಂದು ಸಿದ್ದರಾಮಯ್ಯ ಹೇಳಿದರು.

ನಾಲ್ಕು ವರ್ಷಗಳ ನಂತರ ಚುನಾವಣಾ ರಾಜಕೀಯದಲ್ಲಿ ಉಳಿಯುವುದಿಲ್ಲ. ಆದರೆ ರಾಜಕೀಯದಲ್ಲಿ ಸಕ್ರಿಯವಾಗಿರುತ್ತೇನೆ ಎಂದು ಕಾಂಗ್ರೆಸ್ ಹಿರಿಯ ನಾಯಕ ಪುನರುಚ್ಚರಿಸಿದ್ದಾರೆ.

## ಪತ್ರಕರ್ತರ ಸಂಘದಿಂದ ಸನ್ಮಾನ

ಶಿವಾನಂದ ತಗಡೂರು ಅವರು ಅಧ್ಯಕ್ಷರಾದ ಮೇಲೆ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘವು ಹೊಸ ರೂಪ ಪಡೆದು, ಕ್ರಿಯಾಶೀಲವಾಗಿ ಪತ್ರಕರ್ತರ ಶ್ರೇಯೋಭಿವೃದ್ದಿಗೆ ತಕ್ಕ ಚಟುವಟಿಕೆಗಳನ್ನು ಹಮ್ಮಿಕೊಳ್ಳುತ್ತಿರುವುದು ನಿಜಕ್ಕೂ ಶ್ಲಾಘನೀಯ ಎಂದರು.

ಸಮಾರಂಭದಲ್ಲಿ ಪ್ರಸ್ತಾವಿಕ ಮಾತುಗಳನ್ನಾಡಿ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಅವರು, ಗಂಗಾಧರ ಮೊದಲಿಯಾರ್‌ರವರು ಸಿನಿಮಾ ಪತ್ರಿಕೋದ್ಯಮದಲ್ಲಿ ತನ್ನದೇ ಆದ ಛಾಪು ಮೂಡಿಸಿದವರು. ಅವರು ಪತ್ರಿಕೋದ್ಯಮದ ಜೊತೆ ಜೊತೆಗೇ 18 ಸಾಹಿತ್ಯ ಕೃತಿಗಳನ್ನು ರಚಿಸಿರುವುದು ಅವರ ನೈಜ ಸಾಮರ್ಥ್ಯಕ್ಕೆ ಸಾಕ್ಷಿ, ಅಷ್ಟೇ ಅಲ್ಲದೇ, ಕಾರ್ಯನಿರತ ಪತ್ರಕರ್ತರ ಸಂಘದಲ್ಲಿ ನಿಷ್ಠೆಯಿಂದ ತಮ್ಮ ಜವಾಬ್ದಾರಿಯನ್ನು ನಿರ್ವಹಿಸಿದ್ದಾರೆ ಎಂದರು. ಮೊದಲಿಯಾರ ಅವರೊಳಗೊಬ್ಬ ಪತ್ರಕರ್ತ, ಸಂಘಟಕ ಅಷ್ಟೆ ಅಲ್ಲ, ಸಾಹಿತಿಯೂ ಇದ್ದಾನೆ

## ಮೊದಲನೇ ಪುಟದಿಂದ...

ಎಂದರು.

ಹಿರಿಯ ಪತ್ರಕರ್ತರಾದ ಕಂ.ಕ. ಮೂರ್ತಿ ಮಾತನಾಡಿ, ಕೆ.ಯು.ಡಬ್ಲ್ಯು.ಜೆ. ಕಳೆದ ಹಲವಾರು ವರ್ಷಗಳಿಂದ ಪತ್ರಕರ್ತರಿಗೆ ಸಂಪರ್ಕ ಸೇತುವೆಯಾಗಿ ಪ್ರಾಮಾಣಿಕವಾಗಿ ಕಾರ್ಯನಿರ್ವಹಿಸುತ್ತಿದೆ. ಅದಕ್ಕೆ ಪದಾಧಿಕಾರಿಗಳ ನಿಸ್ವಾರ್ಥ ಮನೋಭಾವವೇ ಕಾರಣ. ಅಷ್ಟೇ ಅಲ್ಲದೇ, ಸಂಘವು ರಾಜ್ಯಾದಾದ್ಯಂತ ಕ್ರಿಯಾಶೀಲ ಚಟುವಟಿಕೆಗಳ ಮೂಲಕ ಬಾಂಧವ್ಯ ಬೆಸೆಯುವ ಕೊಂಡಿಯಂತೆ ತನ್ನ ಬದ್ದತೆಯನ್ನು ದಿನದಿಂದ ದಿನಕ್ಕೆ ಹೆಚ್ಚಿಸಿಕೊಂಡಿರುವುದು ಅಭಿನಂದನಾರ್ಹ. ಕೆಯುಡಬ್ಲ್ಯುಜೆ ಕ್ರೀಯಾಶೀಲತೆ ವೃತ್ತಿನಿಷ್ಠ ಪತ್ರಕರ್ತರ ಪಾಲಿಗೆ ನಿಜಕ್ಕೂ ಹೆಮ್ಮೆಯ ವಿಷಯ ಎಂದರು.

ಇದೇ ಸಂದರ್ಭದಲ್ಲಿ ಗಂಗಾಧರ ಮೊದಲಿಯಾರ್ ಅವರ ಪತ್ನಿ ಮಾಳವಿಕಾ ಅವರನ್ನು ಸಮಾರಂಭದಲ್ಲಿ ಗೌರವಿಸಲಾಯಿತು.

ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ ಜೆ.ಸಿ. ಲೋಕೇಶ ಸ್ವಾಗತಿಸಿದರು. ಕೊನೆಯಲ್ಲಿ ರಾಜ್ಯ ಕಾರ್ಯಕಾರಿ ಸಮಿತಿ ಸದಸ್ಯ ಸೋಮಶೇಖರ ಗಾಂಧಿ ವಂದನಾರ್ಪಣೆ ಮಾಡಿದರು. ಬೆಂಗಳೂರು ನಗರ ಜಿಲ್ಲಾ ಪ್ರಧಾನ ಕಾರ್ಯದರ್ಶಿ ನರೇಂದ್ರ ಪಾರೆಕಟ್, ರಾಜ್ಯ ಕಾರ್ಯಕಾರಿ ಸಮಿತಿ ಸದಸ್ಯ ಆರ್ .ದೇವರಾಜ್, ನಗರ ಘಟಕದ ಶಿವರಾಜ್, ಶರಣ ಬಸಪ್ಪ ಹಾಜರಿದ್ದರು.

**ಚಿನ್ನದ ಪದಕದ ವಿದ್ಯಾರ್ಥಿಯಾಗಿದ್ದೆ :** ಮೈಸೂರಿನಲ್ಲಿ ಚಿನ್ನದ ಪದಕದೊಂದಿಗೆ ಎಂ.ಎ ಕನ್ನಡ ಮುಗಿಸಿದ್ದ ಗಂಗಾಧರ ಮೊದಲಿಯಾರ್ ಅವರು ಸಂಯುಕ್ತ ಕರ್ನಾಟಕ ಪತ್ರಿಕೆಯ ಮೂಲಕ 1976ರಲ್ಲಿ ಪತ್ರಿಕೋದ್ಯಮಕ್ಕೆ ಪದಾರ್ಪಣೆ ಮಾಡಿದವರು. ಅಲ್ಲಿ ನಾಲ್ಕು ವರ್ಷ ವೃತ್ತಿ ಅನುಭವ ಗಳಿಸಿ, ಪ್ರಜಾವಾಣಿ ಬಳಗದಲ್ಲಿ ಸುಮಾರು ನಾಲ್ಕು ದಶಕಗಳ ಕಾಲದ ಸುದೀರ್ಘಾವಧಿ ಸೇವೆ ಸಲ್ಲಿಸಿದವರು. ತುಮಕೂರಿನಲ್ಲಿ ವರದಿಗಾರರಾಗಿ ಸೇವೆ ಸಲ್ಲಿಸಿದ ಸಂದರ್ಭದಲ್ಲಿ ನಕ್ಸಲ್ ಚಟುವಟಿಕೆ ಬಗ್ಗೆ ಬರೆದ ವರದಿಗಳ ಹಿನ್ನೆಲೆಯಲ್ಲಿ ಆಗಿನ ಜಿಲ್ಲಾಡಳಿತ ಕೆಂಗಣ್ಣಿಗೆ ಗುರಿಯಾಗಿದ್ದನ್ನು ಅವರು ನೆನಪಿಸಿಕೊಂಡರು.

**ರಾಜ್‌ಕುಮಾರ್ ಮೂಗಿನ ಸುದ್ದಿ ವಿವಾದ :** ಸಿನಿಮಾ ಕುರಿತು ಬರೆದ ವರದಿ ಮಿಸ್ ಫೈರ್ ಆಗಿ ಡಾ. ರಾಜ್ ಕುಟುಂಬದಿಂದ ಸಂಕಷ್ಟಕ್ಕೂ ಗುರಿಯಾದೆ. ತಾನು ರಾಜ್‌ಕುಮಾರ್‌ರವರ ಮೂಗಿನ ಕುರಿತು ಟೀಕಿಸಿ ಬರೆದಿಲ್ಲ, ಬಸವಣ್ಣ ಸಿನಿಮಾಗೆ ಬೇರೊಬ್ಬ ನಟನ ಮೂಗಿನ ಕುರಿತಾಗಿ ಬರೆದದ್ದನ್ನು ಡಾ. ರಾಜ್ ಬಳಗದ ಕೆಲವರು ಅವರ ಬಗ್ಗೆ ಬರೆದದ್ದೆಂದು ತಪ್ಪಾಗಿ ಅರ್ಥೈಸಿ ತನಗೆ ಪ್ರಾಣ ಬೆದರಿಕೆಯ ತೊಂದರೆಕೊಟ್ಟರು. ಆದರೆ ಆಗ ತಾನು ಕಾರ್ಯನಿರ್ವಹಿಸಿದ್ದ ಪತ್ರಿಕಾ ಸಂಸ್ಥೆಯ ಮಾಲಿಕರು ತನ್ನ ಜೊತೆ ನಿಂತು, ಧೈರ್ಯ ತುಂಬಿದ ನಿಲುವನ್ನು ಮೊದಲಿಯಾರ್ ರವರು ತಮ್ಮ ವೃತ್ತಿ ಜೀವನದ ಮರೆಯದ ಘಟನೆ ಎಂದು ಹೇಳಿಕೊಂಡರು.

## ಅಪಘಾತ

ಸಿಮೆಂಟ್ ಸಾಗಿಸುತ್ತಿದ್ದ ಲಾರಿ ಜಮಖಂಡಿಯಿಂದ ವಿಜಯಪುರಕ್ಕೆ ಬರುತ್ತಿತ್ತು. ಅರ್ಜುಣಗಿ ಗ್ರಾಮದ ಬಳಿ ಕಾರು ಮತ್ತು ಲಾರಿ ಮುಖಾಮುಖಿ ಡಿಕ್ಕಿಯಾಗಿದ್ದು, ಕಾರಿನಲ್ಲಿದ್ದ ನಾಲ್ವರು ಸ್ಥಳದಲ್ಲೇ ಮೃತಪಟ್ಟಿದ್ದಾರೆ.

ಅಪಘಾತ ಸ್ಥಳಕ್ಕೆ ವಿಜಯಪುರ ಎಸ್ ಪಿ ಋಷಿಕೇಶ ಸೋನವಣೆ ಭೇಟಿ ನೀಡಿದ್ದಾರೆ. ಬಬಲೇಶ್ವರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.

## ಪ್ರಿಯತಮ

ಈ ವೇಳೆ ಕಳೆದ ಎರಡು ತಿಂಗಳ ಹಿಂದೆ ಮೈಸೂರಿನ ಮೇಟಗಳ್ಳಿ ಪೊಲೀಸ್ ಠಾಣೆ ವ್ಯಾಪ್ತಿಯ ಬಿಎಮ್ ಸಿ ನಗರದ ರುಕ್ಸಾನ 21 ಕಾಣೆಯಾಗಿದ್ದರು. ಈ ಬಗ್ಗೆ ಪೋಷಕರು ದೂರು ದಾಖಲಿಸಿದ್ದರು. ಕಾಣೆಯಾಗಿದ್ದ ರುಕ್ಸಾನಗೂ ತುಮಕೂರಿನ ದೊಡ್ಡಗುಣಿ ಬಳಿ ಸಿಕ್ಕ ಶವಕ್ಕೂ ಸಾಮ್ಯತೆ ಇರುವ ಬಗ್ಗೆ ಪೊಲೀಸರಿಗೆ ಅನುಮಾನ ಬಂದಿದೆ. ಕೂಡಲೇ ರುಕ್ಸಾನ ತಾಯಿ ಸಂಬಂಧಿಕರನ್ನ ಕರೆಸಿ ಶವ ತೋರಿಸಿದಾಗ ಕಾಲುಂಗರ ಹಾಗೂ ಬಟ್ಟೆಯಿಂದ ಈಕೆ ರುಕ್ಸಾನ ಎನ್ನುವುದು ಖಚಿತವಾಗಿದೆ. ಅಲ್ಲದೇ ರುಕ್ಸಾನ ಚಲನವಲನ ಹಾಗೂ ಆಕೆ ಯಾರನ್ನೋ ಇಷ್ಟ ಪಡುತ್ತಿದ್ದಳು ಎನ್ನುವ ವಿಚಾರ ಪೋಷಕರು ಪೊಲೀಸರಿಗೆ ಮಾಹಿತಿ ನೀಡಿದ್ದಾರೆ.

ಇನ್ನು ಮೈಸೂರಿನ ಮೇಟಗಳ್ಳಿ ಪ್ರಕರಣ ಒಂದಾದರೆ, ಮತ್ತೊಂದು ಒಂದು ತಿಂಗಳ ಗಂಡು ಮಗು ನೆಲಮಂಗಲ ಬಳಿ ಯಾರೋ ಬಿಸಾಡಿ ಹೋಗಿರುವುದು ಕೂಡ ಪ್ರಕರಣ ದಾಖಲಾಗಿತ್ತು. ಈ ಬಗ್ಗೆಯೂ ಪೊಲೀಸರು ತನಿಖೆ ಕೈಗೊಂಡಿದ್ದರು. ಇದೆಲ್ಲಾ ಆಯಾಮಗಳಲ್ಲೂ ಪೊಲೀಸರು ತನಿಖೆ ಚುರುಕುಗೊಳಿಸಿದಾಗ ಆರೋಪಿ ಯಾರು , ಯಾಕೆ ಕೊಲೆ ಮಾಡಿದ ಎನ್ನುವುದು ಬಯಲಿಗೆ ಬಂದಿದೆ. ಮೃತ ರುಕ್ಸಾನ ಇನ್ನೂ 21 ವರ್ಷದ ಯುವತಿ, ಮೈಸೂರಿನಲ್ಲಿ ಪೇಯಿಂಟ್ ಕಂಪನಿಯೊಂದರಲ್ಲಿ ಕೆಲಸ ಮಾಡಿ, ಪ್ರತಿದಿನ ರಾತ್ರಿಗೆ ಮನೆ ಸೇರುತ್ತಿದ್ದಳು. ಈ ನಡುವೆ ಪೇಯಿಂಟ್ ಕಂಪನಿಯಲ್ಲಿ ಪ್ರದೀಪ್ ನಾಯಕ್ ಎಂಬ ವ್ಯಕ್ತಿ ಪರಿಚಯ ಆಗಿದ್ದಾನೆ. ಆತ ಮೂಲತಃ ಚಿಕ್ಕಮಾಲೂರು ಜಿಲ್ಲೆಯ ಕಡೂರಿನವ, ಮೈಸೂರಿನಲ್ಲಿ ಕೆಲಸ ಮಾಡಿಕೊಂಡಿದ್ದ. ಅಲ್ಲದೇ ಈತನಿಗೆ ಮದುವೆಯಾಗಿ ಮಕ್ಕಳು ಕೂಡ ಇದ್ದಾರಂತೆ.

ಹೀಗಿರುವಾಗ ರುಕ್ಸಾನ , ಪ್ರದೀಪ್ ನಾಯಕ್ ಮೇಲೆ ಸ್ನೇಹ ಬೆಳಸಿ, ಮುಂದೆ ಪ್ರೀತಿ ಮಾಡುತ್ತಿರುವುದಾಗಿ ಹೇಳಿದ್ದಳಂತೆ. ಆದರೆ, ಪ್ರದೀಪ್ ನಾಯಕ್, 'ನಾನು ಮದುವೆ ಆಗಿದಿನಿ ಅಂದರೂ ಕೂಡ, ಇರಲಿ ಪರವಾಗಿಲ್ಲ ನಿಮ್ಮ ಜೊತೆ ನಾನು ಇರುತ್ತಿನಿ ಎಂದಿದ್ದಳಂತೆ. ಮೂರ್ನಾಲ್ಕು ವರ್ಷಗಳ ಕಾಲ ಪ್ರೀತಿ ಎಂದು ತಿರುಗಿಕೊಂಡು ಇದ್ದರಂತೆ. ಈ ನಡುವೆ ಪ್ರದೀಪ್ ನಾಯಕ್ ಇತ್ತಿಚೆಗೆ ಮೈಸೂರು ಖಾಲಿ ಮಾಡಿಕೊಂಡು ಬೆಂಗಳೂರಿನ ಪೀಣ್ಯಾಗೆ ಬಂದು ಕಂಪನಿಗೆ ಕೆಲಸ ಸೇರಿಕೊಂಡಿದ್ದ. ಬೆಂಗಳೂರಿಗೆ ಬಂದರೂ ಕೂಡ ರುಕ್ಸಾನ ಪ್ರದೀಪ್ ಗೆ ಕಾಲ್ ಮಾಡಿ ಟಾರ್ಚರ್ ಕೊಡ್ತಿದ್ದಳಂತೆ. ಮೈಸೂರಿಗೆ ಬಾ ಎಂದು ಪೀಡಿಸುತ್ತಿದ್ದಳಂತೆ. ಇತ್ತ ಪ್ರದೀಪ್ ಕೂಡ ರುಕ್ಸಾನ ಕಾಟ ತಡೆಯಲಾರದೇ ಹೋಗಿ ಬರುತ್ತಿದ್ದನಂತೆ. ಹೀಗಿರುವಾಗ ರುಕ್ಸಾನ ಗರ್ಭಿಣಿ ಆಗಿದ್ದಾಳೆ.

ರುಕ್ಸಾನ ಗರ್ಭಿಣಿ ಆದ ಬಳಿಕ ಪ್ರದೀಪ್ ರುಕ್ಸಾನ ಕಾಟ ತಾಳಲಾರದೆ ಕಡೂರಿಗೆ ತಂದು ರೂಮ್ ಮಾಡಿ ಇಟ್ಟಿದ್ದನಂತೆ. ರುಕ್ಸಾನ ಗರ್ಭಿಣಿ ಆಗಿದಿನಿ ಮದುವೆಯಾಗು ಎಂದು ಪೀಡಿಸುತ್ತಿದ್ದಳಂತೆ. ಆದರೂ ಪ್ರದೀಪ್ ಸೊಪ್ಪು ಹಾಕದೇ ಸುಮ್ಮನೇ ಇದ್ದನಂತೆ. ಎರಡು ತಿಂಗಳ ಹಿಂದೆ ರುಕ್ಸಾನ ತನ್ನ ಖಾತೆಯಲ್ಲಿ ಇದ್ದ ಹಣದಲ್ಲಿ ಒಡವೆ ಕೂಡ ತೆಗೆದುಕೊಂಡು ಪ್ರದೀಪ್ ಬಳಿ ಬಂದಿದ್ದಾಳೆ. ಇನ್ನೂ ಕಳೆದ ಒಂದು ತಿಂಗಳ ಹಿಂದೆ ರುಕ್ಸಾನ ಹೆರಿಗೆ ಆಗಿದ್ದು, ಪ್ರದೀಪ್ ನಾಯಕ್ ಹಾಸನದ ಸರ್ಕಾರಿ ಆಸ್ಪತ್ರೆಯಲ್ಲಿ ಹೆರಿಗೆ ಮಾಡಿಸಿದ್ದನಂತೆ. ಈ ವೇಳೆ ವೈದ್ಯರಿಗೆ ರುಕ್ಸಾನ ಅವಿವಾಹಿತೆ ಎಂದು ಹೇಳಿದಾಗ ರುಕ್ಸಾನಗೆ ಬೈದಿದ್ದಾರೆ. ಆಗ ತಂದೆ ಹೆಸರು ಪ್ರದಿಪ್ ನಾಯಕ್ ಎಂದು ಬರೆಯಿಸಿ ಹೆರಿಗೆ ಮಾಡಿಸಿದ್ದಾರಂತೆ.

ಇನ್ನು ಹೆರಿಗೆ ಬಳಿಕ ಕಡೂರಿನಲ್ಲಿ ರುಕ್ಸಾನನ್ನ ಇರಿಸಿದ್ದನಂತೆ. ಆಗಲಿಂದಲೂ ಕೂಡ ರುಕ್ಸಾನ ಪ್ರದಿಪ್ ನಾಯಕ್‌ಗೆ ಮದುವೆಯಾಗು ದಯವಿಟ್ಟು, ನನಗೆ ಅನ್ಯಾಯ ಮಾಡಬೇಡ. ನಿನ್ನ ಮೊದಲ ಪತ್ನಿಯನ್ನ ಬಿಟ್ಟುಬಿಡು ಎಂದು ಟಾರ್ಚರ್ ಕೊಡ್ತಿದ್ದಳಂತೆ. ಸತತ ಒಂದು ತಿಂಗಳಿನಿಂದ ಪ್ರದೀಪ್ ರುಕ್ಸಾನ ಕಾಟ ತಡೆದುಕೊಂಡಿದ್ದಾನೆ. ಇವಳ ಕಾಟ ಏನಾದರೂ ಮಾಡಿ ತಪ್ಪಿಸಿಕೊಳ್ಳಬೇಕೆಂದು ಪ್ರದಿಪ್ ನಾಯಕ್ ರುಕ್ಸಾನ ಕೊಲೆ ಮಾಡಲು ನಿರ್ಧರಿಸಿದ್ದಾನೆ.

ಅದರಂತೆ ಕಳೆದ ಮಾರ್ಚ್ 31 ರ ರಾತ್ರಿ ಕಡೂರಿನಲ್ಲಿ ಪರಸ್ಪರ ಕಿತ್ತಾಟ ನಡೆಸಿಕೊಂಡಿದ್ದಾರೆ. ಬಳಿಕ ಒಂದು ತಿಂಗಳ ಮಗು ಸಮೇತ ರುಕ್ಸಾನ ಕರೆದುಕೊಂಡು ಪ್ರದಿಪ್ ನಾಯಕ್ ಬೆಂಗಳೂರಿಗೆ ಹೊರಟಿದ್ದಾನೆ. ದಾರಿ ಮಧ್ಯೆ ರುಕ್ಸಾನ ಕೊಲೆ ಮಾಡಲು ಪ್ಲಾನ್ ಮಾಡಿದ್ದಾನೆ. ಮನೆಯಲ್ಲಿ ಗಲಾಟೆ ಮಾಡಿ ಆರೋಪಿ ಪ್ರದಿಪ್ ಅಡ್ವಾನ್ಸ್ ಆಗಿ ರುಕ್ಸಾನ ಫೋನ್ ಒಡೆದು ಹಾಕಿ ಸ್ವಿಚ್ ಆಫ್ ಮಾಡಿ ಅಲ್ಲೆ ಬಿಸಾಡಿದ್ದಾನೆ. ಪ್ರದಿಪ್ ಫೋನ್ ಕೂಡ ಮನೆಯಲ್ಲಿ ಸ್ವಿಚ್ ಆಫ್ ಮಾಡಿ ಬೆಂಗಳೂರು ಕಡೆ ಹೊರಟಿದ್ದಾನೆ.

ದಾರಿ ಮಧ್ಯೆ ಡಿಯೋ ಬೈಕಿಗೆ ಪೆಟ್ರೋಲ್ ಹಾಕಿಸಿಕೊಂಡು ಹೆಚ್ಚುವರಿಯಾಗಿ ಎರಡು ಲೀಟರ್ ಪೆಟ್ರೋಲ್ ಬಾಟಲ್ ಗೆ ಹಾಕಿಸಿಕೊಂಡಿದ್ದಾನೆ. ಆಗ ರುಕ್ಸಾನ ಪ್ರಶ್ನೆ ಹೆಚ್ಚುವರಿ ಪೆಟ್ರೋಲ್ ಯಾಕೆ ಎಂದು ಪ್ರಶ್ನೆ ಮಾಡಿದ್ದಾಳೆ. ಆಗ ಪ್ರದಿಪ್ ನಾಯಕ್ ನಾವು ದೂರ ಹೋಗ್ತಿದಿವಿ, ಪೆಟ್ರೋಲ್ ಖಾಲಿಯಾದರೇ ಬೇಕಲ್ವಾ ಎಂದು ಹೇಳಿದ್ದಾನೆ. ಬಳಿಕ ದಾರಿ ಮಧ್ಯೆ ಮದುವೆ ವಿಚಾರಕ್ಕೆ ಪರಸ್ಪರ ಜಗಳ ಆಡಿಕೊಂಡು ಬಂದಿದ್ದಾರೆ. ಮಧ್ಯ ರಾತ್ರಿ ವೇಳೆಗೆ ತುಮಕೂರು ಜಿಲ್ಲೆಯ ಗುಬ್ಬಿ ತಾಲೂಕಿನ ದೊಡ್ಡಗುಣಿ ಬಳಿ ಬಂದಾಗ ಮೂತ್ರ ವಿಸರ್ಜನೆ ಮಾಡಲು ಬೈಕ್ ನಿಲ್ಲಿಸಿದ್ದಾರೆ.

ಈ ವೇಳೆ ಒಂದು ತಿಂಗಳ ಪಾಪು ಇಟ್ಟುಕೊಂಡು ರುಕ್ಸಾನ ಕುತಿದ್ದಾಗ ಹಿಂಭಾಗದಿಂದ ಪ್ರದಿಪ್ ನಾಯಕ್ ಕುತ್ತಿಗೆಯಲ್ಲಿದ್ದ ವೇಲಿನಿಂದ ರುಕ್ಸಾನ ಕುತ್ತಿಗೆ ಬಿಗಿದು ಕೊಲೆ ಮಾಡಿದ್ದಾನೆ. ಮಗು ಜಾರಿ ಕೆಳಗಡೆ ಬಿದ್ದಿದೆ. ಇನ್ನು ಕೊಲೆ ಮಾಡಿ ಬಳಿಕ ಪೆಟ್ರೋಲ್ ನಿಂದ ಸುಟ್ಟು ಬೆಂಗಳೂರು ಕಡೆ ಹೊರಟಿದ್ದಾನೆ. ಡಿಯೋ ಬೈಕಿನ ಮಧ್ಯೆ ಏನು ಅರಿಯದ ಕಂದಮ್ಮನನ್ನ ಕುರಿಸಿಕೊಂಡು ಪ್ರಯಾಣ ಮುಂದುವರೆಸಿದ್ದಾನೆ. ನೆಲಮಂಗಲ ಸಮೀಪ ಬಂದು ರಸ್ತೆ ಬದಿಗೆ ಮಗುವನ್ನ ಪಾಪಿ ಪ್ರದಿಪ್ ನಾಯಕ್ ಬಿಸಾಡಿ ಮುಂದೆ ಹೋಗಿದ್ದಾನೆ.

ಈ ಪ್ರಕರಣದ ಬೆನ್ನತ್ತಿದ ಪೊಲೀಸರಿಗೆ ಮೈಸೂರಿನ ಮೇಟಗಳ್ಳಿ ಪೊಲೀಸ್ ಠಾಣೆ ನಾಪತ್ತೆಯಾದ ಪ್ರಕರಣ ಹಾಗೂ ಚೇಳೂರು ಪೊಲೀಸ್ ಠಾಣೆ ವ್ಯಾಪ್ತಿಯ ಮಹಿಳೆ ಕೊಲೆಗೂ ಹಾಗೂ ನೆಲಮಂಗಲ ಬಳಿ ಪತ್ತೆಯಾದ ಮಗು ಬಗ್ಗೆ ಪೊಲೀಸರು ತನಿಖೆ ಮಾಡಿದ್ದಾರೆ. ಕಡೂರಿನಿಂದ ನೆಲಮಂಗಲಕ್ಕೆ ಹೋಗುವ ಟೋಲ್ ಗಳನ್ನ ಪರಿಶಿಲನೆ ಮಾಡಿದಾಗ ಆರಂಭದಲ್ಲಿ ಮೂವರು ಇದ್ದ ಡಿಯೋ ಬೈಕ್ ತುಮಕೂರು, ಅಂದರೆ ಕೊಲೆಯಾದ ಸ್ಥಳದಿಂದ ಒಂದು ಮಗು ವ್ಯಕ್ತಿ, ನೆಲಮಂಗಲ ಬಳಿಕ ಓರ್ವ ವ್ಯಕ್ತಿ ಮಾತ್ರ ಪಾಸ್ ಆಗಿರುವುದು ಟೋಲ್ ನಲ್ಲಿ ಸೆರೆಯಾಗಿದೆ. ಇದರ ಹಿಂದೆ ಬಿದ್ದ ಪೊಲೀಸರಿಗೆ ಆರೋಪಿ ಬಂಧಿಸಲು ಸಹಕಾರಿಯಾಗಿದೆ.

# ತೆರೆದ ಬೋರ್ ಬೋಲ್‌ಗೆ ಬಿದ್ದ 2 ವರ್ಷದ ಬಾಲಕ

**ಮಧ್ಯಪ್ರದೇಶ:** ವಿಜಯಪುರದಲ್ಲಿ ಇತ್ತೀಚಗೆ 2 ವರ್ಷದ ಬಾಲಕ ಬೋರ್ ಬೋಲ್ ಗೆ ಬಿದ್ದ ಘಟನೆಯೊಂದು ನಡೆದಿತ್ತು. ಅನೇಕರ ಪ್ರಾರ್ಥನೆ, ರಕ್ಷಣೆ ಕಾರ್ಯಾಚರಣೆಯಿಂದ ಆ ಮಗು ಬದುಕಿ ಬಂದಿದೆ. ಇದೀಗ ಈ ಘಟನೆ ಮಾಸುವ ಮುನ್ನವೇ ಮತ್ತೊಂದು ಘಟನೆ ಬೆಳಕಿಗೆ ಬಂದಿದೆ. ಮಧ್ಯಪ್ರದೇಶದ ರೇವಾ ಜಿಲ್ಲೆಯಲ್ಲಿ ಶುಕ್ರವಾರ ಆರು ವರ್ಷದ ಬಾಲಕ ಬೋರ್‌ವೆಲ್ ಗೆ ಬಿದ್ದಿರುವ ಘಟನೆಯೊಂದು ನಡೆದಿದೆ. ಉತ್ತರ ಪ್ರದೇಶದ ಗಡಿ ಸಮೀಪದ ಮಾಣಿಕಾ ಗ್ರಾಮದಲ್ಲಿ ಮಧ್ಯಾಹ್ನ 3 ಗಂಟೆ ಸುಮಾರಿಗೆ ಬಾಲಕ ತೆರೆದ ಬೋರ್‌ವೆಲ್ ಬಳಿ ಆಟವಾಡುತ್ತಿದ್ದಾಗ ಈ ಘಟನೆ ನಡೆದಿದೆ. ರೇವಾ ಜಿಲ್ಲಾಧಿಕಾರಿ ಪ್ರತಿಭಾ ಪಾಲ್ ಅವರು ಹೇಳಿರುವ ಪ್ರಕಾರ, ಮಗು ಸುಮಾರು 40 ಅಡಿ ಆಳದಲ್ಲಿ ಸಿಲುಕಿಕೊಂಡಿದೆ. ಘಟನೆಯ ನಂತರ, ರಾಜ್ಯ ವಿಪತ್ತು ತುರ್ತು ನಿರ್ವಹಣಾ ಪಡೆಯ ತಂಡವು ರಕ್ಷಣಾ ಕಾರ್ಯಾಚರಣೆಯನ್ನು ಪ್ರಾರಂಭಿಸಿದೆ ಮತ್ತು ವಾರಣಾಸಿಯಿಂದ ರಾಷ್ಟ್ರೀಯ ವಿಪತ್ತು ನಿರ್ವಹಣಾ ಪಡೆ (ಓಆಖಈ) ನ್ನು ಕರೆಸಲಾಗಿದೆ.

ಅಧಿಕಾರಿಗಳು ಪೈಪ್ ಮೂಲಕ ಆಮ್ಲಜನಕ ಪೂರೈಕೆ ಮಾಡುತ್ತಿದ್ದಾರೆ. ಹೆಚ್ಚುವರಿಯಾಗಿ, ಬಾಲಕನ ಸ್ಥಿತಿಯನ್ನು ಮೇಲ್ವಿಚಾರಣೆ ಮಾಡಲು ಸಿಸಿಟಿವಿ ಕ್ಯಾಮೆರಾವನ್ನು ಸಹ ಇಳಿಸಲಾಗಿದೆ. ಆದರೂ, ಕೆಲವು ಅಡಚಣೆಗಳಿಂದ ಕ್ಯಾಮೆರಾ ಬಾಲಕನ್ನು ತಲುಪಲು ಸಾಧ್ಯವಾಗಲಿಲ್ಲ ಎಂದು ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಅನಿಲ್ ಸೋಂಕರ್ ಪಿಟಿಐ ಸುದ್ದಿ ಸಂಸ್ಥೆಗೆ ತಿಳಿಸಿದ್ದಾರೆ. ಬೋರ್‌ವೆಲ್ ಸುಮಾರು 70 ಅಡಿ ಆಳವಿದ್ದು, ಮಗುವನ್ನು ರಕ್ಷಿಸಲು ಸಮಾನಾಂತರ ಹೊಂಡವನ್ನು ತೋಡಲಾಗುತ್ತಿದೆ ಎಂದು ಹೇಳಿದ್ದಾರೆ.

# ಕಾಂಗ್ರೆಸ್ ಬೆಲ್ಲದ ಗ್ಯಾರಂಟಿಯಾದ್ರೆ, ಬಿಜೆಪಿಯದ್ದು ಬೇವಿನ ಗ್ಯಾರಂಟಿ

ಮೈಸೂರು: ಈ ದೇಶದ ಪ್ರತಿಯೊಬ್ಬ ನಾಗರೀಕನಿಗೂ ಗ್ಯಾರಂಟಿ ಬೇಕಾಗಿದೆ. ಕಳೆದ ವರ್ಷ ರಾಜ್ಯ ಸರ್ಕಾರ ಅಧಿಕಾರಕ್ಕೆ ಬಂದ 10 ತಿಂಗಳಲ್ಲಿ ಐದೂ ಗ್ಯಾರಂಟಿಗಳನ್ನ ಜಾರಿ ಮಾಡಿ ನುಡಿದಂತೆ ನಡೆದಿದೆ. ಗ್ಯಾರಂಟಿ ಪಕ್ಷ ಅಂದರೆ ಅದು ನಮ್ಮ ಕಾಂಗ್ರೆಸ್. ಐದು ನ್ಯಾಯದಡಿ 25 ಗ್ಯಾರಂಟಿಗಳನ್ನು ನಮ್ಮ ರಾಷ್ಟ್ರೀಯ ನಾಯಕರು ಕೊಟ್ಟಿದ್ದಾರೆ.

ಕೆಪಿಸಿಸಿ ಮಹಿಳಾ ಘಟಕದ ಅಧ್ಯಕ್ಷೆ ಮತ್ತು ರಾಜ್ಯ ಗ್ಯಾರಂಟಿ ಅನುಷ್ಠಾನ ಸಮಿತಿ ಉಪಾಧ್ಯಕ್ಷೆ ಡಾ.ಪುಷ್ಪಾ ಅಮರನಾಥ್ ಮೈಸೂರಿನ ಕಾಂಗ್ರೆಸ್ ಕಚೇರಿಯಲ್ಲಿ ಸುದ್ದಿ ಗೋಷ್ಠಿ ನಡೆಸಿ ಮಾತನಾಡಿ?

ಲೋಕಸಭಾ ಚುನಾವಣೆಗೂ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಮತ್ತು ರಾಹುಲ್ ಗಾಂಧಿ ಅವರ ಸಹಿ ಇರುವ ಗ್ಯಾರಂಟಿಗಳನ್ನ ಮುಂದಿಟ್ಟು ಮತಕೇಳುತ್ತಿದ್ದೇವೆ. ಮಹಿಳೆಯರು, ರೈತರು,ಶ್ರಮಿಕರು ಪಂಚ ನ್ಯಾಯದಡಿ ದೇಶದ ಎಲ್ಲಾ ವರ್ಗದ ಜನರಿಗೆ ನಮ್ಮ ಪಕ್ಷದ ವತಿಯಿಂದ ಗ್ಯಾರಂಟಿ ಕೊಡುತ್ತಿದ್ದೇವೆ. ಕರ್ನಾಟಕ ಮಾದರಿಯನ್ನು ದೇಶದ ಇತರೆ ರಾಜ್ಯಗಳಲ್ಲೂ ಜಾರಿಗೆ ತರುವ ಕೆಲಸವನ್ನು ಮಾಡುತ್ತಿದ್ದಾರೆ




ಎಂದರು. ಆರಂಭದಲ್ಲಿ ಕಾಂಗ್ರೆಸ್ ಪಕ್ಷದ ಗ್ಯಾರಂಟಿ ಯೋಜನೆಗಳನ್ನು ವಿರೋಧಿಸಿ ಟೀಕಿಸಿದ್ದ ಬಿಜೆಪಿಯವರು, ಇದೀಗ ಜನರ ಬೆಂಬಲ ಕಂಡು ಅನಿವಾರ್ಯವಾಗಿ ಗ್ಯಾರಂಟಿಗಳನ್ನು ಅಪ್ಪಿಕೊಳ್ಳುವ ಸ್ಥಿತಿ ನಿರ್ಮಾಣವಾಗಿದೆ. ಪರಿಣಾಮ ಕಾಂಗ್ರೆಸ್ ಗ್ಯಾರಂಟಿಗಳನ್ನೇ ಕಾಪಿ ಹೊಡೆದು ಮೋದಿ ಗ್ಯಾರಂಟಿ ಹೆಸರಲ್ಲಿ ಪ್ರಚಾರ ಮಾಡುತ್ತಿದ್ದಾರೆ ಎಂದು ವ್ಯಂಗ್ಯವಾಡಿದರು. ಕಳೆದ ಲೋಕಸಭಾ ಚುನಾವಣೆಗೂ ಮುನ್ನ, ವರ್ಷಕ್ಕೆ 2 ಕೋಟಿ ಉದ್ಯೋಗ ಸೃಷ್ಟಿ ಮಾಡುತ್ತೇವೆ ಎಂದು ನರೇಂದ್ರ ಮೋದಿ ಆಶ್ವಾಸನೆ ನೀಡಿದ್ದರು. ಈಗ ಕೇಂದ್ರದಲ್ಲಿ ಬಿಜೆಪಿ ಅಧಿಕಾರಕ್ಕೆ ಬಂದು 10 ವರ್ಷ ಕಳೆದಿದೆ. 20 ಕೋಟಿ ಉದ್ಯೋಗ ಎಲ್ಲಿ ಕೊಟ್ಟಿದ್ದೀರಿ ಹೇಳಿ ಎಂದು ಪ್ರಶ್ನಿಸಿದ ಡಾ.ಪುಷ್ಪಾ ಅಮರನಾಥ್, ಪ್ರತಿಯೊಬ್ಬರ ಖಾತೆಗೆ 15 ಲಕ್ಷ ರೂ. ಹಾಕುತ್ತೇವೆ ಎಂದಿದ್ದ ಆಶ್ವಾಸನೆ ಎಲ್ಲಿಗೆ ಬಂತು ಹೇಳಿ.? ಎಂದರು.

ಇಂದು ಬೆಲ್ಲದ ಗ್ಯಾರಂಟಿಗಳನ್ನ ನಮ್ಮ ಸರ್ಕಾರ ಕೊಟ್ಟಿದೆ. ಬೇವಿನ ಗ್ಯಾರಂಟಿಯನ್ನ ಬಿಜೆಪಿ ಕೊಟ್ಟಿದೆ. ಹಾಗಾಗಿ ಕಾಂಗ್ರೆಸ್ ಗೆ ಎಲ್ಲರು ಮತ ನೀಡಬೇಕಾಗಿದೆ ಎಂದರು. ಪಂಚ ನ್ಯಾಯದಡಿ ಕಾಂಗ್ರೆಸ್ ಭರವಸೆಗಳ ಕುರಿತು ಮಾಹಿತಿ ನೀಡಿದ ಪುಷ್ಪಾ ಅಮರನಾಥ್. ಬಿಜೆಪಿ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದರು. ಸುದ್ದಿಗೋಷ್ಠಿಗೂ ಮುನ್ನ ಕೇಂದ್ರ ಕಾಂಗ್ರೆಸ್ ನ ಗ್ಯಾರಂಟಿ ಪೋಸ್ಟರ್ ಬಿಡುಗಡೆ ಮಾಡಿದರು. ಜಿಲ್ಲಾ ಗ್ಯಾರಂಟಿ ಅನುಷ್ಠಾನ ಸಮಿತಿ ಸಮ್ಮುಖದಲ್ಲಿ ಪೋಸ್ಟರ್ ಬಿಡುಗಡೆ.

ಈ ವೇಳೆ ಮೈಸೂರು ನಗರ ಘಟಕದ ಅಧ್ಯಕ್ಷ ಆರ್ ಮೂರ್ತಿ, ಮಾಜಿ ಮೇಯರ್ ಗಳಾದ ಅಯೂಬ್ ಖಾನ್, ಪುಷ್ಪಾಲತ ಚಿಕ್ಕಣ್ಣ, ಮತ್ತು ಮೋದಾಮಣಿ ಉಪಸ್ಥಿತರಿದ್ದರು.

## ಇಂದಿನಿಂದ 17ರವರೆಗೆ ಮನೆಯಲ್ಲಿಯೇ ಮತದಾನಕ್ಕೆ ಅವಕಾಶ

**ಮೈಸೂರು:** ಲೋಕಸಭಾ ಸಾರ್ವತ್ರಿಕ ಚುನಾವಣೆ ಸಂಬಂಧ 85 ವರ್ಷ ಮೇಲ್ಪಟ್ಟ ಹಿರಿಯ ನಾಗರೀಕ ಮತದಾರರು ಹಾಗೂ ಶೇ.40 ಕ್ಕಿಂತ ಹೆಚ್ಚಿನ ಅಂಗವಿಕಲತೆ ಇರುವ ವಿಶೇಷ ಚೇತನ ಮತದಾರರ ಮಾಹಿತಿಯನ್ನು ಸಂಗ್ರಹಿಸಿ ಎಲೆಕ್ಟ್ರಾನ್ ತಂತ್ರಾಂಶದಲ್ಲಿ ಮಾಹಿತಿಯನ್ನು ದಾಖಲಿಸಿ ಸದರಿ ಮತದಾರರಿಗೆ ಮನೆಯಲ್ಲಿಯೇ ಮತದಾನ ಮಾಡುವ ವ್ಯವಸ್ಥೆಯನ್ನ ಏಪ್ರಿಲ್ 13 ರಿಂದ 17 ರವರೆಗೆ ಮಾಡಲಾಗಿದೆ. ವಿಧಾನಸಭಾ ಕ್ಷೇತ್ರವಾರು ಹೋಂ ವೋಟಿಂಗ್ ನಡೆಯುವ ದಿನಾಂಕಗಳು: ಮಡಿಕೇರಿಯಲ್ಲಿ(208) ಏ.15 ರಿಂದ 17 ರವರೆಗೆ , ವಿರಾಜಪೇಟೆ(209) ಏ.15 ರಿಂದ 17ರವರೆಗೆ, ಪಿರಿಯಾಪಟ್ಟಣ(210) ಏ.14 ರಿಂದ 15ರವರೆಗೆ, ಹುಣಸೂರು(212) ಏ.15 ರಿಂದ 16ರವರೆಗೆ, ಚಾಮುಂಡೇಶ್ವರಿ(215) ಏ.13 ರಿಂದ 14ರವರೆಗೆ, ಕೃಷ್ಣರಾಜ(216) ಏ.13 ರಿಂದ 14ರವರೆಗೆ, ಚಾಮರಾಜ(217) ಏ.14 ರಿಂದ 15 ಹಾಗೂ ನರಸಿಂಹರಾಜ(218)ದಲ್ಲಿ ಏ.13 ರಿಂದ 14 ರವರೆಗೆ ಹೋಮ ವೋಟಿಂಗ್ ಗೆ ಅವಕಾಶ ಕಲ್ಪಿಸಲಾಗಿದೆ ಎಂದು ಮೈಸೂರು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿಗಳಾದ ಡಾ.ಕೆ.ವಿ ರಾಜೇಂದ್ರ, ತಿಳಿಸಿದ್ದಾರೆ.



## ಬಿಜೆಪಿ ತೆರಿಗೆ ಕಟ್ಟದ್ದಕ್ಕೆ ಯಾರು ಹೊಣೆ?

**ಮೈಸೂರು :** ಭ್ರಷ್ಟರನ್ನು ಜೈಲಿಗೆ ಕಳುಹಿಸುವುದೇ ನನ್ನ ಕರ್ತವ್ಯ ಎನ್ನುವ ನರೇಂದ್ರ ಮೋದಿ, ತಮ್ಮದೇ ಪಕ್ಷವು ಬಾಂಡ್ ಮೂಲಕ ಸಂಗ್ರಹಿಸಿರುವ 7600 ಕೋಟಿಗೆ ಯಾಕೆ ತೆರಿಗೆ ಕಟ್ಟಿಲ್ಲ. ಇದನ್ನು ಯಾಕೆ ಐ.ಟಿ. ಇ.ಡಿ. ಪ್ರಶ್ನಿಸಿಲ್ಲ? ಇದಕ್ಕೆ ಯಾರನ್ನು ಜೈಲಿಗೆ ಕಳುಹಿಸಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರಶ್ನಿಸಿದರು.

ಇಲ್ಲಿಗೆ ಸಮೀಪದ ಕಳಲೆ ಗೇಟ್ ಮೈದಾನದಲ್ಲಿ ಶುಕ್ರವಾರ ಆಯೋಜಿಸಿದ್ದ ಚಾಮರಾಜನಗರ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಚುನಾವಣಾ ಪ್ರಚಾರ ಸಭೆಯಲ್ಲಿ ಅವರು ಮಾತನಾಡಿದರು. ದೆಹಲಿ ಮುಖ್ಯಮಂತ್ರಿ ಅರವಿಂದ ಕೇಜ್ರಿವಾಲ್, ಜಾರ್ಖಂಡ್ ಮುಖ್ಯಮಂತ್ರಿ ಹೇಮಂತ್ ಸೊರೇನ್ ಅವರನ್ನು ಸಾಕ್ಷ್ಯ ಇಲ್ಲದಿದ್ದರೂ ಜೈಲಿಗೆ ತಳ್ಳಿದ್ದಾರೆ. ಅದೇ ಐ.ಟಿ. ಇ.ಡಿ.ಯಂತಹ ಸಂಸ್ಥೆಗಳು ಬಿಜೆಪಿ ನಾಯಕರನ್ನು ಯಾಕೆ ಪ್ರಶ್ನಿಸುವುದಿಲ್ಲ ಎಂದು ಕೇಳಿದರು. ಬಿಜೆಪಿಯವರು ಮಾತೆತ್ತಿದರೆ ದೇಶಭಕ್ತಿ ಎನ್ನುತ್ತಾರೆ. ಮೋದಿ, ಅಡ್ವಾಣಿ ಎಂದಾದರೂ ಸ್ವಾತಂತ್ರ್ಯ ಹೋರಾಟದಲ್ಲಿ ಭಾಗವಹಿಸಿದ್ದಾರ ಆರ್‌ಎಸ್‌ಎಸ್, ಜನಸಂಘದ ಯಾರಾದರೂ ಒಬ್ಬ ದೇಶದ ಸ್ವಾತಂತ್ರ್ಯಕ್ಕಾಗಿ ಹೋರಾಡಿ ಹುತಾತ್ಮನಾಗಿದ್ದನ್ನು ತೋರಿಸಿದರೆ ನಾನು ರಾಜಕೀಯ ನಿವೃತ್ತಿ ಪಡೆಯುತ್ತೇನೆ ಎಂದು ಸಿದ್ದರಾಮಯ್ಯ ಸವಾಲು ಹಾಕಿದರು. ಬಿಜೆಪಿ ರಾಜ್ಯದಲ್ಲಿ ಎಂದು ಪೂರ್ಣ ಜನಾಶೀರ್ವಾದ ಪಡೆದು ಅಧಿಕಾರಕ್ಕೆ ಬಂದಿಲ್ಲ. ಅವರಿಗೆ ಮುಂಬಾಗಿಲ ರಾಜಕಾರಣ ಗೊತ್ತಿಲ್ಲ. ಆಪರೇಷನ್ ಕಮಲ ಹೆಸರು ಬಂದಿದ್ದೇ ಯಡಿಯೂರಪ್ಪ ಅವರಿಂದ ಎಂದು ಲೇವಡಿ ಮಾಡಿದರು. ಸಿದ್ದರಾಮಯ್ಯ ರಿಂದ ಸಮ್ಮಿಶ್ರ ಸರ್ಕಾರ ಬಿತ್ತು ಎನ್ನುತ್ತಿದ್ದ ಕುಮಾರಸ್ವಾಮಿ ಈಗ ಡಿಕೆಶಿಯತ್ತ ಬೆರಳು ಮಾಡುತ್ತಿದ್ದಾರೆ. ಆದರೆ ನಿಜವಾಗಿ ಸರ್ಕಾರ ಬೀಳಿಸಿದ್ದು ಯಡಿಯೂರಪ್ಪ ಎಂದರು. ಸಚಿವರಾದ ಸತೀಶ ಜಾರಕಿಹೊಳಿ, ಎಚ್.ಸಿ. ಮಹದೇವಪ್ಪ, ಕೆ. ವೆಂಕಟೇಶ್, ಕೆಪಿಸಿಸಿ ಕಾರ್ಯಾಧ್ಯಕ್ಷ ತನ್ವೀರ್ ಸೇಠ್ ಜೊತೆಗಿದ್ದರು.

# 7600 ಕೋಟಿ ಹಣಕ್ಕೆ ತೆರಿಗೆ ಕಟ್ಟಿದ್ದೀರಾ?

## ಈಗ ಯಾರನ್ನು ಜೈಲಿಗೆ ಕಳುಹಿಸಬೇಕು ಮೋದಿಯವರೇ: ಸಿ.ಎಂ ಪ್ರಶ್ನೆ

**ಮೈಸೂರು :** ಬಾಂಡ್ ಮೂಲಕ ನೀವು ಸಂಗ್ರಹಿಸಿದ 7600 ಕೋಟಿ ಹಣಕ್ಕೆ ತೆರಿಗೆ ಕಟ್ಟಿದ್ದೀರಾ ಮೋದಿಯವರೇ? ಈಗ ಯಾರನ್ನು ಜೈಲಿಗೆ ಕಳುಹಿಸಬೇಕು ಮೋದಿಯವರೇ ಹೇಳಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಖಾರವಾಗಿ ಪ್ರಶ್ನಿಸಿದರು.

ಚಾಮರಾಜನಗರ ಲೋಕಾಭಾ ಕ್ಷೇತ್ರದ ನಂಜನಗೂಡಿನಲ್ಲಿ ನಡೆದ ಬೃಹತ್ ಜನ ಸಮಾವೇಶವನ್ನು ಉದ್ಘಾಟಿಸಿ ಮಾತನಾಡಿದರು. ಭ್ರಷ್ಟರನ್ನು ಜೈಲಿಗೆ ಕಳುಹಿಸುತ್ತೇವೆ ಎಂದು ಮೋದಿಯವರು ನೆನ್ನೆ ಭಾಷಣ ಮಾಡಿದ್ದಾರೆ. ಆದರೆ ದೇಶದಲ್ಲಿದ್ದ ಭ್ರಷ್ಟರೆಲ್ಲಾ ಈಗ ಯಾವ ಪಕ್ಷದಲ್ಲಿದ್ದಾರೆ ಮೋದಿಯವರೇ ಎಂದು ಮತ್ತೊಂದು ಪ್ರಶ್ನೆ ಹಾಕಿದರು.

ಐಟಿ, ಸಿಬಿಐ ದುರುಪಯೋಗ ಪಡೆಸಿಕೊಂಡು ಇಬ್ಬರು ಮುಖ್ಯಮಂತ್ರಿಗಳಾದ ಕೇಜರಿವಾಲ್ ಮತ್ತು ಹೇಮಂತ್ ಸುರೇನ್ ಅವರನ್ನು ಜೈಲಿಗೆ ಕಳಯಹಿಸಿದ ಮೋದಿಯವರೇ ಃಎಕ ಸಂಗ್ರಹಿಸಿದ 7600 ಕೋಟಿ ಹಣಕ್ಕೆ ಒಂದು ಪೈಸೆ ತೆರಿಗೆ ಕಟ್ಟಿಲ್ಲವಲ್ಲಾ ಈ ಹಗರಣಕ್ಕಾಗಿ ಯಾರನ್ನು ಜೈಲಿಗೆ ಕಳುಹಿಸಬೇಕು ಹೇಳಿ ಎಂದು ಮೋದಿಯವರನ್ನು ಪ್ರಶ್ನಿಸಿದರು.

ಮೋದಿಯವರಾಗಲೀ, ಬಿಜೆಪಿಯವರಾಗಲೀ ಇವತ್ತಿನವರೆಗೂ ಯುವಕರು, ಉದ್ಯೋಗ, ಮಹಿಳೆಯರು, ಶೂದ್ರರು, ದಲಿತರು, ಶ್ರಮಿಕರು, ದುಡಿಯುವವರ ಪರವಾಗಿ ಇವತ್ತಿನವರೆಗೂ ಒಂದೂ ಸರಿಯಾದ ಕಾರ್ಯಕ್ರಮ ಮಾಡಲಿಲ್ಲವಲ್ಲಾ ಇದೇನಾ ಅಚ್ಛೆ ದಿನ್ ಎಂದು ಪ್ರಶ್ನಿಸಿದರು.

ಡೀಸೆಲ್, ಪೆಟ್ರೋಲ್, ಗ್ಯಾಸ್, ರಸಗೊಬ್ಬರ, ಬೇಳೆ ಕಾಳು, ಅಡುಗೆ ಎಣ್ಣೆ ಬೆಲೆ ಆಕಾಶಕ್ಕೆ ಏರಿಸಿದ್ದೀರಲ್ಲಾ ಮೋದಿಯವರೇ? ಇದಾ ನಿಮ್ಮ ಅಭಿವೃದ್ಧಿ ಎನ್ನುತ್ತಾ ಪ್ರಧಾನಿ ಮೋದಿಯವರ ಸಾಲು ಸಾಲು ಸುಳ್ಳುಗಳನ್ನು ಪಟ್ಟಿ ಮಾಡಿ ಪ್ರಶ್ನಿಸಿದರು.

ನೀವು ದೇಶ ಭಕ್ತರಾ? ಮುಖ ನೋಡಿಕೊಳ್ಳಿ. ನೀವು ದೇಶಭಕ್ತರಾಗಿದ್ರೆ, ಭಾರತ ಮಾತೆ ಬಗ್ಗೆ ಪ್ರೀತಿ ಇದ್ದಿದ್ರೆ ನೀವೇಕೆ ದೇಶದ ಸ್ವತಂತ್ರ ಹೋರಾಟದಲ್ಲಿ ಭಾಗವಹಿಸಲಿಲ್ಲ ? ಮಹಾತ್ಮಗಾಂಧಿಯವರ ನೇತೃತ್ವದಲ್ಲಿ ದೇಶಕ್ಕೆ ಸ್ವಾತಂತ್ರ್ಯ



ತಂದುಕೊಟ್ಟಿದ್ದು ನಮ್ಮ ಕಾಂಗ್ರೆಸ್ ಪಕ್ಷ. ಬ್ರಿಟೀಷರ ವಿರುದ್ಧ ಹೋರಾಟ ಮಾಡಿ ಹುತಾತ್ಮರಾದ ಸಂಘ ಪರಿವಾರದ ಒಬ್ಬೇ ಒಬ್ಬನನ್ನು, ಬಿಜೆಪಿಯ ಒಬ್ಬ ದೇಶಕ್ಕಾಗಿ ಹುತಾತ್ಮರಾಗಿದ್ರೆ ತೋರಿಸಿ, ನಾನು ರಾಜಕೀಯ ಬಿಟ್ಟು ಬಿಡ್ತೀನಿ ಎಂದು ಸಿ.ಎಂ. ನೇರ ಸವಾಲು ಹಾಕಿದರು.

ದೇಶಕ್ಕಾಗಿ ಏನೇನೂ ಮಾಡದವರಿಂದ ನಾವು ದೇಶಭಕ್ತಿ ಪಾಠ ಕಲಿಯಬೇಕಾ ಎಂದು ಪ್ರಶ್ನಿಸಿದರು.

ಬಿಜೆಪಿಯವರು ಕತ್ತಿ ಹಾಕೋದ್ರಲ್ಲಿ ನಿಸ್ಸೀಮರು. ಬಿಜೆಪಿಗೆ ಓಟು ಹಾಕುವ ಬಡವರೂ ಸೇರಿ ಇಡಿ ರಾಜ್ಯದ ಬಡವರು ಹೊಟ್ಟೆ ತುಂಬ ಊಟ ಮಾಡಲಿ ಅಂತ ನಾವು ಅಕ್ಕಿ ಕೊಟ್ರೆ, ಈ ಬಿಜೆಪಿಯವರು ಬಂದು ಕತ್ತಿ ಹಾಕಿಬಿಟ್ಟರು. ಈಗ ನಾವು ಮತ್ತೆ ಅಧಿಕಾರಕ್ಕೆ ಬಂದು ಹತ್ತು ಕೆಜಿ ಅಕ್ಕಿ ಕೊಡ್ತಾ ಇದೀವಿ ಎಂದರು.

ಬಿಜೆಪಿ-ಜೆಡಿಎಸ್ ಇಬ್ಬರಿಗೂ ಜನಪರವಾದ ಸಿದ್ಧಾಂತ ಮತ್ತು ಬದ್ಧತೆ ಇಲ್ಲದಿರುವುದರಿಂದ ನಾಡಿನ ಜನತೆ ಎರಡೂ ಪಕ್ಷಗಳನ್ನು ತಿರಸ್ಕರಿಸಿದ್ದಾರೆ.

ಸಚಿವರಾದ ಹೆಚ್.ಸಿ.ಮಹದೇವಪ್ಪ, ಸತೀಶ್ ಜಾರಕಿಹೊಳಿ, ಕೆ.ವೆಂಕಟೇಶ್, ಕೆಪಿಸಿಸಿ ಕಾರ್ಯಾಧ್ಯಕ್ಷರಾದ ತನ್ವೀರ್ ಸೇಠ್, ಜಿಲ್ಲೆಯ ಶಾಸಕರುಗಳಾದ ದರ್ಶನ್ ಧ್ರುವನಾರಾಯಣ್, ಗಣೇಶ್ ಮಹದೇವ್ ಪ್ರಸಾದ್, ಕೃಷ್ಣಮೂರ್ತಿ, ಪುಟ್ಟರಂಗಶೆಟ್ಟಿ, ಮಾಜಿ ಶಾಸಕರಾದ ಕೇಶವಮೂರ್ತಿ, ಡಿಸಿಸಿ ಅಧ್ಯಕ್ಷ ವಿಜಯ್ ಕುಮಾರ್ ಸೇರಿ ಹಲವು ಮಂದಿ ಜಿಲ್ಲಾ, ತಾಲ್ಲೂಕು, ಬ್ಲಾಕ್ ಮುಖಂಡರುಗಳು ಉಪಸ್ಥಿತರಿದ್ದರು.

## ನಾಳೆ ಮೈಸೂರಿಗೆ ಪ್ರಧಾನಿ ಮೋದಿ

**ಮೈಸೂರು :** ಪ್ರಧಾನಿ ನರೇಂದ್ರ ಮೋದಿ ಅವರ ವರ್ಚಸ್ಸಿನ ಮೂಲಕ ಮತದಾರರನ್ನು ಸೆಳೆಯಲು ಬಿಜೆಪಿ ಮೈಸೂರಲ್ಲಿ ಬೃಹತ್ ವೇದಿಕೆ ಸಿದ್ಧಪಡಿಸಿದ್ದು, ಏ.14 ರಂದು ಮೋದಿ ಮೈಸೂರಿಗೆ ಆಗಮಿಸಲಿದ್ದಾರೆ. ಮೈಸೂರು-ಕೊಡಗು, ಚಾಮರಾಜನಗರ, ಮಂಡ್ಯ ಕ್ಷೇತ್ರ ಗೆಲ್ಲಲು ಪ್ರಧಾನಿ ನರೇಂದ್ರ ಮೋದಿಯವರ



ಸಮ್ಮುಖದಲ್ಲಿ ಬೃಹತ್ ವೇದಿಕೆ ಸಿದ್ಧಪಡಿಸಿದ್ದೇವೆ. ಏ.14 ರಂದು ಮೈಸೂರಿನ ಮಹಾರಾಜ ಕಾಲೇಜು ಮೈದಾನದಲ್ಲಿ ಪ್ರಧಾನಿ ಮೋದಿ ಸಾರ್ವಜನಿಕರನ್ನುದ್ದೇಶಿಸಿ ಮಾತನಾಡಲಿದ್ದಾರೆ ಎಂದರು. ರಾಜ್ಯದಲ್ಲಿ ಕಾಂಗ್ರೆಸ್ ಹಣಬಲ, ಹೆಂಡದ ಬಲದ ಮೇಲೆ ಚುನಾವಣೆ ನಡೆಸುತ್ತಿದೆ. ಅಲ್ಲದೇ ಅದು ಅಭಿವೃದ್ಧಿ ಶೂನ್ಯವಾಗಿದೆ. ಪ್ರಧಾನ ಮಂತ್ರಿ ಕಿಸಾನ್ ಸಮ್ಮಾನ್ ಯೋಜನೆಗೆ ರಾಜ್ಯದ ಪಾಲು ಬಂದ್ ಮಾಡಿದ್ದಾರೆ. ಬಡ ವಿದ್ಯಾರ್ಥಿಗಳ ಸ್ಕಾಲರ್ ಶಿಪ್ ನಿಲ್ಲಿಸಿದೆ. ವಿದ್ಯುತ್ ದರ ಕೂಡ ಏರಿಕೆ ಆಗಿದೆ. ಹಾಲಿನ ದರ ಏರಿಸಿ ರೈತರಿಗೆ ಪ್ರೋತ್ಸಾಹ ಧನ ನೀಡದೆ ಅನ್ಯಾಯ ಮಾಡಿದ್ದಾರೆ. ರೈತರ ಜಮೀನಿಗೆ ಟ್ರಾನ್ಸ್ ಫರ್ಮರ್ ಹಾಕಿಸಿಕೊಳ್ಳಲು ಸಂಕಷ್ಟ ಎದುರಿಸುತ್ತಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು. ಹೈನುಗಾರಿಕೆ ಪ್ರೋತ್ಸಾಹ ನೀಡಲು ಯಡಿಯೂರಪ್ಪ 3 ರೂ. ನೀಡಿದ್ದರು. ಈಗ ರಾಜ್ಯದಲ್ಲಿ 680 ಕೋಟಿ ರೂ ಬಾಕಿ ಉಳಿಸಿಕೊಂಡಿದೆ. 24 ಸಾವಿರ ಕೋಟಿ, ಎಸ್‌ಸಿಎಸ್‌ಪಿ, ಟಿಎಸ್‌ಪಿ ಹಣವನ್ನ ಬೇರೆ ಕಾರ್ಯಕ್ಕೆ ವರ್ಗಾಹಿಸಿಕೊಂಡಿದೆ. ರಾಜ್ಯದಲ್ಲಿ ಅಭಿವೃದ್ಧಿ ಕುಂಠಿತವಾಗಿದ್ದು, ಒಂದು ಕೈಯ್ಯಲ್ಲಿ ಹಣ ನೀಡಿ, ಮತ್ತೊಂದು ಕೈಯ್ಯಲ್ಲಿ ಕಿತ್ತುಕೊಂಡಿದ್ದಾರೆ ಎಂದರು.

## ಮದ್ಯ ಮಾರಾಟ ನಿಷೇಧ

**ಮಂಡ್ಯ:** ಲೋಕಸಭಾ ಸಾರ್ವತ್ರಿಕ ಚುನಾವಣೆ 2024 ರ ಸಂಬಂಧ ಮಂಡ್ಯ ಲೋಕಸಭಾ ಸಾರ್ವತ್ರಿಕ ಚುನಾವಣೆಯ ಮತದಾನವು ಏಪ್ರಿಲ್ 26 ರಂದು ಹಾಗೂ ಮತ ಎಣಿಕೆಯ ಕಾರ್ಯವು ಜೂನ್ 4 ರಂದು ನಡೆಯಲಿದೆ. ಮತದಾನದ ಸಮಯದಲ್ಲಿ ಹಾಗೂ ಮತ ಎಣಿಕೆ ಸಮಯದಲ್ಲಿ ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ಕಾನೂನು ಮತ್ತು ಸುವ್ಯವಸ್ಥೆ ಕಾಪಾಡುವ ಸಲುವಾಗಿ ಮತದಾನದ ದಿನದಂದು ಮತದಾರರಿಗೆ ಮುಕ್ತ ಮತ್ತು ನ್ಯಾಯೋಚಿತ ಮತದಾನಕ್ಕೆ ಅವಕಾಶ ಕಲ್ಪಿಸುವ ಉದ್ದೇಶದಿಂದ ಮತದಾನ ಮತ್ತು ಮತ ಎಣಿಕೆ ದಿನದಂದು ಶುಷ್ಕ ದಿನವೆಂದು ಜಿಲ್ಲಾಧಿಕಾರಿ ಡಾ. ಕುಮಾರ ಅವರು ತಿಳಿಸಿದ್ದಾರೆ. ಏಪ್ರಿಲ್ 26 ರಂದು ನಡೆಯುವ ಮತದಾನದ ಹಿನ್ನೆಲೆ ಮಂಡ್ಯ ಜಿಲ್ಲೆಯಾದ್ಯಂತ ಏಪ್ರಿಲ್ 24 ರ ಸಂಜೆ 6 ಗಂಟೆಯಿಂದ ಏಪ್ರಿಲ್ 27 ರ ಬೆಳಿಗ್ಗೆ 6 ಗಂಟೆಯವರೆಗೆ ಎಲ್ಲಾ ತರಹದ ಮದ್ಯದ ಅಂಗಡಿ, ಬಾರ್ ಅಂಡ್ ರೆಸ್ಟೋರೆಂಟ್/ ಕ್ಲಬ್‌ಗಳನ್ನು ಮುಚ್ಚುವಂತೆ ಹಾಗೂ ಸದರಿ ಅವಧಿಯಲ್ಲಿ ಮದ್ಯ ತಯಾರಿಕ ಘಟಕಗಳು, ಮದ್ಯ ಮಾರಾಟ, ಹಂಚಿಕೆ ಸಾಗಾಣಿಕೆ ಮತ್ತು ಶೇಖರಣೆ ಮಾಡುವುದನ್ನು ನಿಷೇಧಿಸಿ ಶುಷ್ಕ ದಿನಗಳೆಂದು ಜಿಲ್ಲಾಧಿಕಾರಿ ಆದೇಶ ಹೊರಡಿಸಲಾಗಿದೆ. ಮಂಡ್ಯ ವಿಶ್ವವಿದ್ಯಾನಿಲಯ ವಾಣಿಜ್ಯ ವಿಭಾಗದಲ್ಲಿ ಜೂನ್ 4 ರಂದು ಮತ ಎಣಿಕೆ ಕಾರ್ಯವು ನಡೆಯುವ ಹಿನ್ನೆಲೆ ಮಂಡ್ಯ ನಗರ ವ್ಯಾಪ್ತಿ ಹಾಗೂ ನಗರದ ವ್ಯಾಪ್ತಿಯಿಂದ 5 ಕಿ. ಮೀ. ಸುತ್ತಳತೆ ವ್ಯಾಪ್ತಿಯಲ್ಲಿ ಜೂನ್ 3 ರಂದು ಸಂಜೆ 6 ಗಂಟೆಯಿಂದ ಜೂನ್ 5 ರ ಬೆಳಿಗ್ಗೆ 6 ಗಂಟೆಯವರೆಗೆ ಎಲ್ಲಾ ತರಹದ ಮದ್ಯದ ಅಂಗಡಿ, ಬಾರ್ ಅಂಡ್ ರೆಸ್ಟೋರೆಂಟ್/ ಕ್ಲಬ್‌ಗಳನ್ನು ಮುಚ್ಚುವಂತೆ ಹಾಗೂ ಸದರಿ ಅವಧಿಯಲ್ಲಿ ಮದ್ಯ ತಯಾರಿಕ ಘಟಕಗಳು, ಮದ್ಯ ಮಾರಾಟ, ಹಂಚಿಕೆ ಸಾಗಾಣಿಕೆ ಮತ್ತು ಶೇಖರಣೆ ಮಾಡುವುದನ್ನು ನಿಷೇಧಿಸಿ ಶುಷ್ಕ ದಿನಗಳೆಂದು ಮಂಡ್ಯ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ ಡಾ. ಕುಮಾರ ಅವರು ಘೋಷಿಸಿದ್ದಾರೆ.

# ಕೊಟ್ಪಾ ಕಾಯ್ದೆ ಬಗ್ಗೆ ಅರಿವು ಮೂಡಿಸಿ



**ಚಿಕ್ಕಬಳ್ಳಾಪುರ:** ಜಿಲ್ಲೆಯಲ್ಲಿರುವ ಬಸ್ ನಿಲ್ದಾಣಗಳು, ಕೈಗಾರಿಕೆಗಳು, ಕಟ್ಟಡ ನಿರ್ಮಾಣ ಸ್ಥಳಗಳು, ಕಲ್ಲು ಕ್ವಾರಿ, ಗಣಿಗಾರಿಕೆ ಸ್ಥಳಗಳು ಸೇರಿದಂತೆ ಜನಸಂದಣಿ ಪ್ರದೇಶಗಳಲ್ಲಿನ ಶ್ರಮಿಕ ವರ್ಗದವರಿಗೆ ತಂಬಾಕು ಉತ್ಪನ್ನಗಳ ಬಳಕೆಯ ದುಷ್ಪರಿಣಾಮಗಳ ಕುರಿತು ತಿಳಿಸಿಕೊಡಬೇಕು ಎಂದು ಅಪರ ಜಿಲ್ಲಾಧಿಕಾರಿ ಡಾ|| ಎನ್. ತಿಪ್ಪೇಸ್ವಾಮಿ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಶುಕ್ರವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಜಿಲ್ಲಾ ತಂಬಾಕು ನಿಯಂತ್ರಣ ಕಾರ್ಯಕ್ರಮ ಕಾಯ್ದೆಯ ತ್ರೈಮಾಸಿಕ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕೊಟ್ಪಾ ಕಾಯ್ದೆಯನ್ನು ಯಶಸ್ವಿಯಾಗಿ ಜಿಲ್ಲೆಯಲ್ಲಿ ಅನುಷ್ಠಾನಗೊಳಿಸುವ ಸಂಬಂಧ ಎಲ್ಲಾ ಇಲಾಖೆಗಳು ಸಾಂಘಿಕವಾಗಿ ಕಾರ್ಯ ಪ್ರವೃತ್ತರಾಗಬೇಕು. ಜಿಲ್ಲೆಯ ಎಲ್ಲಾ ತಾಲ್ಲೂಕುಗಳಲ್ಲಿ ತಹಸೀಲ್ದಾರ್ ರವರ ನೇತೃತ್ವದಲ್ಲಿ ಪ್ರಗತಿ ಪರಿಶೀಲನಾ ಸಭೆ ನಿಗದಿತವಾಗಿ ನಡೆಯಬೇಕು. ಕೊಟ್ಪಾ ಕಾಯ್ದೆ ಸೆಕ್ಷನ್ 6ಬಿ, 7, 8 9 ರಡಿ ಪ್ರಕರಣ ದಾಖಲಿಸಲು ಹೆಚ್ಚೆಚ್ಚು ದಾಳಿಗಳನ್ನು ಮಾಡಿ ದಂಡ ವಸೂಲಿ ಮಾಡಬೇಕು. ಕಾಲೇಜುಗಳಲ್ಲಿ, ಬಸ್ ನಿಲ್ದಾಣಗಳು, ಕಾರ್ಮಿಕರು ಸೇರುವ ಸ್ಥಳಗಳು, ಮಾರುಕಟ್ಟೆಗಳು ಇನ್ನಿತರ ಜನಸಂದಣಿ ಸ್ಥಳಗಳಲ್ಲಿ ಹೆಚ್ಚು ಐ.ಇ.ಸಿ ಕಾರ್ಯಕ್ರಮಗಳನ್ನು ಏರ್ಪಡಿಸಿ ಅರಿವು ಮೂಡಿಸಬೇಕು. ಕಾರ್ಮಿಕ ಇಲಾಖೆ, ಅಬಕಾರಿ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಸ್ಥಳೀಯಾಡಳಿತ ಸಂಸ್ಥೆಗಳು ಹಾಗೂ ಇತರೆ ಇಲಾಖೆಗಳು ಆರೋಗ್ಯ ಇಲಾಖೆಯೊಂದಿಗೆ ಸಮನ್ವಯತೆಯೊಂದಿಗೆ ಕಾರ್ಯನಿರ್ವಹಿಸಬೇಕು. ಆ ಮೂಲಕ ಜಿಲ್ಲೆಯನ್ನು ತಂಬಾಕು ಮುಕ್ತವಾಗಿಸಲು ಪ್ರಮಾಣಿಕ ಪ್ರಯತ್ನ ಮಾಡಬೇಕು ಎಂದು ಸೂಚನೆಗಳನ್ನು ನೀಡಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್.ಎಸ್. ಮಹೇಶ್ ಕುಮಾರ್ ಅವರು ಮಾತನಾಡಿ, 2023ರ ಏಪ್ರಿಲ್ ಮಾಹೆಯಿಂದ 2024ರ ಮಾರ್ಚ್ ಮಾಹೆಯವರೆಗೆ ವಿವಿಧ ಇಲಾಖೆಗಳ ಸಮನ್ವಯದೊಂದಿಗೆ ಜಿಲ್ಲೆಯಲ್ಲಿ 80 ದಾಳಿಗಳನ್ನು ನಡೆಸಿ 1512 ಪ್ರಕರಣಗಳನ್ನು ದಾಖಲು ಮಾಡಿ 107685 ರೂಗಳ ದಂಡವನ್ನು ವಸೂಲಿ ಮಾಡಲಾಗಿದೆ. ಮುಂದಿನ ದಿನಗಳಲ್ಲಿ ಈ ನಿಟ್ಟಿನಲ್ಲಿ ಹೆಚ್ಚಿನ ದಾಳಿಗಳನ್ನು ನಡೆಸಲಾಗುವುದು ಎಂದು ಸಭೆಗೆ ಮಾಹಿತಿ ನೀಡಿದರು.

ಸಭೆಯಲ್ಲಿ ಡಿ.ವೈ.ಎಸ್.ಪಿ ಶಿವಕುಮಾರ್, ಜಿಲ್ಲಾ ಕುಷ್ಟರೋಗ ನಿರ್ಮೂಲನಾಧಿಕಾರಿ ಡಾ. ಶಿವಕುಮಾರ್, ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ. ಕೃಷ್ಣ ಪ್ರಸಾದ್, ತಾಲ್ಲೂಕು ವೈದ್ಯಾಧಿಕಾರಿಗಳು, ವಿವಿಧ ಇಲಾಖೆಯ ಅಧಿಕಾರಿಗಳು ಮತ್ತು ಸಿಬ್ಬಂದಿ ಹಾಜರಿದ್ದರು.

# ಸತ್ತೇಗಾಲ ಚೆಕ್ ಪೋಸ್ಟ್ ನಲ್ಲಿ ದಾಖಲೆ ಇಲ್ಲದ 1,57,87,000 ರೂ. ಮೌಲ್ಯದ ಚಿನ್ನಾಭರಣ ವಶ

**ಚಾಮರಾಜನಗರ :** ಲೋಕಸಭಾ ಸಾರ್ವತ್ರಿಕ ಚುನಾವಣೆ-2024ರ ಸಂಬಂಧ ಜಿಲ್ಲೆಯ ಹನೂರು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಸತ್ತೇಗಾಲ ಚೆಕ್ ಪೋಸ್ಟ್ ನಲ್ಲಿ ದಾಖಲೆ ಇಲ್ಲದೆ ಸಾಗಾಣಿಕೆ ಮಾಡುತ್ತಿದ್ದ 1,57,87,000 ರೂ. ಮೌಲ್ಯದ 2 ಕೆ.ಜಿ. 170 ಗ್ರಾಂ ಚಿನ್ನಾಭರಣಗಳನ್ನು ಎಫ್.ಎಸ್.ಟಿ ತಂಡದ ಅಧಿಕಾರಿಗಳು ವಶಕ್ಕೆ ಪಡೆದಿದ್ದಾರೆ. ಚಾಮರಾಜನಗರ



ಜಿಲ್ಲೆಯ ಸತ್ತೇಗಾಲ ಚೆಕ್ ಪೋಸ್ಟ್ ನಲ್ಲಿ ಬೆಂಗಳೂರಿನಿಂದ ಕೊಳ್ಳೇಗಾಲಕ್ಕೆ ಬರುತ್ತಿದ್ದ ಕೆಎ-17 ಜಡ್-9447 ಸಂಖ್ಯೆಯ ಹುಂಡೈ ವೆನ್ಯೂ (ಕಾರು) ವಾಹನದಲ್ಲಿ ದಾಖಲೆಗಳಿಲ್ಲದೇ ಸಾಗಾಣಿಕೆ ಮಾಡುತ್ತಿದ್ದ ಕಾರ್ತಿಕ್ ಮತ್ತು ಚಿರಾಂತ್ ಎಂಬುವವರಿಂದ ಚಿನ್ನಾಭರಣಗಳನ್ನು ಎಫ್.ಎಸ್.ಟಿ ತಂಡದ ಅಧಿಕಾರಿ ಎಂ. ರವಿಶಂಕರ್ ಅವರು ಜಪ್ತಿ ಮಾಡಿದ್ದಾರೆ. ಚಿನ್ನಾಭರಣ ಸಾಗಣೆ ಮಾಡುತ್ತಿದ್ದ ಬಗ್ಗೆ ವಿಚಾರಣೆ ಮಾಡಿದ ವೇಳೆ ಸ್ಪಷ್ಟ, ಸಮಂಜಸ ಉತ್ತರ ದೊರೆಯದ ಹಿನ್ನೆಲೆಯಲ್ಲಿ ಚಿನ್ನವನ್ನು ವಶಕ್ಕೆ ಪಡೆದು, ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಲಾಗಿದೆ. ಆದಾಯ ತೆರಿಗೆ ಇಲಾಖೆಯ ಅನ್ವೇಷಣೆ ವಿಭಾಗದ ಸಹಾಯಕ ನಿರ್ದೇಶಕರಾದ ಆರ್. ರಂಗನಾಥ್, ಆದಾಯ ತೆರಿಗೆ ಇಲಾಖೆ ಅಧಿಕಾರಿಗಳಾದ ಜಿ. ರಘು, ಜಿ. ದಿವಾಕರ್ ಅವರಿಂದ ತನಿಖೆ ಹಾಗೂ ಪರಿಶೀಲನಾ ಕಾರ್ಯ ಪ್ರಗತಿಯಲ್ಲಿದೆ ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ಶಿಲ್ಪಾ ನಾಗ್ ತಿಳಿಸಿದ್ದಾರೆ.

# ವಿದ್ಯಾರ್ಥಿನಿಲಯ: ಅಕ್ರಮವಾಗಿ ಪರಭಾರೆ

**ಚಾಮರಾಜನಗರ:**ನಗರದ ಬಿ.ರಾಚಯ್ಯ ಜೋಡಿ ರಸ್ತೆಯಲ್ಲಿರುವ ಆದಿ ಕರ್ನಾಟಕ ವಿದ್ಯಾರ್ಥಿನಿ ನಿಲಯದ (ಕೆ.ಸಿ.ರಂಗಯ್ಯ ಹಾಸ್ಟೆಲ್) ಜಾಗವನ್ನು ಅಕ್ರಮವಾಗಿ ಪರಭಾರೆ ಮಾಡಿಕೊಂಡಿರುವ ಪ್ರಕರಣಕ್ಕೆ ಸಂಬಂಧಿಸಿದಂತೆ ಪಟ್ಟಣ ಪೊಲೀಸರು ಮೂರನೇ ಆರೋಪಿ ಸಿ.ಎಸ್.ಗೋವಿಂದರಾಜು ಅವರನ್ನು ಬಂಧಿಸಿದ್ದಾರೆ. ಹಾಸ್ಟೆಲ್‌ಗೆ ಸೇರಿದ ಸರ್ವೆ ನಂಬರ್ 295/4ಡಿಯಲ್ಲಿರುವ ಎಂಟು ಗುಂಟೆ ಜಮೀನನ್ನು 2ನೇ ಆರೋಪಿ ಕೆ.ಬಿ.ಹರೀಶ್ ಎಂಬುವವರಿಂದ ನಗರದ ಶಂಕರಪುರ ಬಡಾವಣೆಯ ಗೋವಿಂದರಾಜು ಅವರು ?13.16 ಲಕ್ಷಕ್ಕೆ ಕ್ರಯಕ್ಕೆ ಪಡೆದಿದ್ದಾರೆ ಎಂದು ಆರೋಪಿಸಲಾಗಿದೆ. ಹಾಸ್ಟೆಲ್ ಜಾಗವನ್ನು ಅಕ್ರಮ ಪರಭಾರೆ ಮಾಡಿರುವ ಸಂಬಂಧ ಪಟ್ಟಣ ಠಾಣೆಯಲ್ಲಿ ಮಾರ್ಚ್ 22ರಂದು 14 ಮಂದಿಯ ವಿರುದ್ಧ ಎಫ್‌ಐಆರ್ ದಾಖಲಿಸಲಾಗಿತ್ತು. ಎಲ್ಲರೂ ತಲೆಮರೆಸಿಕೊಂಡಿದ್ದರು. 'ಗೋವಿಂದರಾಜು ಅವರು ಈಗ ಸಿಕ್ಕಿ ಬಿದ್ದಿದ್ದಾರೆ. ಅವರನ್ನು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ. ಉಳಿದವರು ತಲೆಮರೆಸಿಕೊಂಡಿದ್ದು, ಉಳಿದವರ ಪತ್ತೆಗೆ ಕ್ರಮವಹಿಸಲಾಗಿದೆ' ಎಂದು ಪೊಲೀಸ್ ಮೂಲಗಳು ತಿಳಿಸಿವೆ.

# ಅಕ್ಷರ ಕಾಲೇಜಿಗೆ ಶೇ.100 ಫಲಿತಾಂಶ

**ಪಿರಿಯಾಪಟ್ಟಣ :** ಪಟ್ಟಣದ ಅಕ್ಷರ ಪದವಿ ಪೂರ್ವ ಕಾಲೇಜು ಸತತವಾಗಿ ತಾಲ್ಲೂಕಿಗೆ ಪ್ರಥಮ ಸ್ಥಾನ ಪಡೆದು ಶೇ 100 ರಷ್ಟು ಫಲಿತಾಂಶಪಡೆದಿದೆ. ಅಕ್ಷರ ಪದವಿಪೂರ್ವ ಕಾಲೇಜು 2023-24 ನೇ ಸಾಲಿನ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಯಲ್ಲಿ ಶೇ 100 ರಷ್ಟು ಫಲಿತಾಂಶ ನೀಡಿ ತಾಲೂಕಿಗೆ ಪ್ರಥಮ ಸ್ಥಾನ ಪಡೆದು ನೂತನ ಮೈಲಿಗಲ್ಲು ಸ್ಥಾಪಿಸಿದೆ. ವಿಜ್ಞಾನ ವಿಭಾಗದಲ್ಲಿ ಪರೀಕ್ಷೆಯನ್ನು ಬರೆದ 62 ವಿದ್ಯಾರ್ಥಿಗಳಿಗೆ 40ವಿದ್ಯಾರ್ಥಿಗಳು ಅತ್ಯುನ್ನತ ದರ್ಜೆಯಲ್ಲಿ. 22ವಿದ್ಯಾರ್ಥಿಗಳು ಪ್ರಥಮ ದರ್ಜೆಯಲ್ಲಿ ತೇರ್ಗಡೆಹೊಂದಿದ್ದಾರೆ. ಪವನ್ ಕುಮಾರ್ ಕೆ. ಎಂ. ಹಾಗು ಹಿತಕಾಮ್ಯ ಎಂಬ ವಿದ್ಯಾರ್ಥಿಗಳು 600 ಕ್ಕೆ 580ಅಂಕಗಳನ್ನು ಪಡೆದು ತಾಲ್ಲೂಕಿಗೆ ದ್ವಿತೀಯ ಸ್ಥಾನ ಪಡೆದಿದ್ದಾರೆ ವಾಣಿಜ್ಯ ವಿಭಾಗದಲ್ಲಿ ಶಬಿಸ್ತೆ ಫಾತಿಮಾ 589 ಅಂಕ ಪಡೆದು ತಾಲ್ಲೂಕಿಗೆ ಪ್ರಥಮ ಸ್ಥಾನ ಪಡೆದುಕೊಂಡು ಕಾಲೇಜಿಗೆ ಕೀರ್ತಿ ತಂದಿರುತ್ತಾರೆ. ಉತ್ತಮ ಫಲಿತಾಂಶ ನೀಡಿದ ಎಲ್ಲಾ ವಿದ್ಯಾರ್ಥಿಗಳಿಗೆ ಕಾಲೇಜಿನ ಪ್ರಾಂಶುಪಾಲರು ಸಿಹಿ ತಿನಿಸುವುದರ ಮೂಲಕ ಅಭಿನಂದನೆ ಸಲ್ಲಿಸಿದರು. ಉತ್ತಮ ಫಲಿತಾಂಶ ನೀಡಲು ಕಾರಣರಾದ ಎಲ್ಲಾ ವಿದ್ಯಾರ್ಥಿಗಳು ಹಾಗು ಉಪನ್ಯಾಸಕರುಗಳನ್ನು ಯಜಮಾನ್ ಫೌಂಡೇಶನ್ ನ ಆಡಳಿತ ಮಂಡಳಿ ಹಾಗು ಅಕ್ಷರ ಪದವಿಪೂರ್ವ ಕಾಲೇಜು ಆಡಳಿತ



ಮಂಡಳಿಯವರು ಅಭಿನಂದಿಸಿದರು. ರಚನಾ ಎಂ ಎ 577 ಪೃಥ್ವಿಕ್ 576. ರುಚಿತಾ ಎಸ್ 573. ಪ್ರಾರ್ಥನ 572.ಪೂರ್ಣಲಕ್ಷ್ಮಿ 571.ದಿನುಗೌಡ 565. ರಾಜಶೇಖರ್ 565. ನಾದಿರ 562.ಪ್ರತೀಕ್ಷಾ 561.ಸ್ಫೂರ್ತಿ 560. ಸುಶ್ಮಿತಾ ಆರ್ 560..ಪ್ರಕೃತಿ 558. ಹೇಮರಾಜ್ 557. ಅಂಕಿತಾ 556. ಸುಹಾನಿ ಮೆಹಕ್ 555. ಶ್ರಾವ್ಯ 553. ರಚನಾ ಜಿ 551. ಧೀರಜ್550. ಮಧುಪ್ರಿಯಾ 550. ಮಹಮ್ಮದ್ ಶೈಜ್ 549. ಸಮರ್ಥ್546. ಮೆಹಕ್ ಟಿ 546. ಸ್ವಾತಿ 545. ಭಾನುಪ್ರಕಾಶ್ 540. ಹೇಮಂತ್ 537. ಲೋಕಜ್ಞ 533. ರುಚಿತಾ ಪಿ ಸಿ 530. ಶಾಲಿನಿ 530. ತಸ್ಮಿಯ 529. ಲೋಹಿತ್525. ಫೈರುಝುನ್515. ಅಪೂರ್ವ 514. ಯಶಸ್ವಿನಿ.ಪಿ ಎಂ 514. ಕೀರ್ತನ 510. ಬಿಂದುಶ್ರೀ 509. ಹಾಗು ಇಂಚರ 503. ವಾಣಿಜ್ಯ ವಿಭಾಗದಲ್ಲಿ. ಸುರಭಿ 566. ಜಾಹ್ನವಿ 562. ಹಂಸಿನಿ 559. ಯಶಸ್ವಿನಿ ಕೆ ಕೆ 555. ವರ್ಷ 552. ಮಾನ್ಯ 551. ದೀಪಿಕಾ 541. ತಮನ್ನಾ 538. ಪ್ರಶಾಂತ್ 528. ಮಹಮ್ಮದ್ ಫಾರಾಜ್ 524. ಅಂಜನಾ 516. ಐಶ್ವರ್ಯ 515.ಅಂಕಗಳನ್ನು ಪಡೆದು ತಾಲೂಕಿಗೆ ಹಾಗು ಕಾಲೇಜಿಗೆ ಕೀರ್ತಿಯನ್ನು ತಂದಿದ್ದು . ಶೇ 60 ರಷ್ಟು ವಿದ್ಯಾರ್ಥಿಗಳು ಶೇ 90% ಗಿಂತಲೂ ಅಧಿಕ ಅಂಕಗಳನ್ನು ಪಡೆದಿರುತ್ತಾರೆ.

# ಮುಸ್ಲಿಮರಿಂದ ಸಂಭ್ರಮದ ರಂಜಾನ್ ಆಚರಣೆ

**ಪಿರಿಯಾಪಟ್ಟಣ:** ಪಟ್ಟಣದ ಜಿನ್ನಾ ತುಲ್ ಫಿರ್ದೋಷ ಮಸೀದಿಯಲ್ಲಿ ಈದುಲ್ ಫಿತರ್ ಸಮಾಜದವರು ರಂಜಾನ್ ಹಬ್ಬದ ಪ್ರಯುಕ್ತ ವಿಶೇಷ ಪ್ರಾರ್ಥನೆ ನೆರವೇರಿತು.

ಅನೇಕ ವರ್ಷಗಳಿಂದ ನಡೆದುಕೊಂಡು ಬಂದಂತಹ ಸೂಫಿ ಸಂತ ಪದ್ಧತಿಯ ಅಹಲೆಸುನ್ನತ್ ವಲ್ಲ ಪ್ರಕಾರ ಪ್ರಾರ್ಥನೆ ಸಲ್ಲಿಸಲಾಯಿತು.ಹಬ್ಬದಲ್ಲಿ ವ್ರತದಾರಿಗಳು ಪ್ರಾರ್ಥನೆಯ ಬಳಿಕ ಪರಸ್ಪರ ಆಲಂಗಿಸಿಕೊಂಡು ಹಬ್ಬದ ಶುಭಾಶಯಗಳನ್ನು ವಿನಿಮಯ ಮಾಡಿಕೊಂಡರು.

ಬುಧವಾರ ಸಂಜೆ ಚಂದ್ರ ದರ್ಶನವಾಗುತ್ತಿದ್ದಂತೆ ಗುವಾರ ರಂಜಾನ್ ಆಚರಣೆಗಾಗಿ ನಿರ್ಧಾರ ಕೈಗೊಂಡರು. ತಾಲೂಕಿನ ಎಲ್ಲಾ ಮಸೀದಿಗಳಲ್ಲಿ ವಿಶೇಷ ಪ್ರಾರ್ಥನೆ, ಪರಸ್ಪರ ಶುಭಾಶಯ ವಿನಿಮಯ ನಡೆಯಿತು. ಮಧ್ಯಾಹ್ನ ವಿಶೇಷ ಖಾದ್ಯವಾದ ಸುರಕುರಮಾ ಸವಿದು ಹಬ್ಬ ಆಚರಿಸಿದರು. ಮೌಲ್ವಿಗಳು ಶಾಂತಿ, ಸಮೃದ್ಧಿ, ಉತ್ತಮ ಮಳೆ ಹಾಗೂ ಬೆಳೆಗಾಗಿ ಬೇಡಿಕೊಂಡರು. ಬಡವರ ಮನೆಗಳಿಗೆ ತೆರಳಿದ ಜನರು ಬಟ್ಟೆ, ಹಣ ನೀಡಿ ಹಬ್ಬದ ಶುಭಾಶಯ ಕೋರಿದರು. ಪ್ರಾರ್ಥನೆ ನಂತರ ನಾನಾ ಧರ್ಮೀಯರಿಗೆ ಶುಭ ಕೋರಿದ ಮುಸ್ಲಿಂ ಸಮುದಾಯದವರು ಅಪ್ಪುಗೆಯ ಮೂಲಕ ಈದ್ ಮುಬಾರಕ್ ಎಂದರು. ಈ ಸಂದರ್ಭದಲ್ಲಿ ಮಸೀದಿಯ ಧರ್ಮ ಗುರುಗಳಾದ ಮೌಲಾನ ಲಾಯಿಕ ಅಹಮದ್ ಅವರ ನೇತೃತ್ವದಲ್ಲಿ ವಿಶೇಷ ನಮಾಝ್ ನಿರ್ವಹಿಸಿದ ಬಳಿಕ ಧಾರ್ಮಿಕ ಪ್ರವಚನ ನೀಡಲಾಯಿತು. ಈ ಸಂದರ್ಭದಲ್ಲಿ ಮಸೀದಿ ಅಧ್ಯಕ್ಷರಾದ ಗಫಾರ್ ಅಹಮದ್ ಅವರು ವಿಶೇಷ ನಮಾಝ್ ಬಗ್ಗೆ ಮಾಹಿತಿ ನೀಡಿದರು. ಪ್ರಾರ್ಥನೆಯಲ್ಲಿ ಮಸೀದಿ ಉಪಾಧ್ಯಕ್ಷ ಸೈಯದ್ ಅನ್ಸಾರ್, ಕಾರ್ಯದರ್ಶಿ ಮಹಮ್ಮದ್ ಅತಮಲ, ಮುಖಂಡರಾದ ನೌಫಿವುಲ್ಲಾ, ನೌಷಾದ್, ಮಹಮದ್ ರಜಾಕ್, ಜಾವೀದ್ ಖಾನ್, ಗೌಸ್ ಬೈ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.



# ಸಂಜೆ ಟಿಪ್ಸ್



## ರಾಜಧಾನಿ: ಆಮ್ಲಿಶಿಯಸ್ ಥಾಲಿ 18 ವರ್ಷಗಳ ಆಚರಣೆ!

ಮೀರಾ ಹಾಸ್ಪಿಟಾಲಿಟಿ ಮತ್ತು ಗೋರ್ಮೇ ಸೊಲ್ಯೂಷನ್ಸ್ ಲಿಮಿಟೆಡ್ ಆದ ರಾಜಧಾನಿ, ತನ್ನ ಗೌರವಾನ್ವಿತ ಪೋಷಕರಿಗೆ 18 ವರ್ಷಗಳ ಆಮ್ಲಿಶಿಯಸ್ ಥಾಲಿ ಅನುಭವವನ್ನು ಪುನಃ ನೀಡುತ್ತಿದೆ. 30+ ರಾಜಸ್ಥಾನಿ ಮತ್ತು ಗುಜರಾತಿ ಭಕ್ಷ್ಯಗಳನ್ನು ಅಧ್ಯಯನ ಮಾಡಿ, ಥಾಲಿ ರೂಪದಲ್ಲಿ ಪ್ರಸ್ತುತಪಡಿಸುತ್ತಿದೆ. ವರ್ಷದಿಂದ ವರ್ಷಕ್ಕೆ, 34,000 ಕಿಲೋಗ್ರಾಂಗಳಷ್ಟು ಮಾವಿನ ರಸದೊಂದಿಗೆ ನಮ್ಮ ಗ್ರಾಹಕರನ್ನು ಸಂತೋಷಪಡಿಸುವಲ್ಲಿ ನಾವು ಹೆಮ್ಮೆಪಡುತ್ತೇವೆ ಮತ್ತು ಈ ವರ್ಷದ ಆಚರಣೆಯು ಇನ್ನಷ್ಟು ಅಸಾಧಾರಣ ಅನುಭವವನ್ನು ನೀಡುತ್ತದೆ. ಮಾವಿನ ಪೂರನ್ಪೋಲಿ, ಮಾವಿನಕಾಯಿ ದಾಲ್ ಧೋಕ್ಲಿ, ಮಾವು ಮಹಾರಾಜ ಧೋಕ್ಲಾ, ಆಮ್ ಕಿ ಲೌಂಜಿ ಮತ್ತು ಇತರ ಭಕ್ಷ್ಯಗಳಂತಹ ಖಾದ್ಯಗಳನ್ನು ಒಳಗೊಂಡಿರುವ ಸೊಗಸಾದ ಪ್ರಯಾಣಕ್ಕಾಗಿ ಸಿದ್ಧರಾಗಿ. ನಮ್ಮ ನಿಷ್ಠಾವಂತ ಗ್ರಾಹಕರು ಈ ವಾರ್ಷಿಕ ಸಂಪ್ರದಾಯವನ್ನು ಕುತೂಹಲದಿಂದ ನಿರೀಕ್ಷಿಸುತ್ತಾರೆ ಮತ್ತು ಈ ವರ್ಷದ ಮೆನುವು ಸಾಂಪ್ರದಾಯಿಕ ಆಮ್ರಾಸ್ ಪುರಿಯಿಂದ ಹಿಡಿದು ಮಾವಿನ ಹಲಪಿನೊ ಚೀಸ್ ಲಿಫಾಫಾ, ಕೈರಿ ಭೇಲ್, ಅಂಬೆ ಆಲೂ, ಬೇಪಾಡಿ ರೊಟ್ಟಿ, ಕೈರಿ ಮೇಥಿ ಮುಂತಾದವಯಗಳನ್ನು ಹೊಂದಿದೆ. ಕೇವಲ ರೂ.669++ ಬೆಲೆಯ, ಮಾವಿನ ಹಣ್ಣಿನ ಮೋಡಿಯಲ್ಲಿ ಮುಳುಗಲು ಇದಕ್ಕಿಂತ ಉತ್ತಮ ಸಮಯವಿಲ್ಲ. ಬೇಸಿಗೆಯ ಅಚ್ಚುಮೆಚ್ಚಿನ ಹಣ್ಣಿನ ಆಗಮನವನ್ನು ಆಚರಿಸಲು ನಮ್ಮೊಂದಿಗೆ ಸೇರಿ ಮತ್ತು ರಾಜಧಾನಿಯ ಅಮಲಿಶಿಯಸ್ ಉತ್ಸವದಲ್ಲಿ ಮರೆಯಲಾಗದ ಭೋಜನದ ಅನುಭವವನ್ನು ಆನಂದಿಸಿ. ತಮ್ಮ ಮನೆಯ ಸೌಕರ್ಯದಿಂದ ನಮ್ಮ ಆಮ್ಲಿಷಿಯಸ್ ಡಿಲೈಟ್ಗಳಲ್ಲಿ ಪಾಲ್ಗೊಳ್ಳಲು ಬಯಸುವವರಿಗೆ, ವಿತರಣಾ ಸೇವೆಗಳನ್ನು ನೀಡಲು ನಾವು ಸಂತೋಷಪಡುತ್ತೇವೆ.

## ಗೋಧಿ ಬಿಸ್ಕೇಟ್

### ಪಾಕ ಶಾಲೆ



### ಬೇಕಾಗಿರುವ ಪದಾರ್ಥ

1 ಕಪ್- ಗೋಧಿ ಹಿಟ್ಟು, ಳ ಟೀ ಸ್ಪೂನ್-ಏಲಕ್ಕಿ ಪುಡಿ, ಚಿಟಿಕೆ-ಜಾಯಿಕಾಯಿ ಪುಡಿ, ಚಿಟಿಕೆ-ಉಪ್ಪು, 5 ಟೇಬಲ್ ಸ್ಪೂನ್- ತುಪ್ಪ. ಕಪ್- ಸಕ್ಕರೆ, 4 ಟೇಬಲ್ ಸ್ಪೂನ್-ಹಾಲು.

### ಮಾಡುವ ವಿಧಾನ

ಒಂದು ಬೌಲ್ ಗೆ ಗೋಧಿ ಹಿಟ್ಟು, ಉಪ್ಪು, ಏಲಕ್ಕಿ ಪುಡಿ, ಜಾಯಿಕಾಯಿ ಪುಡಿ ಸೇರಿಸಿ ಮಿಕ್ಸ್ ಮಾಡಿಕೊಳ್ಳಿ. ನಂತರ ಒಂದು ಬೌಲ್ ಗೆ ತುಪ್ಪ, ಹಾಗೂ ಸಕ್ಕರೆ ಸೇರಿಸಿ ಚೆನ್ನಾಗಿ ಮಿಕ್ಸ್ ಮಾಡಿಕೊಳ್ಳಿ. ಇದನ್ನು ಗೋಧಿಹಿಟ್ಟಿನ ಮಿಶ್ರಣಕ್ಕೆ ಸೇರಿಸಿ ನಂತರ ಹಾಲು ಹಾಕಿ ನಾದಿಕೊಳ್ಳಿ. ನಂತರ ಇದನ್ನು ತುಸು ದಪ್ಪಗೆ ಲಟ್ಟಿಸಿಕೊಂಡು ಫೋರ್ಕ್ ನ ಸಹಾಯದಿಂದ ಇದರ ಮೇಲೆ ನಿಧಾನಕ್ಕೆ ಚುಚ್ಚಿ. ಚಿಕ್ಕ ಚಿಕ್ಕ ತೂತಿನ ಹಾಗೇ ಕಾಣಿಸುತ್ತದೆ. ನಂತರ ಚೌಕಾಕಾರದಲ್ಲಿ ಕತ್ತರಿಸಿ. ಇದನ್ನು ಬೇಕಿಂಗ್ ಟ್ರೆಯಲ್ಲಿ ಇಟ್ಟು ಓವೆನ್ ನಲ್ಲಿ 20 ನಿಮಿಷಗಳ ಕಾಲ ಬೇಕ್ ಮಾಡಿಕೊಳ್ಳಿ. ಇದು ತಣ್ಣಗಾದ ಮೇಲೆ ಗಾಳಿಯಾಡದ ಡಬ್ಬದಲ್ಲಿ ತುಂಬಿಸಿಡಿ.

## ಪ್ರಿಯಾಮಣಿ ಜೊತೆ ಪೋಸ್ ಕೊಟ್ಟ ಬೋನಿ ಕಪೂರ್ : ಪೋಟೋ ವೈರಲ್



ಮುಂಬೈ: ಬಾಲಿವುಡ್ನ ಖ್ಯಾತ ನಿರ್ಮಾಪಕ ಬೋನಿ ಕಪೂರ್ ಅವರು ಬಹುಭಾಷಾ ನಟಿ ಪ್ರಿಯಾಮಣಿ ಜತೆ ಫೋಟೋಗೆ ಪೋಸ್ ಕೊಡುವಾಗ ಸೊಂಟದ ಮೇಲೆ ಕೈಯಿಟ್ಟು ಇದೀಗ ಟ್ರೋಲಿಗರಿಗೆ ಆಹಾರವಾಗಿದ್ದಾರೆ. ಈ ವಯಸ್ಸಿನಲ್ಲಿ ಈ ರೀತಿಯಾ ವರ್ತನೇ ಬೇಕಿತ್ತಾ ಎಂದು ಬೋನಿ ಅವರನ್ನು ಟೀಕಿಸಿದ್ದಾರೆ.

ಈ ಘಟನೆ ಮೈದಾನ್ ಸಿನಿಮಾದ ಸ್ಕ್ರೀನಿಂಗ್ ನಂತರ ನಡೆದಿದೆ. ಮೈದಾನ್ ಸಿನಿಮಾದಲ್ಲಿ ಪ್ರಿಯಾಮಣಿ ಅವರು ಮುಖ್ಯ ಪಾತ್ರವೊಂದರಲ್ಲಿ ಕಾಣಿಸಿಕೊಂಡಿದ್ದಾರೆ. ಈ ಸಿನಿಮಾ ವೀಕ್ಷಣೆಗೆ ಬಾಲಿವುಡ್ ಮಂದಿ ಬಂದಿದ್ದು, ಅಂದು ಪ್ರಿಯಾಮಣಿ ಸೀರೆಯಲ್ಲಿ ಮಿಂಚಿದರು.

ಸಿನಿಮಾ ನೋಡಿ ಹೊರಗಡೆ ಬಂದ ಬೋನಿ ಅವರು ಮಾಧ್ಯಮಕ್ಕೆ ಪ್ರಿಯಾಮಣಿ ಜತೆ ಫೋಟೋಗೆ ಪೋಸ್ ನೀಡಿದ್ದಾರೆ. ಈ ವೇಳೆ ಕಪೂರ್ ಅವರು ಪ್ರಿಯಾಮಣಿ ಸೊಂಟದ ಮೇಲೆ ಕೈಯಿಟ್ಟಿದ್ದು ವಿವಾದಕ್ಕೆ ಕಾರಣವಾಗಿದೆ. ಅದಲ್ಲದೆ ಇಬ್ಬರು ಹೆಣ್ಣು ಮಕ್ಕಳ ತಂದೆ ಈ ರೀತಿ ವರ್ತಿಸುವುದು ಸರಿಯಲ್ಲ ಎಂದು ಕಮೆಂಟ್ ಮಾಡಿದ್ದಾರೆ. ಕೆಲವರು ಕಪೂರ್ ಅವರನ್ನು ಹಾಲಿವುಡ್ ನಿರ್ಮಾಪಕ ಹಾರ್ವೆ ವೈನ್ಸ್ಟೀನ್ಗೆ ಹೋಲಿಸಿದ್ದಾರೆ.ಇನ್ನೂ ಬೋನಿ ಅವರು ಈ ಹಿಂದೆಯೂ ನಟಿಯರ ಜತೆ ನಡೆದುಕೊಳ್ಳುವ ರೀತಿ ಬಗ್ಗೆ ಟ್ರೋಲ್ ಆಗಿದ್ದರು. 2023ರಲ್ಲಿ ನೀತಾ ಅಂಬಾನಿ ಕಲ್ಚರಲ್ ಸೆಂಟರ್ದ ಕಾರ್ಯಕ್ರಮದಲ್ಲಿ ಮಾಡೆಲ್ ಗಿಗಿ ಹಡಿದ್ ಅವರ ಸೊಂಟದ ಮೇಲೆ ತನ್ನ ಕೈಯಿಟ್ಟ ಫೋಟೋ ವೈರಲ್ ಆಗಿತ್ತು.

ಅದಲ್ಲದೆ ಈ ಹಿಂದೆ ಕಾರ್ಯಕ್ರಮವೊಂದರಲ್ಲಿ ನಟಿ ಊರ್ವಶಿ ರೌಟೇಲಾ ಅವರನ್ನು ಅನುಚಿತವಾಗಿ ಸ್ಪರ್ಶಿಸಿದ ಆರೋಪವೂ ಅವರ ಮೇಲೆ ಕೇಳಿಬಂದಿದೆ. ಇನ್ನೂ ಬೋನಿ ಅವರು ಸೊಂಟದ ಮೇಲೆ ಕೈ ಹಾಕುವಾಗ ಪ್ರಿಯಾಮಣಿಗೆ ಮುಜುಗುರ ಹಾಕುವ ಹಾಗೇ ವರ್ತಿಸಿದ್ದಾರೆಂದು ನೆಟ್ಟಿಗರು ಪ್ರತಿಕ್ರಿಯಿಸಿದ್ದಾರೆ.ಬೋನಿ ಕಪೂರ್ ಅವರು ಬಹುಭಾಷಾ ನಟಿ ಶ್ರೀದೇವಿ ಅವರ ಪತಿ. ಅವರ ಮಗಳು ಜಾಹ್ನವಿ ಕಪೂರ್ ಕೂಡ ಖ್ಯಾತ ನಟಿಯಾಗಿ ಗುರುತಿಸಿಕೊಂಡಿದ್ದಾರೆ.

## ಸೂರ್ಯಾಘಾತದಿಂದ ರಕ್ಷಣೆ

### ಹೆಲ್ತ್ ಟಿಪ್ಸ್




ಬಿಸಿ ಗಾಳಿಯ ಸಂದರ್ಭದಲ್ಲಿ ದೇಹದಲ್ಲಿ ನೀರಿನ ಅಂಶವು ಕಡಿಮೆಯಾದಲ್ಲಿ ಸೂರ್ಯಾಘಾತ ಅಂದರೆ ಸನ್ ಸ್ಟ್ರೋಕ್ ನ ಸಾಧ್ಯತೆಯು ಅಧಿಕವಾಗಿರುವುದರಿಂದ ಇದರ ರಕ್ಷಣೆಗೆ ಪಾಲಿಸಬೇಕಾದ ಅಂಶಗಳ ಬಗ್ಗೆ ಆರೋಗ್ಯ ಇಲಾಖೆ ಸಲಹೆ ನೀಡಿದೆ. ಮಧ್ಯಾಹ್ನದ ಸಮಯದಲ್ಲಿ ಶ್ರಮದಾಯಕ ಕೆಲಸಗಳನ್ನು ಮಾಡಬಾರದು. ಹೆಚ್ಚು ನೀರನ್ನು ಆಗಾಗ್ಗೆ ಕುಡಿಯಬೇಕು. ಹೆಚ್ಚು ಸಕ್ಕರೆ ಯುಕ್ತ ಪಾನೀಯಗಳು, ಕಾರ್ಬೋನೇಟೆಡ್ ಪಾನೀಯಗಳನ್ನು ಕುಡಿಯಬಾರದು. ಇದರಿಂದ ನಿರ್ಜಲೀಕರಣ ಉಂಟಾಗುತ್ತದೆ. ತಿಳಿ ಬಣ್ಣದ ಬಟ್ಟೆಯನ್ನು ಧರಿಸಬೇಕು. ಹೊರಾಂಗಣದಲ್ಲಿ ಕೆಲಸ ಮಾಡುವಾಗ ಆಗಾಗ್ಗೆ ವಿಶ್ರಾಂತಿ ಪಡೆಯಬೇಕು.

**ಸೂರ್ಯಾಘಾತಕ್ಕೆ ಪ್ರಥಮ ಚಿಕಿತ್ಸಾ ಕ್ರಮಗಳು:** ಸೂರ್ಯಾಘಾತಕ್ಕೆ ಒಳಗಾದ ವ್ಯಕ್ತಿಯನ್ನು ತಣ್ಣಗಿನ ಸ್ಥಳದಲ್ಲಿ ಮಲಗಿಸಿ ದೇಹವನ್ನು ಒದ್ದೆ ಬಟ್ಟೆಯಿಂದ ಒರೆಸಬೇಕು. ಕುಡಿಯಲು ಆಗಾಗ್ಗೆ ನೀರನ್ನು ಕೊಡಬೇಕು. ವ್ಯಕ್ತಿಯು ಚೇತರಿಸಿಕೊಂಡ ನಂತರ ನೀರಿನ ಅಂಶ ಹೆಚ್ಚಾಗಿರುವ ಪದಾರ್ಥಗಳನ್ನು ನೀಡಬೇಕು.

**ಮಕ್ಕಳಲ್ಲಿ ಕಾಣಿಸಿಕೊಳ್ಳುವ ಆರೋಗ್ಯ ಸಮಸ್ಯೆಗಳು:** ಬಿಸಿಲಿನ ಶಾಖದಿಂದ ಮೂರ್ಛೆ ಹೋಗುವುದು, ಸ್ನಾಯು ಸೆಳೆತ, ರೋಗಗ್ರಸ್ತವಾಗುವಿಕೆ, ಸಿಡುಕುತನ, ತಲೆನೋವು, ಹೆಚ್ಚಾಗಿ ಬೆವರುವುದು, ಬಲಹೀನತೆ, ತಲೆ ತಿರುಗುವಿಕೆ, ಗೊಂದಲಮಯ ರೀತಿಯಲ್ಲಿ ವರ್ತಿಸುವುದು, ತ್ವರಿತ ಉಸಿರಾಟ / ಹೃದಯ ಬಡಿತ, ವಾಕರಿಕೆ ಮತ್ತು ವಾಂತಿ, ಎದ್ದೇಳಲು ಕಷ್ಟ ಪಡುವ ಲಕ್ಷಣಗಳು ಕಾಣಿಸಿಕೊಳ್ಳಲಿದೆ. ದೇಹದ ಉಷ್ಣತೆಯು 40.5, ಸಿ (105,ಎಫ್) ಗೆ ಏರುವುದು. ಮಗುವಿಗೆ ತೀವ್ರವಾದ ರೋಗ ಲಕ್ಷಣಗಳಿದ್ದರೆ ತಕ್ಷಣವೇ ಹತ್ತಿರದ ಆರೋಗ್ಯ ಕೇಂದ್ರಕ್ಕೆ ಭೇಟಿ ನೀಡಿ ಅಥವಾ ಆಂಬ್ಯುಲೆನ್ಸ್ ಗೆ ಕರೆ ಮಾಡಿ ಕೂಡಲೆ ಚಿಕಿತ್ಸೆ ಪಡೆದುಕೊಳ್ಳಬೇಕು.

**ತಾಪಮಾನದಿಂದ ರಕ್ಷಣೆ ಪಡೆಯುವುದು ಹೇಗೆ?:** ಆಗಾಗ್ಗೆ ನೀರನ್ನು ಕುಡಿಯಬೇಕು, ಪ್ರಯಾಣ ಮಾಡುವ ಸಂದರ್ಭದಲ್ಲಿ ನೀರಿನ ಬಾಟಲಿಯನ್ನು ಕೊಂಡೊಯ್ಯಬೇಕು, ನಿಂಬೆ ಹಣ್ಣಿನ ಷರಬತ್ತು, ಮಜ್ಜಿಗೆ, ಲಸ್ಸಿ, ಹಣ್ಣಿನ ರಸಗಳು ಅಥವಾ ಒ.ಆರ್. ಎಸ್ ಕುಡಿಯಬೇಕು, ತಾಜಾ ಹಣ್ಣುಗಳಾದ ಕಲ್ಲಂಗಡಿ, ಕಿತ್ತಳೆ ಹಣ್ಣು ಹಾಗೂ ಸೌತೇಕಾಯಿಯನ್ನು ಹೆಚ್ಚಾಗಿ ಸೇವಿಸಬೇಕು, ಒಳಾಂಗಣದಲ್ಲಿದ್ದಾಗ ನೆರಳಿನ ಸ್ಥಳದಲ್ಲಿ ವಿಶ್ರಮಿಸಬೇಕು, ಕಿಟಕಿ, ಬಾಗಿಲುಗಳ ಪರದೆಗಳನ್ನು ಬಳಸಿ, ಫ್ಯಾನ್, ಏರ್ ಕೂಲರ್, ಏರ್ ಕಂಡೀಶನರ್ ಉಪಯೋಗಿಸಬೇಕು, ತಣ್ಣನೆಯ ನೀರಿನಲ್ಲಿ ಸ್ನಾನ ಮಾಡಬೇಕು, ಬಿಸಿಲಿನಿಂದ ರಕ್ಷಿಸಿಕೊಳ್ಳಲು ಕೊಡೆ, ಟೋಪಿ, ಟವಲ್ ಹಾಗೂ ಇತರ ವಿಧಾನಗಳನ್ನು ಬಳಸಬೇಕು ಹಾಗೂ ತಿಳಿ ಬಣ್ಣದ ಸಡಿಲವಾದ ಬಟ್ಟೆಗಳನ್ನು ಧರಿಸಬೇಕು.

## ಹುಬ್ಬಳ್ಳಿಯಲ್ಲಿ ಫ್ಲಿಪ್ ಕಾರ್ಟ್ ನ ದಿನಸಿ ಫುಲ್ ಫಿಲ್ಮೆಂಟ್ ಸೆಂಟರ್ ಆರಂಭ




ಭಾರತದ ಸ್ವದೇಶಿ ಇ-ಕಾಮರ್ಸ್ ಮಾರ್ಕೆಟ್ ಪ್ಲೇಸ್ ಆಗಿರುವ ಫ್ಲಿಪ್ ಕಾರ್ಟ್ ಕರ್ನಾಟಕದ ಹುಬ್ಬಳ್ಳಿಯಲ್ಲಿ ತನ್ನ ಹೊಸ ದಿನಸಿ ಫುಲ್ ಫಿಲ್ಮೆಂಟ್ ಕೇಂದ್ರವನ್ನು ಆರಂಭಿಸಿದೆ. ಗ್ರಾಹಕರಿಗೆ ಆರ್ಡರ್ ಮಾಡಿದ ಮರುದಿನವೇ ದಿನಸಿ ಉತ್ಪನ್ನಗಳನ್ನು ತಲುಪಿಸುವ ಬದ್ಧತೆಯನ್ನು ಪೂರೈಸುವ ನಿಟ್ಟಿನಲ್ಲಿ ಈ ಕೇಂದ್ರ ಕಾರ್ಯನಿರ್ವಹಿಸಲಿದೆ. ಸ್ಥಳೀಯ ಗ್ರಾಹಕ ಒಳನೋಟಗಳ ಆಧಾರದಲ್ಲಿ ಹುಬ್ಬಳ್ಳಿಯಲ್ಲಿ ಈ ಫುಲ್ ಫಿಲ್ಮೆಂಟ್ ಕೇಂದ್ರದಿಂದ 6,000 ಕ್ಕೂ ಅಧಿಕ ಉತ್ಪನ್ನಗಳನ್ನು ಗ್ರಾಹಕರ ಮನೆ ಬಾಗಿಲಿಗೆ ತಲುಪಿಸುವ ಉದ್ದೇಶವನ್ನು ಹೊಂದಿದೆ. ನಂದಿನಿ ಉತ್ಪನ್ನಗಳು, ನಾಗ ಮತ್ತು ವಿಜಯ್ ಸೇರಿದಂತೆ ರಾಜ್ಯದ ಜನಪ್ರಿಯ ಉತ್ಪನ್ನಗಳು ಸೇರಿದಂತೆ ಇನ್ನಿತರ ಬ್ರ್ಯಾಂಡ್ ಗಳ ಉತ್ಪನ್ನಗಳನ್ನು ಈ ಕೇಂದ್ರಗಳಿಂದ ವಿತರಿಸಲಾಗುತ್ತದೆ. ಈ ಮೂಲಕ ಪ್ರಾದೇಶಿಕ ಗ್ರಾಹಕರ ಅಗತ್ಯಗಳಿಗೆ ಅನುಗುಣವಾಗಿ ಉತ್ಪನ್ನಗಳನ್ನು ತಲುಪಿಸುವ ವ್ಯವಸ್ಥೆ ಇಲ್ಲಿಂದಲೇ ಆಗಲಿದೆ. ತಿಂಗಳಿಂದ ತಿಂಗಳಿಗೆ ಹುಬ್ಬಳ್ಳಿಯ ಆನ್ ಲೈನ್ ದಿನಸಿ ಮಾರುಕಟ್ಟೆಯು ಶೇ.15 ರಷ್ಟು ಹೆಚ್ಚಳ ಕಾಣುತ್ತಿದೆ. ಇದಲ್ಲದೇ, ಈ ಭಾಗದಲ್ಲಿ ತ್ವರಿತವಾದ ವಾಣಿಜ್ಯದ ಅಲಭ್ಯತೆಯಿಂದಾಗಿ ಗ್ರಾಹಕರಲ್ಲಿ ಮೌಲ್ಯಾಧಾರಿತ ಆಯ್ಕೆಯ ದಿನಸಿ ಪದಾರ್ಥಗಳಿಗೆ ಬೇಡಿಕೆ ಹೆಚ್ಚಳ ಕಂಡುಬರುತ್ತಿದೆ ಮತ್ತು ಅವರು ಆರ್ಡರ್ ಮಾಡಿದ ಮರುದಿನದ ಡೆಲಿವರಿಯನ್ನು ಹೆಚ್ಚುಆಯ್ಕೆ ಮಾಡಿಕೊಳ್ಳುವತ್ತ ತಮ್ಮ ಚಿತ್ತ ಹರಿಸುತ್ತಿದ್ದಾರೆ.

ಈ ಸೆಂಟರ್ ಆರಂಭದ ಬಗ್ಗೆ ಮಾತನಾಡಿದ ಈಸ್ಟರ್ನ್ ಕಾಂಡಿಮೆಂಟ್ಸ್ ನಲ್ಲಿ ಇ-ಕಾಮರ್ಸ್ ಅಂಡ್ ಮಾಡರ್ನ್ ಟ್ರೇಡ್ ಹೆಡ್ ಹಿತೇಶ್ ಅಗರ್ವಾಲ್ ಅವರು, ''2024 ರಲ್ಲಿ ಈಸ್ಟರ್ನ್ ತನ್ನ 40 ನೇ ವಾರ್ಷಿಕೋತ್ಸವವನ್ನು ಆಚರಿಸಿಕೊಳ್ಳುತ್ತಿದೆ ಮತ್ತು ನಾವು ಫ್ಲಿಪ್ ಕಾರ್ಟ್ ನೊಂದಿಗೆ ಪಾಲುದಾರಿಕೆಯನ್ನು ಹೊಂದುವ ಮೂಲಕ ಫ್ಲಿಪ್ ಕಾರ್ಟ್ ನ ವಿಸ್ತಾರವಾದ ವಿತರಣಾ ಜಾಲದ ವಿಸ್ತರಣೆಗೆ ಮತ್ತಷ್ಟು ಮೌಲ್ಯವನ್ನು ತಂದುಕೊಡಲಿದ್ದೇವೆ. ನಮ್ಮ ಪ್ರಮುಖ ಮಾರುಕಟ್ಟೆಗಳಲ್ಲಿ ಬ್ರ್ಯಾಂಡ್ ಅನ್ನು ಇನ್ನಷ್ಟು ವಿಸ್ತರಿಸಿಕೊಂಡು ನಮ್ಮ ವ್ಯವಹಾರವನ್ನು ವೃದ್ಧಿಸಿಕೊಳ್ಳಲು ಫ್ಲಿಪ್ ಕಾರ್ಟ್ ಪಾಲುದಾರಿಕೆಗೆ ನಮಗೆ ಪ್ರಮುಖವಾಗಿದೆಎಂದರು. ಫ್ಲಿಪ್ ಕಾರ್ಟ್ ಗ್ರೂಪ್ ನ ಚೀಫ್ ಕಾರ್ಪೊರೇಟ್ ಅಫೇರ್ಸ್ ಆಫೀಸರ್ ರಜನೀಶ್ ಕುಮಾರ್ ಅವರು ಮಾತನಾಡಿ, ''ಕರ್ನಾಟಕದಲ್ಲಿ ನಮ್ಮ ಮೂರನೇ ದಿನಸಿ ಫುಲ್ ಫಿಲ್ಮೆಂಟ್ ಸೆಂಟರ್ ಅನ್ನು ಆರಂಭಿಸಿರುವುದು ನಮ್ಮ ಗ್ರಾಹಕರಿಗೆ ತಾಜಾತನದ ದಿನಸಿ ಪದಾರ್ಥಗಳನ್ನು ತಲುಪಿಸುವ ನಮ್ಮ ಬದ್ಧತೆಗೆ ಹಿಡಿದ ಕನ್ನಡಿಯಾಗಿದೆ. ಅಲ್ಲದೇ, ಇದು ರಾಜ್ಯದ ಗ್ರಾಹಕರಿಗೆ ಫ್ಲಿಪ್ ಕಾರ್ಟ್ ನ ಸಾಮೀಪ್ಯ ಇನ್ನಷ್ಟು ಗಟ್ಟಿಗೊಂಡಿರುವುದಕ್ಕೆ ಇದು ಸಾಕ್ಷಿಯಾಗಿದೆ. ಗ್ರಾಹಕರ ಮನೆ ಬಾಗಿಲಿಗೆ ದೈನಂದಿನ ಅಗತ್ಯ ವಸ್ತುಗಳನ್ನು ಆರ್ಡರ್ ಮಾಡಿದ ಮರುದಿನವೇ ಒದಗಿಸುವ ನಮ್ಮ ಬದ್ಧತೆಯನ್ನು ಮತ್ತಷ್ಟು ಹೆಚ್ಚಿಸಿದೆ.ಎಂದು ಹೇಳಿದರು.

## ಸೌಂದರ್ಯಕ್ಕೆ ಕಹಿಬೇವಿನ ಎಲೆ ಪ್ರಮುಖ ಪಾತ್ರ

### ಬ್ಯೂಟಿ ಟಿಪ್ಸ್



ಮುಖದಲ್ಲಿನ ಮೊಡವೆ ಕಲೆಗಳನ್ನ ನಿವಾರಣೆ ಮಾಡೋದ್ರಲ್ಲಿ ಕಹಿಬೇವಿನ ಎಲೆ ಪ್ರಮುಖ ಪಾತ್ರ ವಹಿಸುತೆ. ಇದಕ್ಕಾಗಿ ನೀವು ಕಹಿಬೇವು ಎಲೆಗಳನ್ನ ಒಣಗಿಸಿ ಬಳಿಕ ಅದನ್ನ ಪೌಡರ್ ರೀತಿ ರುಬ್ಬಿಟ್ಟುಕೊಳ್ಳಿ. ಇದಕ್ಕೆ ನಿತ್ಯ ರೋಸ್ ವಾಟರ್ ಇಲ್ಲವೇ ನೀರನ್ನ ಹಾಕಿ ನಿತ್ಯ ಮುಖಕ್ಕೆ ಹಚ್ಚಿಕೊಳ್ಳಿ. ಕೆಲ ನಿಮಿಷಗಳಲ್ಲೇ ಮುಖವನ್ನ ತೊಳೆದುಕೊಳ್ಳಿ. ಈ ರೀತಿ ಮಾಡೋದ್ರಿಂದ ಮೊಡವೆ ಕಲೆಗಳು ಮಂಗಮಾಯವಾಗುತ್ತೆ. ಒಂದು ಲೀಟರ್ ನೀರಿನಲ್ಲಿ ಒಂದು ಮುಷ್ಟಿಯಷ್ಟು ಕಹಿಬೇವು ಹಾಕಿ ಬೇಯಿಸಿ. ನೀರಿನ ಬಣ್ಣ ಬದಲಾಗುತ್ತಿದ್ದಂತೆ ಎಲೆಯನ್ನ ತೆಗೆದು ಆ ನೀರನ್ನ ಬಾಟಲ್ ನಲ್ಲಿ ತುಂಬಿಟ್ಟುಕೊಳ್ಳಿ. ಇದನ್ನ ನೀವು ಟೋನರ್ ರೀತಿ ಬಳಸಬಹುದು. ನಿತ್ಯ ಮಲಗುವ ಮುನ್ನ ಇದನ್ನ ಮುಖಕ್ಕೆ ಹಚ್ಚಿಕೊಂಡು ಮಲಗೋದ್ರಿಂದ ವೈಟ್ಹೆಡ್ಸ್, ಬ್ಲಾಕ್ ಹೆಡ್ಸ್ ಸಮಸ್ಯೆಯಿಂದ ಪಾರಾಗಬಹುದು. ಕಹಿಬೇವಿನ ಎಣ್ಣೆಯನ್ನ ನಿತ್ಯ ಮಲಗುವ ಮುನ್ನ ಮುಖಕ್ಕೆ ಲೇಪಿಸಿ ಬೆಳಗ್ಗೆ ತಣ್ಣೀರಿನಿಂದ ವಾಶ್ ಮಾಡಿ. ಇದ್ರಿಂದ ನಿಮ್ಮ ಮುಖದ ಕಾಂತಿ ಇನ್ನಷ್ಟು ಹೆಚ್ಚಲಿದೆ.

ಫಂಗಸ್ ಸೋಂಕು ತಾಕಿದ ಉಗುರಿಗೆ ಈ ಎಣ್ಣೆಯಿಂದ ಮಸಾಜ್ ಮಾಡೋದ್ರಿಂದ ಫಂಗಸ್ ಸೋಂಕು ಕಡಿಮೆಯಾಗಲಿದೆ. ಮುಖ ಶ್ವೇತವರ್ಣ ಆಗಬೇಕು ಅಂದ್ರೂನೂ ನೀವು ಕಹಿಬೇವು ಬಳಕೆ ಮಾಡಬಹುದು. ಇದಕ್ಕಾಗಿ ನೀವು ಕಹಿಬೇವನ್ನ ಚೆನ್ನಾಗಿ ತೊಳೆದು ಒಣಗಿಸಿಕೊಳ್ಳಿ. ಬಳಿಕ ಇದನ್ನ ಪೌಡರ್ ಮಾಡಿಕೊಳ್ಳಿ. ಇದಕ್ಕೆ ರೋಸ್ ವಾಟರ್, ಮೊಸರು ಹಾಗೂ ಸ್ವಲ್ಪ ಹಾಲನ್ನ ಸೇರಿಸಿ ಪೇಸ್ಟ್ ಮಾಡಿ. ಇದನ್ನ ನಿತ್ಯ ಮುಖಕ್ಕೆ ಹಚ್ಚಿಕೊಂಡು 15 ನಿಮಿಷಗಳ ಬಳಿಕ ವಾಶ್ ಮಾಡಿ. ಕೆಲವೇ ದಿನಗಳಲ್ಲಿ ಉತ್ತಮ ಫಲಿತಾಂಶ ನಿಮಗೆ ತಿಳಿಯಲಿದೆ.

## ರಾಶಿ ಭವಿಷ್ಯ



ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ-9964739507
www.jyotishyavaastu.com

**ಮೇಷ:** ಸ್ನೇಹಿತರಿಂದ ನಿಂದನೆ, ಪರರ ಧನ ಪ್ರಾಪ್ತಿ, ಉದ್ಯೋಗದಲ್ಲಿ ಬಡ್ತಿ, ಶತ್ರುನಾಶ, ಭಾಗ್ಯ ವೃದ್ಧಿ.

**ವೃಷಭ:** ಋಣ ಭಾದೆ, ದುಷ್ಟಬುದ್ಧಿ, ಮನಸ್ತಾಪ, ವ್ಯರ್ಥ ಧನ ಹಾನಿ, ಮೃತ್ಯು ಭಯ.

**ಮಿಥುನ:** ದಾಯಾದಿ ಕಲಹ, ಅಧಿಕ ಖರ್ಚು, ದೂರ ಪ್ರಯಾಣ, ಮನಶಾಂತಿ, ಸ್ವಲ್ಪ ಹಣ ಬಂದರೂ ಉಳಿಯುವುದಿಲ್ಲ.

**ಕಟಕ:** ಉತ್ತಮ ವ್ಯಾಪಾರ ವಹಿವಾಟು, ಸರ್ಕಾರಿ ಕೆಲಸಗಳಲ್ಲಿ ಪ್ರಗತಿ, ವಸ್ತ್ರ ಖರೀದಿ,

**ಸಿಂಹ:** ವಾಹನ ಖರೀದಿ, ಸಮಾಜದಲ್ಲಿ ಗೌರವ ಕೀರ್ತಿ, ವ್ಯಾಪಾರದಲ್ಲಿ ಧನ ಲಾಭ, ವಿದ್ಯಾಭ್ಯಾಸದಲ್ಲಿ ಪ್ರಗತಿ.

**ಕನ್ಯಾ:** ಮಾಡುವ ಕೆಲಸದಲ್ಲಿ ಜಯ, ಮಿತ್ರರ ಸಹಾಯ, ಮಾತಿನ ಚಕಮಕಿ, ವಿವಾಹಕ್ಕೆ ತೊಂದರೆ.

**ತುಲಾ:** ಗುರು ಹಿರಿಯರ ಭೇಟಿ, ಧನ ಲಾಭ, ಮಾತಿನಿಂದ ಅನರ್ಥ, ಮನಸ್ಸಿನಲ್ಲಿ ಕೆಟ್ಟ ಆಲೋಚನೆಗಳು

**ವೃಶ್ಚಿಕ:** ನಾನಾ ರೀತಿಯ ತೊಂದರೆಗಳು, ಕಾರ್ಯ ವಿಕಲ್ಪ, ಚಂಚಲ ಮನಸ್ಸು, ಆಸ್ತಿ ವಿಚಾರದಲ್ಲಿ ಕಲಹ, ಶತ್ರು ನಾಶ.

**ಧನಸ್ಸು:** ಯತ್ನ ಕಾರ್ಯಗಳಲ್ಲಿ ಜಯ, ಕುಟುಂಬ ಸೌಖ್ಯ, ವ್ಯಾಪಾರದಲ್ಲಿ ಲಾಭ, ಉದ್ಯೋಗದಲ್ಲಿ ಪ್ರಗತಿ

**ಮಕರ:** ಮಹಿಳೆಯರಿಗೆ ತೊಂದರೆ, ಅಧಿಕಾರಿಗಳಲ್ಲಿ ಕಲಹ, ದಾಂಪತ್ಯದಲ್ಲಿ ಸಮಸ್ಯೆ, ನಂಬಿದ ಜನರಿಂದ ಅಶಾಂತಿ.

**ಕುಂಭ:** ವಿರೋಧಿಗಳಿಂದ ಕುತಂತ್ರ, ಆದಾಯಕ್ಕಿಂತ ಖರ್ಚು ಜಾಸ್ತಿ, ವಾಹನ ರಿಪೇರಿ, ಆಲಸ್ಯ ಮನೋಭಾವ. ಅಶಾಂತಿ.

**ಮೀನ:** ಶೀತ ಸಂಬಂಧ ರೋಗ,ಭೂ ಲಾಭ, ಮಾತೃವಿನ ಆಶೀರ್ವಾದ, ಭೋಗ ವಸ್ತು ಪ್ರಾಪ್ತಿ, ಮನಶಾಂತಿ.

## ಸಸ್ಯಗಳ ಮೆಚ್ಚುಗೆ ದಿನ




ಏಪ್ರಿಲ್ 13 ರಂದು ಅಂತರರಾಷ್ಟ್ರೀಯ ಸಸ್ಯ ಮೆಚ್ಚುಗೆಯ ದಿನದಂದು, ಪ್ರಪಂಚದಾದ್ಯಂತ ಸಸ್ಯ ಪ್ರೇಮಿಗಳು ಈ ಹಸಿರು ಆಮ್ಲಜನಕ ಯಂತ್ರಗಳಿಗೆ ತಮ್ಮ ಮೆಚ್ಚುಗೆಯನ್ನು ವ್ಯಕ್ತಪಡಿಸಲು ಒಟ್ಟಾಗಿ ಸೇರುತ್ತಾರೆ. ಈ ನೈಸರ್ಗಿಕ ಉಡುಗೊರೆಯನ್ನು ಸರಿಯಾಗಿ ಗೌರವಿಸಲು, ಈವೆಂಟ್ ಪರಿಸರಕ್ಕೆ ಸಸ್ಯಗಳು ಒದಗಿಸುವ ಅಸಂಖ್ಯಾತ ಪ್ರಯೋಜನಗಳನ್ನು ಚರ್ಚಿಸುತ್ತದೆ, ಉದಾಹರಣೆಗೆ ಗಾಳಿಯ ಗುಣಮಟ್ಟವನ್ನು ಸುಧಾರಿಸುವುದು, ಸಣ್ಣ ವನ್ಯಜೀವಿ ಆವಾಸಸ್ಥಾನಗಳನ್ನು ರಚಿಸುವುದು ಮತ್ತು ವಾಸಸ್ಥಾನಗಳನ್ನು ಹೆಚ್ಚು ದೃಷ್ಟಿಗೆ ಆಕರ್ಷಕವಾಗಿ ಮಾಡುವುದು. ಇದಲ್ಲದೆ, ಈ ದಿನವು ವಸಂತಕಾಲದಲ್ಲಿ ಸಂಭವಿಸುತ್ತದೆ, ಇದು ಪ್ರಧಾನ ಮರ ಮತ್ತು ಸಸ್ಯಗಳ ಬೆಳವಣಿಗೆಯ ಋತುವಾಗಿದೆ. 66%ನಷ್ಟು ಮನೆಗಳು ಈಗಾಗಲೇ ಕನಿಷ್ಠ ಒಂದು ಮನೆ ಗಿಡವನ್ನು ಹೊಂದಿದ್ದು, ಪ್ರಪಂಚದಾದ್ಯಂತ ಹೆಚ್ಚಿನ ಸಂಖ್ಯೆಯ ಕುಟುಂಬಗಳು ಇದನ್ನು ಅನುಸರಿಸುತ್ತಿವೆ. ಈ ದಿನದ ಇತಿಹಾಸವು ನಮಗೆ ಇನ್ನೂ ತಿಳಿದಿಲ್ಲವಾದರೂ, ಸಸ್ಯಗಳು ನಮ್ಮ ಜೀವನದ ಅವಿಭಾಜ್ಯ ಅಂಗವಾಗಿದೆ - ಮತ್ತು ನಮ್ಮ ಮನೆಗಳಲ್ಲಿ ನಾವೆಲ್ಲರೂ ಸಿಕ್ಕಿಬಿದ್ದಿದ್ದೇವೆ. ಪ್ರಾಚೀನ ನಾಗರಿಕತೆಗಳ ಹೊರಹೊಮ್ಮುವಿಕೆಯಿಂದಲೂ, ಜನರು ಸಸ್ಯಗಳಿಗೆ ಆಕರ್ಷಿತರಾಗಿದ್ದಾರೆ. ಬಹು ಪುರಾತತ್ವಶಾಸ್ತ್ರದ ಸ್ಥಳಗಳು ಕುಂಡಗಳಲ್ಲಿ ಬೆಳೆದ ಸಸ್ಯಗಳ ಪುರಾವೆಗಳನ್ನು ತೋರಿಸುತ್ತವೆ ಮತ್ತು 16 ನೇ ಶತಮಾನದ ಈಜಿಪ್ಟಿನ ಸಮಾಧಿ ವರ್ಣಚಿತ್ರಗಳು ಅಲಂಕಾರಿಕ ತೋಟಗಾರಿಕೆ ಮತ್ತು ಭೂದೃಶ್ಯ ವಿನ್ಯಾಸದ ಕೆಲವು ಆರಂಭಿಕ ಪುರಾವೆಗಳನ್ನು ಒಳಗೊಂಡಿವೆ.17 ನೇ ಶತಮಾನದೊಂದಿಗೆ ವಸಾಹತುಶಾಹಿ ಬಂದಿತು ಮತ್ತು ಹೀಗೆ ವಿವಿಧ ಜಾತಿಯ ಸಸ್ಯಗಳಿಗೆ ಒಡ್ಡಿಕೊಳ್ಳುವುದನ್ನು ಹೆಚ್ಚಿಸಿತು. ಅನ್ವೇಷಕರು ವಿಲಕ್ಷಣ ಸಸ್ಯಗಳನ್ನು ಕೃಷಿಗಾಗಿ ತಮ್ಮ ಭೂಮಿಗೆ ಹಿಂತಿರುಗಿಸುತ್ತಾರೆ ಮತ್ತು ಕಟ್ಟಡಗಳ ಒಳಗೆ ಸಸ್ಯಗಳನ್ನು ಬೆಳೆಸುವ ಕಲ್ಪನೆಯು ಜನಪ್ರಿಯವಾಯಿತು. ಉತ್ತರ ಅಮೇರಿಕಾ, ಏಷ್ಯಾ, ಆಸ್ಟ್ರೇಲಿಯಾ ಮತ್ತು ಆಫ್ರಿಕಾದಂತಹ ರಾಷ್ಟ್ರಗಳಿಂದ ಬ್ರಿಟನ್ನ ವಿವಿಧ ಉಷ್ಣವಲಯದ ಸಸ್ಯಗಳ ಪರಿಚಯವು ಒಳಾಂಗಣ ಸಸ್ಯಗಳ ಜನಪ್ರಿಯತೆಯನ್ನು ಹೆಚ್ಚಿಸಿತು ಮತ್ತು ಬಹುಶಃ ವಿವಿಧ ತೋಟಗಾರಿಕೆ ವಿರೋಧಾಭಾಸಗಳ ಆವಿಷ್ಕಾರದ ಮೇಲೆ ಪ್ರಭಾವ ಬೀರಿತು. ಆವಿಷ್ಕಾರವು ಅತ್ಯಂತ ಮುಂಚಿನ ಮತ್ತು ಆ ಸಮಯದಲ್ಲಿ ಅತ್ಯಧಿಕವಾದ ಪ್ರಭಾವವನ್ನು ಬೀರಿತು, 1930 ರ ದಶಕದಲ್ಲಿ ಲಂಡನ್ ವೈದ್ಯ ನಥಾನಿಯಲ್ ಬ್ಯಾಗ್ಶಾ ವಾರ್ಡ್ ರಚಿಸಿದ ಸಸ್ಯಗಳನ್ನು ಬೆಳೆಸಲು ಮತ್ತು ಸಾಗಿಸಲು ಪರಿಪೂರ್ಣವಾದ ಮೊಹರು ಮಾಡಿದ ಗಾಜಿನ ಕೇಸ್ 'ವಾರ್ಡಿಯನ್ ಕೇಸ್' ಆಗಿತ್ತು. ವಾರ್ಡ್ನ ಆವಿಷ್ಕಾರವು ಬ್ರಿಟನ್ನಗಳಿಗೆ ಸಸ್ಯಗಳನ್ನು ಸುಲಭವಾಗಿ ಆಮದು ಮಾಡಿಕೊಳ್ಳಲು ಅವಕಾಶ ಮಾಡಿಕೊಟ್ಟಿತು ಮತ್ತು ಪ್ರಪಂಚದಾದ್ಯಂತ ಅವುಗಳನ್ನು ಹೇಗೆ ಬೆಳೆಸಲಾಗುತ್ತದೆ ಎಂಬುದನ್ನು ಶಾಶ್ವತವಾಗಿ ಬದಲಾಯಿಸಿತು.

# ಧರ್ಮವನ್ನು ನಾವು ರಕ್ಷಿಸಿದರೆ ಧರ್ಮ ನಮ್ಮನ್ನು ರಕ್ಷಿಸುತ್ತದೆ

**ತುಮಕೂರು:** ಶಂಕರಚಾರ್ಯರಿಗೂ ಹಾಗೂ ಶಂಕರನಿಗೂ ಯಾವುದೇ ವ್ಯತ್ಯಾಸವಿಲ್ಲ ಶಂಕರಚಾರ್ಯರು ಶಂಕರನ ಅವತಾರವೇ ಆಗಿದ್ದಾರೆ, ಸಮಾಜದಲ್ಲಿ ಇತರರಿಗೆ ಕ್ಷೇಮವನ್ನು ಬಯಸುವುದು ಇತರರಿಗೆ ಕ್ಷೇಮವನ್ನು ಬಯಸುವುದು ಇತರರಿಗೆ ಒಳಿತನ್ನು ಬಯಸುವುದು ಎಲ್ಲರನ್ನೂ ಸಮಾನವಾಗಿ ಕಾಣುವುದು ಇದು ಜಗದ್ಗುರು ಆದಿಶಂಕರರ ತತ್ವ, ಎಲ್ಲರಲ್ಲೂ ದೇವರಿದ್ದಾನೆ ಅಹಂ ಬ್ರಹ್ಮಾಸ್ಮಿ ನಾವೇ ದೇವರು ಎಂಬುದನ್ನು ಪ್ರತಿಪಾದಿಸಿದ ಶಂಕರರು ಸಮಾಜದಲ್ಲಿದ್ದ ನ್ಯೂನ್ಯತೆಗಳನ್ನು ತಮ್ಮ ವಾದದ ಮೂಲಕ ಪರಿಹರಿಸಿ ಸಮಾಜವನ್ನು ಸದ್ಮಾರ್ಗದಲ್ಲಿ ನಡೆಯುವಂತೆ ಮಾಡಿದರು. ಇದಕ್ಕೆ ಇಡೀ ಸಮುದಾಯ ಹಾಗೂ ಸಮಾಜದ ಶಂಕರರಿಗೆ ಕೃತಜ್ಞರಾಗಿರಬೇಕು ಹಾಗೂ ಪರರ ಸಂಪತ್ತು ಪರರ ಧನ ಹಾಗೂ ಪರರಿಗೆ ಅಹಿತವನ್ನು ಬಯಸುವುದೇ ಅಧರ್ಮದ ಕಾರ್ಯ ಸರ್ವೇ ಜನ ಸುಖಿನೋ ಭವಂತು ಎಂದು ಪ್ರತಿಪಾದಿಸುವ ಹಿಂತೂ ಧರ್ಮವೂ ಶ್ರೇಷ್ಠವಾದ ಧರ್ಮವಾಗಿದೆ ಎಂದು ಶೃಂಗೇರಿ ಶ್ರೀ ವಿಧುಶೇಖರ್ ಭಾರತಿ ಮಹಾಸ್ವಾಮಿಗಳು ತಿಳಿಸಿದರು.

ತುಮಕೂರು ನಗರದ ಬಿ.ಹೆಚ್.ರಸ್ತೆಯಲ್ಲಿರುವ ಶಂಕರ ಸೇವಾ ಸಮಿತಿ ಶೃಂಗೇರಿ ಶಂಕರ ಮಠಕ್ಕೆ ಜಗದ್ಗುರುಗಳು ಧಾರ್ಮಿಕ ಕಾರ್ಯಕ್ರಮಗಳನ್ನು ನೆರವೇರಿಸಲು ಭೇಟಿ ನೀಡಿದ್ದರು ಇತ್ತೀಚಿಗೆ ನಡೆದ ತಮ್ಮ ಭೇಟಿಯ ಸಂದರ್ಭದಲ್ಲಿ ಚಂದ್ರಮೌಳೇಶ್ವರ ಲಿಂಗ ಪ್ರತಿಷ್ಠಾಪನೆ ಹಾಗೂ ಗೋಪುರದ ವಿಮಾನ ಕಲಶ ಸ್ಥಾಪನೆಯನ್ನು ನೆರವೇರಿಸಿದರು.



ಕಾರ್ಯಕ್ರಮದಲ್ಲಿ ತಮ್ಮ ಆಶೀರ್ವಚನದಲ್ಲಿ ಮಾತನಾಡಿದ ಗುರುಗಳಾದ ಶ್ರೀವಿಧುಶೇಖರ್ ಭಾರತಿ ಮಹಾಸ್ವಾಮೀಜಿಯವರು ಮಾತನಾಡುತ್ತಾ ಪ್ರತಿಯೊಬ್ಬರೂ ಶಂಕರರನ್ನು ತಿಳಿಯಬೇಕು ಶಂಕರಾಚಾರ್ಯರನ್ನು ಓದಬೇಕು ಅವರ ತತ್ವ ಸಿದ್ಧಾಂತ ಜಗತ್ತಿಗೆ ಮಾದರಿಯಾಗಿದೆ ಧರ್ಮವನ್ನು ಸಂರಕ್ಷಿಸುವುದರಲ್ಲಿ ಶಂಕರರ ಕಾರ್ಯ ಶ್ಲಾಘನೀಯವಾದದ್ದು ಈ ಸಂಬಂಧ ನಾವೆಲ್ಲರೂ ಶಂಕರಚಾರ್ಯರಿಗೆ ಕೃತಜ್ಞರಾಗಿರಬೇಕು ಎಂದು ತಿಳಿಸಿದರು.

ನಾಲ್ಕು ವೇದಗಳನ್ನು ಪ್ರತಿಪಾದಿಸಲು ಹಾಗೂ ನಾಲ್ಕು ವೇದಗಳನ್ನು ಉದ್ದರಿಸಲು ಭಾರತದಾದ್ಯಂತ ಕಾಲ್ನಡಿಗೆಯಲ್ಲಿ ತಿರುಗಾಡಿ ಭಾರತದಲ್ಲಿ ನಾಲ್ಕು ಪೀಠಗಳನ್ನು ಸ್ಥಾಪಿಸಿದ್ದಾರೆ ಅದರಲ್ಲಿ ಶೃಂಗೇರಿ ಪೀಠವು ಒಂದಾಗಿದೆ. ಶೃಂಗೇರಿ ಸಂಸ್ಥಾನವು ಧರ್ಮ ಕಾರ್ಯಗಳಲ್ಲದೆ ಬೇರಿನ್ ಯಾವುದೇ ಕಾರ್ಯಗಳನ್ನು ತನ್ನನ್ನು ತಾನು ತೊಡಗಿಸಿಕೊಳ್ಳುವುದಿಲ್ಲ ಶಂಕರ ತತ್ವ ಪ್ರತಿಪಾದನೆ ಹಾಗೂ ಧರ್ಮ ಕಾರ್ಯವಷ್ಟೇ ಶೃಂಗೇರಿ ಪೀಠದ ಕರ್ತವ್ಯವೆಂದು ನಾವು ಭಾವಿಸಿದ್ದೇವೆ ಎಂದು ತಮ್ಮ ಅನುಗ್ರಹದಲ್ಲಿ ಭಾಷಣದಲ್ಲಿ ತಿಳಿಸಿದರು. ಎಲ್ಲರಿಗೂ ಭಗವಂತ ಒಳ್ಳೆಯದನ್ನು ಮಾಡಲಿ ಕಾಲಕಾಲಕ್ಕೆ ಮಳೆಯಾಗಲಿ, ಬೆಳೆಯಾಗಲಿ ಇಡೀ ಸಮಾಜ ಸುಭಿಕ್ಷವಾಗಿರಲಿ ಎಂದು ಹಾರೈಸಿದರು. ಶಂಕರ ಸೇವಾ ಸಮಿತಿಯ ಕಾರ್ಯ ವೈಖರಿಯನ್ನು ಆಲಿಸಿದ ಶ್ರೀಗಳು ಇದೇ ರೀತಿಯಾಗಿ ತಮ್ಮ ಧರ್ಮ ಕಾರ್ಯವನ್ನು ಮುಂದುವರಿಸಿ ಎಂದು ಕರೆ ಕೊಟ್ಟರು.

ಕಾರ್ಯಕ್ರಮದಲ್ಲಿ ತುಮಕೂರು ಜಿಲ್ಲಾ ಬ್ರಾಹ್ಮಣ ಸಭಾದ ಅಧ್ಯಕ್ಷರಾದ ಹೆಚ್.ಎನ್.ಚಂದ್ರಶೇಖರ್ ಹಾಗೂ ಕಾರ್ಯಕಾರಿ ಮಂಡಳಿ ಸದಸ್ಯರುಗಳು ಶಂಕರ ಸೇವಾ ಸಮಿತಿಯ ಅಧ್ಯಕ್ಷರಾದ ನಂಜುಂಡೇಶ್ವರ ಹಾಗೂ ಕಾರ್ಯಕಾರಿ ಮಂಡಳಿ ಸದಸ್ಯರುಗಳು ಹಾಗೂ ಹಲವಾರು ಭಕ್ತ ವೃಂದದವರು ಹಾಜರಿದ್ದರು. ಕಾರ್ಯಕ್ರಮದಲ್ಲಿ ತುಮಕೂರು ಸಮಾಜದ ಹಲವಾರು ಮುಖಂಡರುಗಳು ಗುರುಗಳಿಗೆ ಫಲ ಸಮರ್ಪಣೆ ಮಾಡಿ ಆಶೀರ್ವಾದ ಪಡೆದರು.

## ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ 564 ಅಂಕ ಪಡೆದ ದಿವ್ಯ ಜಿ

**ಕೋಲಾರ:** ಪ್ರಸಕ್ತ ಸಾಲಿನ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ನಗರದ ಸರ್ಕಾರಿ ಬಾಲಕಿಯರ ಪದವಿ ಪೂರ್ವ ಕಾಲೇಜಿನ ವಿದ್ಯಾರ್ಥಿ ದಿವ್ಯ ಜಿ 600ಕ್ಕೆ 564 ಅಂಕಗಳನ್ನು ಪಡೆದು ಕಾಲೇಜಿಗೆ ಮತ್ತು ಪೋಷಕರಿಗೆ ಕೀರ್ತಿಯನ್ನು ತಂದಿರುತ್ತಾರೆ.



ದಿವ್ಯ ಜಿ ಅವರು ತಾಲೂಕಿನ ಹೊಳಲಿ ಗ್ರಾಮದ ಗೋವಿಂದಪ್ಪ ಮತ್ತು ವಿಜಯಮ್ಮ ದಂಪತಿಗಳ ಪುತ್ರಿಯಾಗಿದ್ದು, ತಂದೆ ಆರು ವರ್ಷಗಳಿಂದಲೂ ಅನಾರೋಗ್ಯ ಪೀಡಿತರಾಗಿದ್ದರೂ ಕಡುಬಡತನದಲ್ಲಿ ಬೆಳೆದ ದಿವ್ಯ ಜಿ ವಿದ್ಯಾಭ್ಯಾಸದ ಜೊತೆಗೆ ವ್ಯವಸಾಯದಲ್ಲಿ ಸಹ ತೊಡಗಿಸಿಕೊಂಡು ಕುಟುಂಬಕ್ಕೆ ಆಸರೆಯಾಗಿದ್ದು, ಬಡತನ ಮತ್ತು ತಂದೆಯವರ ಅನಾರೋಗ್ಯವನ್ನು ಲೆಕ್ಕಿಸದೆ ಇಂದು ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಉತ್ತಮ ಅಂಕಗಳನ್ನು ಪಡೆದು ಸಾಧಿಸುವ ಛಲವಿದ್ದರೆ ಬಡತನ ಅಡ್ಡಿಯಿಲ್ಲ ಎಂಬುವುದು ದಿವ್ಯ ಅವರ ಜೀವನದಲ್ಲಿ ಸಾಬೀತಾಗಿದೆ. ಕನ್ನಡ 98, ಇಂಗ್ಲೀಷ್ 78, ಇತಿಹಾಸ 97, ಅರ್ಥಶಾಸ್ತ್ರ 97, ವ್ಯವಹಾರ ಅಧ್ಯಯನ 96, ಲೆಕ್ಕಶಾಸ್ತ್ರ 98 ಅಂಕಗಳನ್ನು ಗಳಿಸಿದ್ದಾರೆ. ಕಳೆದ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ 625ಕ್ಕೆ 607 ಅಂಗಳನ್ನು ಗಳಿಸಿ ಶಾಪೂರು ಸರ್ಕಾರಿ ಪ್ರೌಢಶಾಲೆಗೆ ದ್ವಿತೀಯ ಸ್ಥಾನ ಗಳಿಸಿದ್ದರು. ಉತ್ತಮ ಸಾಧನೆಗೈದ ದಿವ್ಯ ಜಿ ಅವರನ್ನು ಕಾಲೇಜಿನ ಆಡಳಿತಮಂಡಳಿ, ಬೋಧಕ, ಬೋಧಕೇತ್ತರ ಸಿಬ್ಬಂದಿ ಹಾಗೂ ಹೊಳಲಿ ಗ್ರಾಮಸ್ಥರು ಅಭಿನಂದಿಸಿದ್ದಾರೆ.

## ಜೂನಿಯರ್ ಇಂಜನಿಯರ್ ಹುದ್ದೆಗಳ ನೇಮಕಾತಿಗೆ ಅರ್ಜಿ

**ಚಿಕ್ಕಬಳ್ಳಾಪುರ:** ಸಿಬ್ಬಂದಿ ನೇಮಕಾತಿ ಆಯೋಗವು ಜೂನಿಯರ್ ಇಂಜನಿಯರ್ ಹುದ್ದೆಗಳ ನೇಮಕಾತಿಗಾಗಿ ಕಂಪ್ಯೂಟರ್ ಅಧಾರಿತ ಪರೀಕ್ಷೆಯನ್ನು ನಡೆಸುತ್ತಿದ್ದು, ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತ ಅಭ್ಯರ್ಥಿಗಳು ಆನ್‌ಲೈನ್ ಮುಖಾಂತರ www.ssckkr.kar.nic.in ಮತ್ತು https://ssc.nic.inನಲ್ಲಿ ಏಪ್ರಿಲ್ 18 ರೊಳಗೆ ಅರ್ಜಿಯನ್ನು ಸಲ್ಲಿಸಬಹುದು. ಅರ್ಜಿ ಶುಲ್ಕ 100 ರೂ. ನಿಗದಿ ಮಾಡಲಾಗಿದೆ. (ಮಹಿಳೆ/ ಖಅ/ ಖಖ/ಕಥಾಅ/ಇಖಬ ವರ್ಗಗಳಿಗೆ ಯಾವುದೇ ಶುಲ್ಕವಿಲ್ಲ). ಹೆಚ್ಚಿನ ಮಾಹಿತಿಗಾಗಿ ಸಹಾಯವಾಣಿ ಸಂಖ್ಯೆ: 080-25502520 ಗೆ ಸಂಪರ್ಕಿಸಬಹುದೆಂದು ಜಿಲ್ಲಾ ಉದ್ಯೋಗಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಂಬೇಡ್ಕರ್ ಜಯಂತಿ ಯಶ್ವಸಿಗೊಳಿಸಲು ಮನವಿ



**ಚಾಮರಾಜನಗರ:** ಜಿಲ್ಲಾಡಳಿತ, ಸಮಾಜ ಕಲ್ಯಾಣ ಇಲಾಖೆ ಹಾಗೂ ದಲಿತ ಸಂಘಟನೆಗಳ ಒಕ್ಕೂಟದ ವತಿಯಿಂದ ನಗರದಲ್ಲಿ ಏ. 14 ರಂದು ಭಾನುವಾರ ನಡೆಯುವ ಡಾ. ಬಿ. ಆರ್. ಅಂಬೇಡ್ಕರ್‌ರವರ ಜಯಂತಿ ಸಮಾರಂಭದಲ್ಲಿ ಸಮುದಾಯದ ಮುಖಂಡರು ಹಾಗೂ ಅಂಬೇಡ್ಕರ್ ಅನುಯಾಯಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಯಶ್ವಸಿಗೊಳಿಸಿಕೊಡುವಂತೆ ಕರ್ನಾಟಕ ರಾಜ್ಯ ದಲಿತ ಸಂಘರ್ಷ ಸಮಿತಿ (ಡಿ. ಜಿ. ಸಾಗರ್‌ಬಣ)ದ ಸಂಚಾಲಕ ಸಿ.ಎಂ.ಶಿವಣ್ಣ ಮನವಿ ಮಾಡಿದರು.

ನಗರದ ಅಂಬೇಡ್ಕರ್ ಭವನದಲ್ಲಿ ನಡೆದ ದಲಿತ ಸಂಘಟನೆಗಳ ಒಕ್ಕೂಟದ ಸಭೆಯಲ್ಲಿ ಮಾತನಾಡಿದ ಅವರು, ಅಂದು ಬೆಳಿಗ್ಗೆ 10 ಗಂಟೆಗೆ ಪ್ರವಾಸಿಮಂದಿರದಿಂದ ನಗರಪೇಟೆಪ್ರ್ಯಮರಿ ಶಾಲೆಯವರಗೆ ಕಲಾ ತಂಡಗಳೊಂದಿಗೆ ಬಾಬಾ ಡಾ. ಬಿ. ಆರ್. ಅಂಬೇಡ್ಕರ್ ರವರ ಭಾವಚಿತ್ರ ಮೆರವಣಿಗೆ ನಡೆಯುತ್ತದೆ. ನಂತರ ಪ್ರೇಟೆಪ್ರೈಮರಿ ಶಾಲಾವರಣದಲ್ಲಿ ವೇದಿಕೆ ಕಾರ್ಯಕ್ರಮ ನಡೆಯಲಿದೆ. ಈ ಸಮಾರಂಭಕ್ಕೆ ಎಲ್ಲ ಸಮುದಾಯದ ಮುಖಂಡರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಯಶ್ವಸಿಗೊಳಿಸಿಕೊಡಬೇಕು ಎಂದು ಶಿವಣ್ಣ ಕೋರಿದರು.

ಜನಹಿತಶಕ್ತಿ ಹೋರಾಟ ಸಮಿತಿಯ ರಾಮಸಮುದ್ರ ಸುರೇಶ್ ಮಾತನಾಡಿ, ವಿಶ್ವಜ್ಞಾನಿ ಬಾಬಾ ಸಾಹೇಬ್ ಡಾ.ಬಿ.ಆರ್.ಅಂಬೇಡ್ಕರ್ ರವರ ಜಯಂತಿ ಸಮಾರಂಭವನ್ನು ಅದ್ದೂರಿಯಾಗಿ ಮಾಡಲು ಜಿಲ್ಲಾಡಳಿತ, ಸಮಾಜ ಕಲ್ಯಾಣ ಇಲಾಖೆ, ದಲಿತ ಸಂಘರ್ಷ ಸಮಿತಿ ನಿರ್ಧರಿಸಿದೆ. ಅಂಬೇಡ್ಕರ್ ಅವರು ಒಂದು ಸಮುದಾಯದ ಆಸ್ತಿಯಲ್ಲ. ಸರ್ವರಿಗೂ ಸಮಾನತೆ ಕೊಟ್ಟಿದ್ದಾರೆ. ಆಗಾಗಿ ಅಂದಿನ ಕಾರ್ಯಕ್ರಮದಲ್ಲಿ ಎಲ್ಲ ಸಮುದಾಯದ ಮುಖಂಡರು ಭಾಗವಹಿಸಬೇಕು ಎಂದರು.

ಭಾಗವಹಿಸದ ಅಧಿಕಾರ ವಿರುದ್ದ ಕ್ರಮಕೈಗೊಳ್ಳಲು ಒತ್ತಾಯ : ಬಾಬಾ ಸಾಹೇಬ್ ಡಾ. ಬಿ.ಆರ್.ಅಂಬೇಡ್ಕರ್ ಜಯಂತಿ ಕಾರ್ಯಕ್ರಮದ ಆಹ್ವಾನ ಪತ್ರಿಕೆಯಲ್ಲಿ ಮುದ್ರಿತವಾಗಿರುವ ಜಿಲ್ಲಾಧಿಕಾರಿಗಳು, ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿಗಳು, ಜಿ.ಪಂ. ಸಿಇಒ ಸೇರಿದಂತೆ ಜಿಲ್ಲಾ ಮಟ್ಟ, ತಾಲೂಕು ಮಟ್ಟದ ಅಧಿಕಾರಿಗಳೆಲ್ಲರೂ ಭಾಗವಹಿಸುವ ಮೂಲಕ ಅಂಬೇಡ್ಕರ್ ರವರಿಗೆ ಗೌರವ ಸೂಚಿಸಬೇಕು. ಏಕೆಂದರೆ ಇತ್ತೀಚಿನ ದಿನಗಳಲ್ಲಿ ಅಂಬೇಡ್ಕರ್ ಅವರಿಗೆ ಅಗೌರವ ಆಗುವ ಕೆಲಸಗಳು ನಡೆಯುತ್ತಿದೆ. ಆದ್ದರಿಂದ ಕಾರ್ಯಕ್ರಮದಲ್ಲಿ ಭಾಗವಹಿಸದ ಅಧಿಕಾರಿಗಳ ವಿರುದ್ದ ಜಿಲ್ಲಾಡಳಿತ ಕ್ರಮಕೈಕೊಳ್ಳಬೇಕು ಎಂದು ಒತ್ತಾಯಿಸಿದರು. ದಲಿತ ಸಂಘಟನೆಗಳ ಒಕ್ಕೂಟದ ಯ.ಮಹದೇವಯ್ಯ, ಗಣೇಶ್, ಕಾಡಹಳ್ಳಿ ಕುಮಾರ್, ಆಟೋ ಉಮೇಶ್, ಉಮೇಶ್‌ಕುಮಾರ್, ಶಶಿಕಾಂತ್, ಅರುಣ್‌ಕುಮಾರ್, ಸುರೇಶ್ ಇತರರು ಭಾಗವಹಿಸಿದ್ದರು.

### ಹಿರಿಯ ನಾಗರಿಕರು, ವಿಶೇಷಚೇತನರಿಗೆ ಮನೆಯಲ್ಲಿಯೇ

## ಇಂದಿನಿಂದ ಮತದಾನ ಮಾಡಲು ಅವಕಾಶ

**ಚಾಮರಾಜನಗರ:** ಚಾಮರಾಜನಗರ ಲೋಕಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಬರುವ 85 ವರ್ಷ ಮೇಲ್ಪಟ್ಟ ಹಿರಿಯ ನಾಗರಿಕ ಮತದಾರು ಹಾಗೂ ವಿಶೇಷಚೇತನ ಮತದಾರರಿಗೆ ಏಪ್ರಿಲ್ 13ರಿಂದ 18ರವರೆಗೆ ಅಂಚೆ ಮತಪತ್ರದ ಮೂಲಕ ಮನೆಯಲ್ಲಿಯೇ ಮತದಾನ ಮಾಡುವ ವ್ಯವಸ್ಥೆ ಮಾಡಲಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ತಿಳಿಸಿದರು.

ನಗರದ ಜಿಲ್ಲಾಡಳಿತ ಭವನದಲ್ಲಿರುವ ಕೆಸ್ವಾನ್ ಕಚೇರಿ ಸಭಾಂಗಣದಲ್ಲಿಂದು ಹಿರಿಯ ನಾಗರಿಕರು ಹಾಗೂ ವಿಶೇಷಚೇತನರಿಗೆ ಮನೆಯಲ್ಲಿಯೇ ಮತದಾನ ಮಾಡುವ ಸಂಬಂಧ ಲೋಕಸಭಾ ಕ್ಷೇತ್ರ ವ್ಯಾಪ್ತಿಯಲ್ಲಿನ ಎಲ್ಲಾ ವಿಧಾನಸಭಾ ಕ್ಷೇತ್ರದ ಸಹಾಯಕ ಚುನಾವಣಾಧಿಕಾರಿಗಳು ಹಾಗೂ ವಿವಿಧ ರಾಜಕೀಯ ಪಕ್ಷದ ಅಭ್ಯರ್ಥಿಗಳು, ಪ್ರತಿನಿಧಿಗಳೊಂದಿಗೆ ನಡೆದ ಸಿದ್ದತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಭಾರತ ಚುನಾವಣಾ ಆಯೋಗದ ನಿರ್ದೇಶನದನ್ವಯ 85 ವರ್ಷ ಮೇಲ್ಪಟ್ಟ ಹಿರಿಯ ನಾಗರಿಕರು ಹಾಗೂ ವಿಶೇಷಚೇತನರಿಗೆ ಅನುಕೂಲವಾಗುವಂತೆ ಏಪ್ರಿಲ್ 13ರಿಂದ 18ರವರೆಗೆ ದಿನಾಂಕ ನಿಗದಿಪಡಿಸಿ, ಮನೆಯಲ್ಲಿಯೇ ಮತದಾನಕ್ಕೆ ಅವಕಾಶ ಕಲ್ಪಿಸಲಾಗಿದೆ. ಈ ಸಂಬಂಧ ಕ್ಷೇತ್ರ ವ್ಯಾಪ್ತಿಯಲ್ಲಿ ಬರುವ ಹಿರಿಯ ನಾಗರಿಕರು ಹಾಗೂ ವಿಶೇಷಚೇತನ ಮತದಾರರ ಮಾಹಿತಿಯನ್ನು ಸಂಗ್ರಹಿಸಿ ಎಲೆಕ್ಟ್ರಾನ್ ತಂತ್ರಾಂಶದಲ್ಲಿ ದಾಖಲಿಸಲಾಗಿದೆ. ಸದರಿ ಮತದಾರರಿಗೆ ಅಂಚೆ ಮತಪತ್ರದ ಮೂಲಕ ಮತದಾನ ಮಾಡಲು ಅಗತ್ಯ ವ್ಯವಸ್ಥೆ ಕಲ್ಪಿಸಲಾಗಿದೆ ಎಂದರು.

ಚಾಮರಾಜನಗರ (ಪ.ಜಾ) ಲೋಕಸಭಾ ಕ್ಷೇತ್ರ ವ್ಯಾಪ್ತಿಗೆ ಬರುವ ಹೆಚ್.ಡಿ. ಕೋಟೆ, ನಂಜನಗೂಡು, ವರುಣ, ಟಿ. ನರಸೀಪುರ, ಹನೂರು, ಕೊಳ್ಳೇಗಾಲ, ಚಾಮರಾಜನಗರ ಹಾಗೂ ಗುಂಡ್ಲುಪೇಟೆ ವಿಧಾನಸಭಾ ಕ್ಷೇತ್ರಗಳಲ್ಲಿ ಒಟ್ಟು 26019 85 ವರ್ಷ ಮೇಲ್ಪಟ್ಟ ಹಿರಿಯ ನಾಗರಿಕರು ಹಾಗೂ 25589 ವಿಶೇಷಚೇತನರನ್ನು ಗುರುತಿಸಲಾಗಿದೆ. ಈ ಪೈಕಿ 982 ಹಿರಿಯ ನಾಗರಿಕರು ಹಾಗೂ 445 ವಿಶೇಷಚೇತನ ಮತದಾರರು ಮನೆಯಲ್ಲಿ ಮತದಾನ ವ್ಯವಸ್ಥೆಯನ್ನು ಆಯ್ಕೆ ಮಾಡಿಕೊಂಡಿದ್ದಾರೆ. ಉಳಿದವರು ಮತಗಟ್ಟೆಗೆ ಬಂದು ಮತ ಚಲಾಯಿಸಲಿದ್ದಾರೆ ಎಂದು ತಿಳಿಸಿದರು.

ಹಿರಿಯ ನಾಗರಿಕರು ಹಾಗೂ ವಿಶೇಷಚೇತನರು ಮನೆಯಲ್ಲಿಯೇ ಮತದಾನ ಮಾಡುವ



ಸಂಬಂಧ ಎಲ್ಲಾ ಮತದಾರರಿಗೂ ಸಂಬಂಧಪಟ್ಟ ಸಹಾಯಕ ಚುನಾವಣಾಧಿಕಾರಿಗಳು ಹಾಗೂ ಕ್ಷೇತ್ರ ಮತಗಟ್ಟೆ ಅಧಿಕಾರಿಗಳು ಪ್ರಮಾಣೀಕರಿಸಿರುವ ?ನಮೂನೆ-12ಡಿ? ಯನ್ನು ಈಗಾಗಲೇ ವಿತರಿಸಲಾಗಿದೆ. ಮನೆಯಲ್ಲಿ ಮತದಾನ ಮಾಡಲು ಕ್ಷೇತ್ರ ವ್ಯಾಪ್ತಿಯಲ್ಲಿ ಒಟ್ಟು 96 ತಂಡಗಳನ್ನು ರಚಿಸಲಾಗಿದ್ದು, ತಂಡಗಳಿಗೆ ಅಗತ್ಯ ನಿರ್ದೇಶನಗಳನ್ನು ನೀಡಲಾಗಿದೆ. ತಂಡದಲ್ಲಿ ಕ್ಷೇತ್ರ ಮತಗಟ್ಟೆ ಅಧಿಕಾರಿ, ಮತಗಟ್ಟೆ ಅಧಿಕಾರಿ, ಮೈಕ್ರೋ ಅಬ್ಸರ್‌ವರ್, ಪೊಲೀಸ್ ಹಾಗೂ ವಿಡಿಯೋಗ್ರಾಫರ್ ಇರಲಿದ್ದಾರೆ. ತಂಡಗಳಿಗೆ ಈಗಾಗಲೇ ರೂಟ್ ಮ್ಯಾಪ್ ಗಳನ್ನು ಸಹ ಸಿದ್ದಪಡಿಸಿ ನೀಡಲಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿಗಳು ತಿಳಿಸಿದರು.

ಮನೆಯಲ್ಲಿ ಹಾಸಿಗೆ ಹಿಡಿದ ಹಿರಿಯ ನಾಗರಿಕರು ಹಾಗೂ ಮತಗಟ್ಟೆಗೆ ಬಂದು ಮತ ಚಲಾಯಿಸಲು ಸಾಧ್ಯವಿಲ್ಲದ ವಿಶೇಷಚೇತನರು 18 ವರ್ಷ ತುಂಬಿದ ಸಹಾಯಕರೊಬ್ಬರೊಂದಿಗೆ ಮತಗಟ್ಟೆಗೆ ಆಗಮಿಸಿ ಗುರುತಿನ ಚೀಟಿಯೊಂದಿಗೆ ಮತ ಚಲಾಯಿಸಲು ಅವಕಾಶ ನೀಡಲಾಗಿದೆ. ಸಹಾಯಕರು ಮತದಾರರಿಗೆ ಯಾವುದೇ ಶಿಫಾರಸ್ಸು ಮಾಡುವಂತಿಲ್ಲ. ಸದರಿ ಅಂಚೆ ಮತಪತ್ರದ ಮೂಲಕ ನಡೆಯುವ ಮತದಾನದಲ್ಲಿ ನೋಟಾ ಮತದಾನ ಮಾಡಲು ಅವಕಾಶವಿರುವುದಿಲ್ಲ. ಮನೆಯಲ್ಲಿಯೇ ಮತದಾನ ಮಾಡಿಸಲು ನಿಯೋಜಿಸಲಾಗಿರುವ ತಂಡ ಮನೆಗೆ ಭೇಟಿ ನೀಡಿದ ಸಮಯದಲ್ಲಿ ಮತದಾರರು ಮನೆಯಲ್ಲಿರದೇ ಬೇರೆಡೆ ಹೋಗಿದ್ದ ಸಂದರ್ಭದಲ್ಲಿ ಮತದಾನ ಮಾಡಲು 2ನೇ ಅವಕಾಶವನ್ನು ಸಹ ಕಲ್ಪಿಸಲಾಗಿದೆ. ರಾಜಕೀಯ ಪಕ್ಷಗಳ ನಿಯೋಜಿತ ಏಜೆಂಟರು ಕೂಡ ಅಂಚೆ ಮತದಾನ ಪ್ರಕ್ರಿಯೆಯನ್ನು ವೀಕ್ಷಿಸಬಹುದಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿಗಳು ತಿಳಿಸಿದರು.

ಲೋಕಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸರ್ಕಾರಿ ನೌಕರರನ್ನು (ಎ.ವಿ.ಇ.ಎಸ್) ಗೈರು ಮತದಾರರ ವರ್ಗದಡಿ 701 ಸೇವಾ ವೃತ್ತಿ ನಿರತರನ್ನು ಗುರುತಿಸಲಾಗಿದ್ದು, ಇವರಿಗೆ ಅಂಚೆ ಮತಪತ್ರದ ಮೂಲಕ ಮತದಾನ ಮಾಡಲು ವ್ಯವಸ್ಥೆ ಕಲ್ಪಿಸಲಾಗಿದೆ. ಮತದಾನವನ್ನು ಏಪ್ರಿಲ್ 19ರಿಂದ 21ರವರೆಗೆ ನಗರದ ಜಿಲ್ಲಾಡಳಿತ ಭವನದಲ್ಲಿರುವ ಹಳೇ ಕಡಿಪಿ ಸಭಾಂಗಣದ ಕೊಠಡಿ ಸಂಖ್ಯೆ 6ರಲ್ಲಿ ಮತದಾನ ಕೇಂದ್ರವನ್ನು ಸ್ಥಾಪಿಸಲಾಗಿದೆ. ಸದರಿ ದಿನಗಳಂದು ಚುನಾವಣಾ ಅಭ್ಯರ್ಥಿಗಳು ತಮ್ಮ ಅಧಿಕೃತ ಪ್ರತಿನಿಧಿಗಳನ್ನು ಅಂಚೆ ಮತದಾನ ಕೇಂದ್ರಕ್ಕೆ ಮತದಾನ ಪ್ರಕ್ರಿಯೆಯನ್ನು ಪರಿಶೀಲಿಸಲು ಕಳುಹಿಸಬೇಕು ಎಂದರು.

ಎರಡನೇ ಹಂತದ ಮತಗಟ್ಟೆ ಅಧಿಕಾರಿಗಳ ತರಬೇತಿಯನ್ನು ಏಪ್ರಿಲ್ 20 ಮತ್ತು 21ರಂದು ನಿಗದಿಪಡಿಸಲಾಗಿದೆ. ಅಲ್ಲದೇ ಎಲೆಕ್ಟ್ರಾನಿಕಲಿ ಟ್ರಾನ್ಸ್‌ಮೀಟೇಡ್ ಪೋಸ್ಟಲ್ ಬ್ಯಾಲೆಟ್ ಸಿಸ್ಟಮ್ (ಇಟಿಪಿಬಿಎಸ್) ವ್ಯವಸ್ಥೆಯಡಿ ಕ್ಷೇತ್ರ ವ್ಯಾಪ್ತಿಯಲ್ಲಿ 357 ಸೇವಾ ಮತದಾರರಿಗೆ ಅಂಚೆ ಪತ್ರ ಮತದಾನಕ್ಕೆ ವ್ಯವಸ್ಥೆ ಮಾಡಲಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ತಿಳಿಸಿದರು.

ಹೆಚ್ಚುವರಿ ಜಿಲ್ಲಾಧಿಕಾರಿ ಹಾಗೂ ಅಪರ ಜಿಲ್ಲಾ ಚುನಾವಣಾಧಿಕಾರಿ ಗೀತಾ ಹುಡೇದ, ಎಂಟು ವಿಧಾನಸಭಾ ಕ್ಷೇತ್ರಗಳ ಸಹಾಯಕ ಚುನಾವಣಾಧಿಕಾರಿಗಳು, ಪಕ್ಷೇತರ ಅಭ್ಯರ್ಥಿಗಳಾದ ಜಿ.ಡಿ. ರಾಜಗೋಪಾಲ, ಎಚ್.ಕೆ. ಸ್ವಾಮಿ, ವಿವಿಧ ರಾಜಕೀಯ ಪಕ್ಷಗಳ ಚುನಾವಣಾ ಏಜೆಂಟರು ಸಭೆಯಲ್ಲಿ ಉಪಸ್ಥಿತರಿದ್ದರು.

## 17ಕ್ಕೆ ರಾಹುಲ್‌ಗಾಂಧಿ ಮಾಲೂರಿಗೆ ಆಗಮನ

**ಮಾಲೂರು :** ಲೋಕಸಭಾಚುನಾವಣೆ ಪ್ರಚಾರಕ್ಕೆ ಏ 17 ರಂದು ಮಾಲೂರಿಗೆಕಾಂಗ್ರೆಸ್ ಪಕ್ಷದರಾಷ್ಟ್ರೀಯ ನಾಯಕರಾಹುಲ್ ಗಾಂಧಿಬರಲಿದ್ದಾರೆ. ಏಪ್ರಿಲ್ 26 ರಂದು ನಡೆಯಲಿ ರುವ



ಲೋಕಸಭಾಚುನಾವಣೆಯ ಅಂಗವಾಗಿ ಕೋಲಾರಲೋಕ ಸಭಾ ಮೀಸಲು ಕ್ಷೇತ್ರದಕಾಂಗ್ರೆಸ್ ಅಭ್ಯರ್ಥಿಗೌತಮ್‌ರವ ಪರವಾಗಿ ಮತ ಪ್ರಚಾರಕ್ಕೆಇದೇ 17 ರಂದುತಾಲ್ಲೂಕಿಗೆಕಾಂಗ್ರೆಸ್ ಪಕ್ಷದರಾಷ್ಟ್ರೀಯ ಅಧ್ಯಕ್ಷರಾಹುಲ್ ಗಾಂಧಿರವರುಆಗಮಸಲಿದ್ದು ಮುನ್ನಚ್ಚರಿಕೆಯಾಗಿ ಸೂಕ್ತ ಬಂದೋಬಸ್ತ್ ಹೋದಾಗಿಸುವ ಸಲುವಾಗಿ ಸ್ಥಳ ಪರಿಶೀಲನೆ ಮಾಡಲಾಯಿತು. ಜಿಲ್ಲಾಉಸ್ತುವಾರಿ ಸಚಿವ ಭೈರತಿ ಸುರೇಶ್ ಮಾಲೂರು ಶಾಸಕ ಕೆ ವೈ ನಂಜೇಗೌಡ ಹಾಗೂ ರಕ್ಷಣಾ ಇಲಾಖೆ ಅಧಿಕಾರಿಗಳು ತಾಲ್ಲೂಕಿನ ಮಾಲೂರು ಹೊಸಕೋಟೆರಸ್ತೆ ಮಡಿವಾಳ ಗೇಟ್ ಬಳಿ ನಡೆಯಲಿರುವ ವೇದಿಕೆಕಾರ್ಯಕ್ರಮದ ಸ್ಥಳ ಪರಿಶೀಲನೆ ಮಾಡಿದರು. ಈ ಸಂದರ್ಭದಲ್ಲಿಜಿಲ್ಲಾಕಾಂಗ್ರೆಸ್ ಅಧ್ಯಕ್ಷ ಸಿ. ಲಕ್ಷ್ಮೀನಾರಾಯಣ್, ಮಾಲೂರು -ಮಾಸ್ತಿ ಬ್ಲಾಕ್ ಕಾಂಗ್ರೆಸ್‌ಅಧ್ಯಕ್ಷರಾದ ಎಂ ಜೆ ಮಧುಸೂದನ್, ಎಚ್ ಎಮ್ ವಿಜಯನರಸಿಂಹ,ಯೋಜನಾ ಪ್ರಾಧಿಕಾರದಅಧ್ಯಕ್ಷ ನಹೀನ್ ಪುರಸಭೆ ಸದಸ್ಯಜಾಕಿರ್‌ಖಾನ್, ಕಿರಣ್ ಸೋಮಣ್ಣ ಮುಖಂಡರಾದ ನವೀನ್, ಚೇತನ್, ಶಂಕರ್ ಉಪಸ್ಥಿತರಿದ್ದರು.

## ಸವಿತಾ ಸಮಾಜ ಸಂಘದ ವತಿಯಿಂದ ಸಾಧಕಿಗೆ ಸನ್ಮಾನ

**ಕೋಲಾರ:** ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಕೋಲಾರ ಜಿಲ್ಲೆಗೆ ಪ್ರಥಮ ಸ್ಥಾನ ಪಡೆದು ಉತ್ತೀರ್ಣರಾಗಿರುವ ಸವಿತಾ ಸಮಾಜದ ಕೋಲಾರ ತಾಲ್ಲೂಕು ಗಂಗಾಪುರ ವಾಸಿಗಳಾದ ಸಾಮಾನ್ಯ



ಕಲಾವಿದ ಮತ್ತು ಕ್ಷೌರಿಕ ವೃತ್ತಿಯಿಂದ ಜೀವನ ನಡೆಸುತ್ತಿರುವ ನಾಗರಾಜ ರವರ ಪುತ್ರಿ ಕುಮಾರಿ ಅರ್ಚನಾ ರವರನ್ನು ಕೋಲಾರ ಸವಿತಾ ಸಮಾಜ ಸಂಘದ ವತಿಯಿಂದ ಸನ್ಮಾನಿಸಲಾಯಿತು. ಈ ಸಂದರ್ಭದಲ್ಲಿ ಕೋಲಾರ ಸವಿತಾ ಸಮಾಜದ ಮುಖಂಡರಾದ ಎಸ್.ಮಂಜುನಾಥ್, ಕೋಲಾರ ತಾಲ್ಲೂಕು ಸವಿತಾ ಸಮಾಜದ ಅಧ್ಯಕ್ಷ ಜಿ. ಪ್ರದೀಪ್(ದೀಪು), ಸಹಕಾರ ಸಂಘದ ಅಧ್ಯಕ್ಷರಾದ ಡಿ. ಸರ್ವೋದಯ, ಕಲಾವಿದರ ಸಂಘದ ಅಧ್ಯಕ್ಷ ಆರ್.ನಾಗರಾಜ್, ವೇಣುಗೋಪಾಲ್, ಚೋಳಘಟ್ಟ ಮಂಜು, ಹಸಾಳ ವೆಂಕಟೇಶ್ ಮತ್ತು ಚಲಪತಿ ಉಪಸ್ಥಿತರಿದ್ದರು.



## ಬಿಜೆಪಿ ಅಭ್ಯರ್ಥಿ ಪರ ವಿಜಯೇಂದ್ರ ಭರ್ಜರಿ ರೋಡ್ ಶೋ

**ಚಾಮರಾಜನಗರ:** ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಯಡಿಯೂರಪ್ಪ ಬಿಜೆಪಿ ಅಭ್ಯರ್ಥಿ ಬಾಲರಾಜು ಪರವಾಗಿ ಗುರುವಾರ ಕೊಳ್ಳೇಗಾಲ ಹಾಗೂ ಹನೂರಿನಲ್ಲಿ ಭರ್ಜರಿ ರೋಡ್ ಶೋ ಮೂಲಕ ಮತಯಾಚನೆ ಮಾಡಿದರು.

ಬೆಳಗ್ಗೆ ಕೊಳ್ಳೇಗಾಲಕ್ಕೆ ಆಗಮಿಸಿದ ವಿಜಯೇಂದ್ರ, ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಮಾಲಾರ್ಪನೆ ಮಾಡಿದರು. ಬಳಿಕ ಸಾರಿಗೆ ಬಸ್ ನಿಲ್ದಾಣದ ಹತ್ತಿರದಲ್ಲಿರುವ ದೇವಲಾ ಮಹರ್ಷಿ ಪ್ರತಿಭೆಗೆ ಮಾಲಾರ್ಪನೆ ಮಾಡಿ, ರೋಡ್ ಶೋ ಆರಂಭಿಸಿದರು. ಡಾ. ರಾಜ್‌ಕುಮಾರ್ ರಸ್ತೆ ಮಾರ್ಗವಾಗಿ ರೋಡ್‌ಶೋ ನಡೆಯಿತು. ಈ ಸಂದರ್ಭದಲ್ಲಿ ಮಾತನಾಡಿದ ಅವರು ವಿಜಯೇಂದ್ರ, ಚಾ.ನಗರ ಲೋಕಸಭಾ ಕ್ಷೇತ್ರದಿಂದ ಬಿಜೆಪಿ ನೇತೃತ್ವದ ಎನ್‌ಡಿಎ ಮೈತ್ರಿ ಕೂಟದ ಅಭ್ಯರ್ಥಿಯಾಗಿ ಮಾಜಿ ಶಾಸಕ ಹಾಗೂ ಸಜ್ಜನ ರಾಜಕಾರಣಿ ಎಸ್. ಬಾಲರಾಜ್ ಅವರು ಸ್ಪರ್ಧೆ ಮಾಡಿದ್ದು, ಪ್ರಧಾನಿ ನರೇಂದ್ರ ಮೋದಿ ಅವರ ಹತ್ತು ವರ್ಷಗಳ ಅಭಿವೃದ್ದಿ ಪರ ಆಡಳಿತ ಮತ್ತು ದೇಶದ ಭದ್ರತ ಮತ್ತು ಭ್ರಷ್ಟಚಾರ ರಹಿತ ಆಡಳಿತಕ್ಕಾಗಿ ಬಿಜೆಪಿಗೆ ಮತ ನೀಡಬೇಕು. ಕೊಳ್ಳೇಗಾಲ ಕ್ಷೇತ್ರದ ಸರ್ವಾಂಗೀನ ಅಭಿವೃದ್ದಿಗೆ ನಮ್ಮ ಪಕ್ಷ ಬದ್ದವಾಗಿದೆ ಎಂದರು.

ಹನೂರಿನಲ್ಲಿ ರೋಡ್ ಶೋ: ರಾರಾಜಿಸಿದ ಜೆಡಿಎಸ್ ಬಾವುಟ : ನಂತರ ಹನೂರಿನಲ್ಲಿ ನಡೆದ ರೋಡ್ ಶೋನಲ್ಲಿ ಬಿಜೆಪಿ ಬಾವುಟದ ಜೊತೆಗೆ ಜೆಡಿಎಸ್ ಬಾವುಟಗಳು ರಾರಾಜಿಸಿದರು. ಕೊಳ್ಳೇಗಾಲ ಮತ್ತು ಹನೂರಿನಲ್ಲಿ ನಡೆದ ರೋಡ್ ಶೋನಲ್ಲಿ ಜೆಡಿಎಸ್ ಶಾಸಕ ಮಂಜುನಾಥ್ ವಿಜಯೇಂದ್ರ ಜೊತೆಗೆ ಭಾಗವಹಿಸುವ ಮೂಲಕ ಬಿಜೆಪಿಗೆ ಬೆಂಬಲ ವ್ಯಕ್ತಪಡಿಸಿದರು. ಅಲ್ಲದೇ ಹನೂರು ರೋಡ್ ಶೋನಲ್ಲಿ ಹೆಚ್ಚಿನ ಕಾರ್ಯಕರ್ತರು ಭಾಗವಹಿಸಿದರು. ಸುಮಾರು 2 ಕಿ.ಮೀ. ನಡೆದ ರೋಡ್ ಶೋನಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಜನರು ಸೇರಿದ್ದರು. ಬಸ್ ನಿಲ್ದಾಣದಲ್ಲಿ ವಿಜಯೇಂದ್ರ, ಅಭ್ಯರ್ಥಿ ಬಾಲರಾಜು, ಎನ್. ಮಹೇಶ್, ಮಂಜುನಾಥ್, ಸೇರಿದಂತೆ ಅನೇಕ ನಾಯಕರು ಮಾತನಾಡಿದರು.

## ಸಾಹಿತಿ ಕೋಟಿಗಾನಹಳ್ಳಿ ರಾಮಯ್ಯರ ಮೇಲೆ ಹಲ್ಲೆ ಮಾಡಿದವರ ವಿರುದ್ದ ಸೂಕ್ತ ಕ್ರಮಕ್ಕೆ ಒತ್ತಾಯ

**ಮಾಲೂರು :** ಬರುತಿಹೆವು ನಾವು ಬರುತಿಹೆವು, ಯುಗ ಯುಗಗಳಿಂದ ನೀವು ತುಳಿದ ಜನಗಳ ಕೊರಳ ಧ್ವನಿಗಳು ನಾವು, ಅಸಮಾನತೆಯನ್ನು ಸುಟ್ಟು ಬಿಡಲು ಬುಗಿಲೆದ್ದ ಬೆಂಕಿಯ ಜ್ವಾಲೆಗಳು' ಎಂಬ ದಲಿತ ಸಂಘ?ѓ ಸಮಿತಿಯಧ್ಯೇಯಗೀತೆಯನ್ನು ರಚಿಸಿದ, 'ಕೋಟಿಕೋಟಿ ಬಾದೆಗಳಲ್ಲಿ ಲಕ್ಷಾಂತರ ನೋವುಗಳಲ್ಲಿ ನೀ ಹುಟ್ಟಿ ಬೆಳೆದೆಯಮ್ಮ ನನ್ನತಂಗಿಅನುಸೂಯ' ಎಂಬ ಅಸಹಾಯ ಹೆಣ್ಣು ಮಗುವಿನ ಶೋಷಣೆಯನ್ನು ಹಾಡಿನರೂಪದಲ್ಲಿಕೊಟ್ಟ, ಹಾಗೂ 'ಹಚ್ಚಬೇಡ ಹಚ್ಚ ಬೇಡವ್ವಜೀತಕ್ಕೆ ನನ್ನನ್ನ ಎಳೆ ಬಾಳೆ ಸುಳಿ ನಾನವ್ವ' ಎಂಬ ಸಾಕ್ಷರತಾಗೀತೆಯನ್ನು ರಚಿಸಿಕೊಟ್ಟ, ಹಲವಾರು ಧಾರಾವಾಹಿಗಳಿಗೆ ಮತ್ತು ಚಲನಚಿತ್ರಗಳಿಗೆ ಕಥೆ, ಚಿತ್ರಕಥೆ, ಸಂಭಾಷಣೆ ಮತ್ತು ಸಾಹಿತ್ಯವನ್ನು ರಚಿಸಿದಂತಹ ಕೋಲಾರದಅಂತರಗಂಗೆ ಬೆಟ್ಟದಲ್ಲಿ ಆದಿಮಾ ಹಾಗೂ ಬುಡ್ಡಿದೀಪ ಎಂಬ ಸಾಂಸ್ಕೃತಿಕ ಸಂಸ್ಥೆಗಳನ್ನು ಕಟ್ಟಿ ಸಾಂಸ್ಕೃತಿಕ ಅಸ್ಮಿತೆಯಾಗಿರುವ ರಂಗಕರ್ಮಿ, ದಲಿತ ಹೋರಾಟಗಾರ, ಹಿರಿಯ ಸಾಹಿತಿ ಸಂಸ್ಕೃತಿಚಿಂತಕ ಕೋಟಿಗಾನಹಳ್ಳಿ ರಾಮಯ್ಯರವರ ಮೇಲಿನ ಹಲ್ಲೆಯನ್ನುಕೋಲಾರಜಿಲ್ಲಾದಲಿತ ಸಾಹಿತ್ಯ ಪರಿಷತ್ತುತೀವ್ರವಾಗಿಖಂಡಿಸುತ್ತದೆ ಎಂದುದಲಿತ ಸಾಹಿತ್ಯ ಪರಿಷತ್ತಿನಜಿಲ್ಲಾಧ್ಯಕ್ಷಜಯಮಂಗಲ ಚಂದ್ರಶೇಖರ್ ಮತ್ತು ಪ್ರಧಾನ ಕಾರ್ಯದರ್ಶಿ ಇಂಚರ ನಾರಾಯಣಸ್ವಾಮಿರವರು ಪತ್ರಿಕಾ ಹೇಳಿಕೆಯಲ್ಲಿ ತಿಳಿಸಿರುತ್ತಾರೆ

ಕನ್ನಡ ನಾಡಿಗೆ, ಸಾಹಿತ್ಯ ಹಾಗೂ ನುಡಿ ಸಂಸ್ಕೃತಿಗೆ ಸಾಹಿತಿಗಳ ಕೊಡುಗೆಅನನ್ಯವಾದುದು. ಕೋಟಿಗಾನಹಳ್ಳಿ ರಾಮಯ್ಯಅವರು ತೇರಹಳ್ಳಿ ಬೆಟ್ಟದ ನಿಶ್ಯಬ್ದ ಪ್ರಕೃತಿಯತಾಣವನ್ನುತಮ್ಮ ಸಾಹಿತ್ಯ ಹಾಗೂ ಸಾಂಸ್ಕೃತಿಕ ಚಟುವಟಿಕೆಗಳ ಪ್ರೇರಕ ತಾಣವನ್ನಾಗಿಸಿಕೊಂಡು 'ಬುಡ್ಡಿ ದೀಪ' ಎಂಬ ಸಂಸ್ಥೆಯನ್ನುಕಟ್ಟಿಕೊಂಡು ಹಲವಾರು ಮಕ್ಕಳ ನಾಟಕಗಳನ್ನು ರಚಿಸಿ, ಮಕ್ಕಳಲ್ಲಿ ಹಾಗೂ ಯುವಕರಲ್ಲಿ ಸಾಹಿತ್ಯ ಹಾಗೂ ರಂಗಕಲಾಸಕ್ತಿ ಮೂಡಿಸುವ ಪ್ರಮುಖಗುರಿಯನ್ನು ಹೊಂದಿರುವವರು. ಇಂತಹ ಸಾಹಿತಿ ಬೆಟ್ಟದ ಮೇಲೆ ನಡೆಯುತ್ತಿರುವಅನೈತಿಕ ಹಾಗೂ ಅಕ್ರಮ ಚಟುವಟಿಕೆಗಳಿಗೆ ಮನನೊಂದುತಾವುಅತೀವವಾಗಿ ಮೆಚ್ಚಿ ಬಹಳಷ್ಟು ವರ್ಷಗಳ ಕಾಲದಿಂದ ನೆಲೆಸಿದಂತಹ ಸ್ಥಳವನ್ನೇ ಇತ್ತೀಚೆಗೆತೊರೆಯುವಯೋಚನೆ ಮಾಡಿದ್ದು ನಾಗರೀಕ ವ್ಯವಸ್ಥೆತಲೆತಗ್ಗಿಸುವ ವಿಚಾರ. ಪ್ರಸ್ತುತ ಕೋಟಿಗಾನಹಳ್ಳಿ ರಾಮಯ್ಯರವರ ಮತ್ತುಅವರ ಮಗನ ಮೇಲೆ ದೇವಾಲಯದ ಧ್ವನಿವರ್ಧಕದಅತಿಯಾದ ಶಬ್ದಮಾಲಿನ್ಯದಿಂದ ತೊಂದರೆಯಾಗುತ್ತಿದೆ. ಧ್ವನಿಯನ್ನುಕಡಿಮೆ ಮಾಡಿ ಎಂಬ ಮನವಿಗೆ ಅವರ ಮೇಲೆ ಹಲ್ಲೆಯಾಗಿರುವುದುಅಮಾನವೀಯ ಕೃತ್ಯ. ಇಂತಹಕೃತ್ಯಎಸಗಿದ ಕಿಡಿಗೇಡಿಗಳನ್ನು ಪೋಲೀಸರು ಬಂಧಿಸಿದ್ದರೂ ವ್ಯವಸ್ಥೆಯ ಹಿಂದಿರುವ ಸಂಚುಕೋರರನ್ನು ಬಯಲಿಗೆಳೆಯುವುದರ ಜೊತೆಗೆಅವರಿಗೆತಕ್ಕ ಶಿಕ್ಷೆಯಾಗಬೇಕು. ರಾಮಯ್ಯ ಅವರಿಗೆರಕ್ಷಣೆಒದಗಿಸಬೇಕುಎಂದುಜಯಮಂಗಲ ಚಂದ್ರಶೇಖರ್ ಹಾಗೂ ಇಂಚರ ನಾರಾಯಣಸ್ವಾಮಿ ತಿಳಿಸಿರುತ್ತಾರೆ.

## ಕುರುಬ ಸಮಾಜ ಕಾಂಗ್ರೆಸ್ ಪಕ್ಷಕ್ಕೆ ಜೀತದಾಳುವಲ್ಲ

**ಕೋಲಾರ:** ಕುರುಬ ಸಮುದಾಯವು ಕಾಂಗ್ರೆಸ್ ಪಕ್ಷದ ಜೀತದಾಳುಗಳು ಅಲ್ಲ ಕುರುಬರು ಎಲ್ಲಾ ರಾಜಕೀಯ ಪಕ್ಷಗಳಲ್ಲಿ ಇದ್ದಾರೆ ಕುರುಬ ಸಮುದಾಯದ ಮುಖಂಡರು ಎನಿಸಿಕೊಂಡು ಒಂದು ಪಕ್ಷದ ಏಜೆಂಟರ ರೀತಿಯಲ್ಲಿ ವರ್ತಿಸುವುದು ಸಮುದಾಯಕ್ಕೆ ಮಾಡಿದ ದ್ರೋಹವಾಗಿದೆ ಎಂದು ಕುರುಬ ಸಮುದಾಯದ ಯುವ ಮುಖಂಡರಾದ ಕೀಲುಕೋಟೆ ರವಿ, ಕಾರಂಜಿಕಟ್ಟೆ ರಾಮಚಂದ್ರ, ಹಾಗೂ ಕೆ.ವಿ ತೇಜಸ್ ಗೌರಿಪೇಟೆ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಜಿಲ್ಲಾ ಕುರುಬ ಸಂಘದ ಕಾರ್ಯಾಧ್ಯಕ್ಷ ಜೆ.ಕೆ ಜಯರಾಮ್ ಹಾಗೂ ಖಜಾಂಚಿ ಜಂಬಾಪುರ ಎಂ.ವೆಂಕಟರಾಮ್ ಹೇಳಿಕೆಗೆ ಪ್ರತಿಕ್ರಿಯಿಸಿದ ಅವರು, ಕುರುಬ ಸಮುದಾಯದ ನಾಯಕರು ಎನಿಸಿಕೊಂಡವವರು ಸಮುದಾಯದ ಅಭಿವೃದ್ಧಿಗೆ ಏಳಿಗೆಗಾಗಿ ಶ್ರಮಿಸಬೇಕು ಅದು ಬಿಟ್ಟು ಒಂದು ಪಕ್ಷಕ್ಕೆ ಸೀಮಿತವಾಗಿ ಮಾತನಾಡಬಾರದು ಕುರುಬ ಸಮುದಾಯದ ವರ್ತೂರು ಪ್ರಕಾಶ್ ಆಗಲಿ ನಗರಸಭೆಯ ಚುನಾವಣೆಯಲ್ಲಿ ಸಮುದಾಯದ ಅಭ್ಯರ್ಥಿಗಳು ಚುನಾವಣೆಗೆ ಸ್ಪರ್ಧೆ ಮಾಡಿದ ಸಂದರ್ಭದಲ್ಲಿ ಇದೇ ನಾಯಕರು ವಿರೋಧ ಮಾಡಿದ್ದು ಎಲ್ಲರಿಗೂ ಗೊತ್ತಿರುವ ಸಂಗತಿ ಇಂತಹವರು ಸಮುದಾಯದ ಬಗ್ಗೆ ಮಾತಾಡಿದ್ದಾರೆ ಎಂದು ವ್ಯಂಗ್ಯ ಮಾಡಿದರು. ಇದು ಕುರುಬ ಸಮಾಜದ ಚುನಾವಣೆಯಲ್ಲ, ಇಲ್ಲಿ ನಡೆಯುತ್ತಿರುವುದು ಲೋಕಸಭೆ ಚುನಾವಣೆ. ಯಾರು ಯಾರಿಗೆ ಬೇಕಾದರೂ ಮತ ಚಲಾಯಿಸಬಹುದು. ಕುರುಬ ಸಮಾಜವನ್ನು ಕಾಂಗ್ರೆಸ್ ಪಕ್ಷಕ್ಕೆ ಅಡವಿಟ್ಟಿಲ್ಲ. ಕೇವಲ ಕಾಂಗ್ರೆಸ್ ಪಕ್ಷಕ್ಕೆ ಕುರುಬ ಸಮಾಜದ ಮತಗಳನ್ನು ಹಾಕುವಂತೆ ಕರೆ ನೀಡಿರುವ ಜೆ.ಕೆ ಜಯರಾಮ್



ಮತ್ತು ಜಂಬಾಪುರ ವೆಂಕಟರಾಮ್ ಅವರು ಕಾಂಗ್ರೆಸ್ ಪಕ್ಷದ ಏಜೆಂಟ್‌ಗಳ ರೀತಿ ವರ್ತನೆ ಮಾಡುತ್ತಿದ್ದಾರೆ. ಅವರು ಕುರುಬ ಸಮಾಜವನ್ನು ಮುಂದಿಟ್ಟುಕೊಂಡು ವ್ಯಾಪಾರ ಮಾಡುವುದನ್ನು ಬಿಡಬೇಕೆಂದು ಕಿಡಿಕಾರಿದ್ದಾರೆ. ಮಾಜಿ ಪ್ರಧಾನಿ ಎಚ್.ಡಿ ದೇವೇಗೌಡರು ಹಾಗೂ ಮಾಜಿ ಮುಖ್ಯಮಂತ್ರಿ ಎಚ್.ಡಿ ಕುಮಾರಸ್ವಾಮಿ ಕುರುಬ ಸಮುದಾಯದ ವಿರೋಧಿಗಳು ಅಂತ ಹೇಳುವ ಇವರಿಗೆ ಸಿದ್ದರಾಮಯ್ಯ ಅವರನ್ನು ರಾಜಕೀಯವಾಗಿ ಬೆಳೆಸಿದ್ದು ಯಾರು ಅಂತ ಒಂದು ಬಾರಿ ನೆನಪು ಮಾಡಿಕೊಳ್ಳಲಿ ಸಿದ್ದರಾಮಯ್ಯ ಇಷ್ಟು ಬೆಳೆಯಲಿಕ್ಕೆ ಅವರೇ ಕಾರಣ ಎಂಬುದನ್ನು ಮರೆಯಬಾರದು ಜೆಡಿಎಸ್ ಮತ್ತು ಬಿಜೆಪಿ ಕುರುಬ ಸಮುದಾಯದ ವಿರೋಧಿಗಳಲ್ಲ. ಜೆ.ಕೆ ಜಯರಾಮ್ ಮತ್ತು ಜಂಬಾಪುರ ವೆಂಕಟರಾಮ್ ಆದ ನೀವುಗಳು ಪ್ರತಿ ಚುನಾವಣೆಯಲ್ಲಿ ಕುರುಬ ವಿರೋಧಿಗಳಾಗಿ ಕೆಲಸ ಮಾಡಿದ್ದೀರಿ ಎಂದು ಆರೋಪಿಸಿದರು. ರಾಜ್ಯದಲ್ಲಿ ಎರಡನೇ ಬಾರಿಗೆ ಮುಖ್ಯಮಂತ್ರಿಯಾಗಿ ಪ್ರಮಾಣವಚನ ಸ್ವೀಕರಿಸಿರುವ ಸಿದ್ದರಾಮಯ್ಯ ಅವರು ಎರಡನೇ ಹಂತದ ಕುರುಬ ಸಮುದಾಯದ ನಾಯಕರನ್ನು ಬೆಳಸಲಿಲ್ಲ ಕಾಂಗ್ರೆಸ್ ಪಕ್ಷದಲ್ಲೇ ಇದ್ದ ಎಂಟಿಬಿ ನಾಗರಾಜ್, ಎಚ್ ವಿಶ್ವನಾಥ್, ವರ್ತೂರು ಪ್ರಕಾಶ್ ಸೇರಿದಂತೆ ಬಹುತೇಕ ನಾಯಕರನ್ನು ಬೆಳೆಯಲು ಬಿಡದೇ ಸೋಲಿಸಿದ್ದು ಅವರು ಇವತ್ತು ಅಂತಹ ಕಾಂಗ್ರೆಸ್ ಪಕ್ಷಕ್ಕೆ ಸಮುದಾಯದ ವೋಟು ಕೇಳುವ ನೈತಿಕತೆ ಇಲ್ಲ, ಕುರುಬ ಸಮಾಜದಲ್ಲಿಯೂ ಪ್ರಧಾನಿ ನರೇಂದ್ರ ಮೋದಿ ಮತ್ತು ಎಚ್.ಡಿ ದೇವೇಗೌಡರ ಅಭಿಮಾನಿಗಳು ಇದ್ದು ಅವರು ಯಾರಿಗೆ ಬೇಕಾದರೂ ಮತ ಚಲಾಯಿಸುವ ಹಕ್ಕನ್ನು ಹೊಂದಿದ್ದಾರೆ. ಇಂತಹ ಪಕ್ಷಕ್ಕೆ ಹಾಕಿ ಅಂತ ಕೇಳುವ ಹಕ್ಕು ಸಮುದಾಯದ ಮುಖಂಡರಿಗೆ ಇಲ್ಲ, ಎಂದು ಇದೇ ಸಂದರ್ಭದಲ್ಲಿ ಎಚ್ಚರಿಕೆ ನೀಡಿದ್ದಾರೆ.

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ಮೇ 1ಕ್ಕೆ ಟಗರು ಪುಟ್ಟಿ ಮಾನ್ವಿತಾ ಕಾಮತ್ ಮದುವೆ





ಕನ್ನಡದ ಮತ್ತೋರ್ವ ನಟಿ ಹೊಸ ಜೀವನಕ್ಕೆ ಕಾಲಿಡಲು ಸಿದ್ಧರಾಗಿದ್ದಾರೆ. ಕೆಂಡ ಸಂಪಿಗೆ ಸಿನಿಮಾ ಮೂಲಕ ಚಿತ್ರೋದ್ಯಮಕ್ಕೆ ಕಾಲಿಟ್ಟ ಮಾನ್ವಿತಾ ಕಾಮತ್ ಮೇ 1ರಂದು ಹೊಸ ಜೀವನಕ್ಕೆ ಕಾಲಿಡುತ್ತಿದ್ದಾರೆ. ಮದುವೆ ಕುರಿತಾದ ಡಿಜಿಟೆಲ್ ಆಮಂತ್ರಣ ಪತ್ರಿಕೆಯನ್ನು ಸೋಷಿಯಲ್ ಮೀಡಿಯಾದಲ್ಲಿ ಅವರು ಅಪ್ ಲೋಡ್ ಮಾಡಿದ್ದಾರೆ.

ಅರುಣ್ ಎನ್ನುವವರ ಜೊತೆ ಮಾನ್ವಿತಾ ಮದುವೆ ಆಗುತ್ತಿದ್ದು, ಮೈಸೂರು ಮೂಲದ ಅರುಣ್ ಸಿನಿಮಾ ರಂಗಕ್ಕೆ ಹತ್ತಿರದವರೇ ಎಂದು ಹೇಳಲಾಗುತ್ತಿದೆ. ಏಪ್ರಿಲ್ 30ಕ್ಕೆ ಅರಿಶಿನ ಶಾಸ್ತ ಮತ್ತು ಮೇ 1ಕ್ಕೆ ಮದುವೆ ನಡೆಯಲಿದೆ.

ಆರ್.ಜೆಯಾಗಿ ವೃತ್ತಿಯನ್ನು ಆರಂಭಿಸಿದ್ದ ಮಾನ್ವಿತಾ ಆನಂತರ ಸಿನಿಮಾ ರಂಗಕ್ಕೆ ಬಂದರು. ಸೂರಿ ನಿರ್ದೇಶನದ ಕೆಂಡ ಸಂಪಿಗೆ ಸಿನಿಮಾ ಅವರಿಗೆ ಹೆಸರು ತಂದುಕೊಟ್ಟಿತು. ಆನಂತರ ಟಗರು ಸಿನಿಮಾದ ಮೂಲಕ ಸಾಕಷ್ಟು ಜನಕ್ಕೆ ಪರಿಚಯವಾದರು. ಅಲ್ಲಿಂದ ಟಗರು ಪುಟ್ಟಿ ಎಂದೇ ಫೇಮಸ್ ಆದರು ಮಾನ್ವಿತಾ.



# 'ಕಾಂತಾರ' ಪ್ರೀಕ್ವೆಲ್ ಚಿತ್ರೀಕರಣಕ್ಕೆ 3 ದಿನವಷ್ಟೇ ಬಾಕಿ



ರಿಷಬ್ ಶೆಟ್ಟಿ ನಿರ್ದೇಶಿಸಿ, ನಟಿಸುತ್ತಿರುವ ಕಾಂತಾರ ಪ್ರೀಕ್ವೆಲ್ ಚಿತ್ರದ ಶೂಟಿಂಗ್ ಇದೇ ಏಪ್ರಿಲ್ 15ರಿಂದ ನಡೆಯಲಿದೆ. ಈಗಾಗಲೇ ಶೂಟಿಂಗ್ ಸ್ಥಳದಲ್ಲಿ ಚಿತ್ರತಂಡ ಬೀಡು ಬಿಟ್ಟಿದ್ದು, ಚಿತ್ರೀಕರಣಕ್ಕಾಗಿ ಬಹೃತ್ ಸೆಟ್ ಅನ್ನು ರಿಷಬ್ ಊರಿನಲ್ಲಿ ನಿರ್ಮಾಣವಾಗಿದೆ. ಅಲ್ಲಿಯೇ ಬಹುತೇಕ ಚಿತ್ರೀಕರಣ ನಡೆಯಲಿದೆ.

ಕಾಂತಾರ 1 ಚಿತ್ರದ ಶೂಟಿಂಗ್ ಇನ್ನೂ ಪ್ರಾರಂಭವೇ ಆಗಿಲ್ಲ. ಆಗಲೇ ಒಟಿಟಿಗೆ ಚಿತ್ರವನ್ನು ಮಾರಿಕೊಂಡಿದ್ದಾರೆ ನಿರ್ಮಾಪಕ ವಿಜಯ ಕಿರಗಂದೂರು. ಕಾಂತಾರ ಚಿತ್ರದ ಒಟಿಟಿ ಹಕ್ಕನ್ನು ಪ್ರೈಮ್ ವಿಡಿಯೋ ಖರೀದಿಸಿದ್ದು, ಭಾರೀ ಮೊತ್ತಕ್ಕೆ ಸೇಲ್ ಮಾಡಲಾಗಿದೆ ಎಂದು ಹೇಳಲಾಗುತ್ತಿದೆ. ಅಂದಾಜಿನ ಪ್ರಕಾರ, ಸಿನಿಮಾದ ಬಜೆಟ್ ನ ಅರ್ಧದಷ್ಟು ದುಡ್ಡು ಒಟಿಟಿಯಿಂದಲೇ ಬಂದಿದೆ ಎನ್ನುವುದು ಸಿಕ್ಕಿರುವ ಮಾಹಿತಿ.

ಈ ನಡುವೆ 'ಕಾಂತಾರ' ಸಿನಿಮಾದ ಬಗ್ಗೆ ಸಾಕಷ್ಟು ಸುದ್ದಿಗಳು ಹರಿದಾಡುತ್ತಿವೆ. ಅದರಲ್ಲೂ ರಿಷಬ್ ಸಿನಿಮಾದಲ್ಲಿ ಜ್ಯೂ.ಎನ್ ಟಿಆರ್ ನಟಿಸುತ್ತಾರೆ ಎಂಬ ಸುದ್ದಿ ದೊಡ್ಡ ಮಟ್ಟದಲ್ಲೇ ವೈರಲ್ ಆಗಿದೆ. ರಿಷಬ್ ಶೆಟ್ಟಿ ಸೈಲೆಂಟಾಗಿದ್ದಾರೆ. ಕಾರಣ ಕರಾವಳಿಯಲ್ಲಿ 'ಕಾಂತಾರ' ಚಿತ್ರೀಕರಣದ ಸಿದ್ಧತೆ ನಡೆಯುತ್ತಿದೆ. ಹಾಗಾಗಿ ಕಾಣಿಸುತ್ತಿಲ್ಲ ಶಿವ. ಆದರೆ ಮೊನ್ನೆ ಅವರು ಜ್ಯೂ.ಎನ್‌ಟಿಆರ್ ಜೊತೆ ದಿಢೀರ್ ಎಂದು ಪೋಸ್ ಕೊಟ್ಟರು. ಅಲ್ಲಿಂದ ಆರಂಭ ತಲೆಗೊಂದು ಲೆಕ್ಕಾಚಾರ. ಹಾಗಾಗಿ ರಿಷಬ್ ಜೊತೆ ತಾರಕ್ ನಟಿಸುತ್ತಾರೆ ಎಂಬ ಗುಸು ಗುಸು ಶುರುವಾಗಿದೆ.

ರಿಷಬ್ ಶೆಟ್ಟಿ ಈಗ ಎಲ್ಲೂ ಕಾಣುತ್ತಿಲ್ಲ. ಅದನ್ನು ಅವರೇ ಹೇಳಿದ್ದರು. ಶೂಟಿಂಗ್ ಆರಂಭವಾದ ಮೇಲೆ ನಾಟ್ ರೀಚೆಬಲ್ ಎಂದಿದ್ದರು. ಅದನ್ನು ಮಾಡಿ ತೋರಿಸುತ್ತಿದ್ದಾರೆ. ಈ ನಡುವೆ ಟಾಲಿವುಡ್ ಯಂಗ್ ಟೈಗರ್ ಜ್ಯೂ.ಎನ್‌ಟಿಆರ್ ಜೊತೆ ಪತ್ನಿ ಪ್ರಗತಿ ಸಮೇತ ಕಾಣಿಸಿಕೊಂಡಿದ್ದಾರೆ. ಆಗ ಎಲ್ಲರೂ ಸೇರಿ ಫೋಟೊ ತೆಗೆಸಿಕೊಂಡರು. ಆಗ ಆಕಾಶಕ್ಕೇರಿದ ಗಾಳಿಪಟದ ಹಾರಾಟ ಈಗಲೂ ನಿಂತಿಲ್ಲ. ಇದರ ಪರಿಣಾಮ, ಕಾಂತಾರದಲ್ಲಿ ಜ್ಯೂ.ಎನ್ ಟಿಆರ್ ಕೂಡ ಬಣ್ಣ ಹಚ್ಚಲಿದ್ದಾರೆ. ಹಿಂದೆಂದೂ ಕಾಣದ ರೀತಿಯಲ್ಲಿ ಕಾಣಿಸಲಿದ್ದಾರೆ. ಇದು ನಿಜವಾ ಸುಳ್ಳಾ? ಗೊತ್ತಿಲ್ಲ. ಈ ಸುದ್ದಿ ಮಾತ್ರ ಈಗ ನೆಟ್ಟಿಗರ ಚರ್ಚೆಗೆ ಗ್ರಾಸವಾಗಿದೆ.

ಜ್ಯೂ.ಎನ್‌ಟಿಆರ್ ತಾಯಿ ಮೂಲತಃ ಮಂಗಳೂರಿನವರು. ಅದರಲ್ಲೂ ರಿಷಬ್ ಕುಂದಾಪುರದವರು. ಹೀಗಾಗಿಯೇ ತಾರಕ್ ಸ್ಪಷ್ಟ ಕನ್ನಡ ಮಾತಾಡುತ್ತಾರೆ. ಅದನ್ನಿಟ್ಟುಕೊಂಡು ಕಾಡುಶಿವ ಹಾಗೂ ಟೈಗರ್ ಜುಗಲ್‌ಬಂದಿ ತೋರಿಸಲಿದ್ದಾರೆ ಅನ್ನೋದು ಸದ್ಯದ ತಾಜಾ ಸುದ್ದಿ. ಕಾಂತಾರ ಮುಗಿವಷ್ಟರಲ್ಲಿ ಇನ್ನು ಯಾರ್ ಯಾರು ಇದರಲ್ಲಿ ನಾಮಕಾವಾಸ್ತೆ ಸೇರಲಿದ್ದಾರೋ. ಖುದ್ದು ಕಾಡು ಶಿವನಿಗೂ ಗೊತ್ತಿಲ್ಲ. ಸದ್ಯ ಬ್ರೇಕಿಂಗ್ ನ್ಯೂಸ್ ಆಗಿ ಹರಿದಾಡುತ್ತಿದೆ. ಜ್ಯೂ.ಎನ್‌ಟಿಆರ್ ಕಾಂತಾರ ಸಿನಿಮಾದಲ್ಲಿ ನಟಿಸೋದು ಗಾಸಿಪ್ ಅಥವಾ ನಿಜ ಸಂಗತಿನಾ? ಎಂಬುದನ್ನು ಚಿತ್ರತಂಡವೇ ಸ್ಪಷ್ಟನೆ ನೀಡಬೇಕಿದೆ. ಒಂದು ವೇಳೆ, ಈ ಸುದ್ದಿ ನಿಜವೇ ಆಗಿದಲ್ಲಿ ಪ್ರೇಕ್ಷಕರಿಗೆ ಹಬ್ಬದೂಟ ಗ್ಯಾರಂಟಿ.

# ಬಾಲಿವುಡ್ 'ರಾಮಾಯಣ' ಸಿನಿಮಾಗೆ ಯಶ್ ಕೂಡ ನಿರ್ಮಾಪಕ



ಬಾಲಿವುಡ್ ಚಿತ್ರರಂಗದ ಬಹುನಿರೀಕ್ಷಿತ ಸಿನಿಮಾ ರಾಮಾಯಣ ಚಿತ್ರೀಕರಣ ಪ್ರಾರಂಭವಾಗಿದೆ. ಭಾರತೀಯ ಪುರಾಣದ ಕಥೆಯನ್ನು ತೆರೆದಿಡುವ ರಾಮಾಯಣ ಚಿತ್ರಕ್ಕಾಗಿ ರಾಕಿಂಗ್ ಸ್ಟಾರ್ ಯಶ್ ಹಾಗೂ ನಮಿತ್ ಮಲ್ಹೋತ್ರಾ ಕೈ ಜೋಡಿಸಿದ್ದಾರೆ.

ರಾಮಾಯಣಕ್ಕೆ ರಾಕಿ ಕೂಡ ನಿರ್ಮಾಪಕ ರಾಮಾಯಣ ಸಿನಿಮಾವನ್ನು ಬಹಳ ಅದ್ದೂರಿಯಾಗಿ ದೃಶ್ಯ ರೂಪಕ್ಕೆ ಇಳಿಸುವುದಕ್ಕೆ ದಂಗಲ್ ನಿರ್ದೇಶಕ ನಿತೀಶ್ ತಿವಾರಿ ಹೊರಟಿದ್ದಾರೆ. ಅದರಂತೆ ಬಹು ಕೋಟಿ ಬಜೆಟ್ ಹಾಕಿ ಈ ಚಿತ್ರ ನಿರ್ಮಾಣ ಮಾಡೋದಿಕ್ಕೆ ರಾಕಿಭಾಯ್ ಹಾಗೂ ನಮಿತ್ ಮಲ್ಹೋತ್ರಾ ಒಂದಾಗಿದ್ದಾರೆ. ಯಶ್ ಒಡೆತನದ ಮಾನ್ಸ್ಟರ್ ಮೈಂಡ್ ಕ್ರಿಯೇಷನ್ ಹಾಗೂ ನಮಿತ್ ಮಲ್ಹೋತ್ರಾ ಸಾರಥ್ಯದ ಪ್ರೈಮ್ ಫೋಕಸ್ ಸ್ಟುಡಿಯೋ ರಾಮಾಯಣ ಸಿನಿಮಾವನ್ನು ನಿರ್ಮಿಸುತ್ತಿದೆ.

ಈ ಬಗ್ಗೆ ಪ್ರತಿಕ್ರಿಯಿಸಿರುವ ನಮಿತ್ ಮಲ್ಹೋತ್ರಾ, ರಾಮಾಯಣ ಕಥೆಗೆ ನ್ಯಾಯ ಸಲ್ಲಿಸಲು ನಾನು ಸಿದ್ಧನಾಗಿದ್ದೇನೆ. ನಮ್ಮ ಸಂಸ್ಕೃತಿಯನ್ನು ಜಗತ್ತಿಗೆ ಪರಿಚಯಿಸಲು ನಾನು ಉತ್ಸಕನಾಗಿದ್ದು, ನಾನು ಯಶ್ ಅವರಲ್ಲಿಯೂ ಇದನ್ನು ಕಂಡುಕೊಂಡಿದ್ದೇನೆ. ಅವರ ಪಯಣದಿಂದ ನಾನು ಸ್ಪೂರ್ತಿ ಪಡೆದಿದ್ದೇನೆ. ಯಶ್ ಅವರಲ್ಲಿರುವ ಯೋಜನೆಯನ್ನು ಅರಿತುಕೊಂಡಿದ್ದೇನೆ. ರಾಮಾಯಣ ದೃಶ್ಯಕಾವ್ಯವನ್ನು ತೆರೆಗೆ ತರುತ್ತಿದ್ದೇವೆ ಎಂದರು.

ಯಶ್ ಮಾತನಾಡಿ, ಭಾರತೀಯ ಸಿನಿಮಾವನ್ನು ಜಾಗತಿಕ ಮಟ್ಟದಲ್ಲಿ ಪ್ರದರ್ಶಿಸುವುದು ನನ್ನ ಬಹುದಿನಗಳ ಕನಸು. ಅದರ ಹುಡುಗಾಟದಲ್ಲಿ ನಾನು ಅತ್ಯುತ್ತಮ ಗಿಈಅ ಸ್ಟುಡಿಯೋ ಕಂಡುಕೊಂಡಿದ್ದೇನೆ. ಅದರ ಹಿಂದಿನ ಪ್ರೇರಕ ಶಕ್ತಿ ಒಬ್ಬ ಭಾರತೀಯ. ನಾವು ಸಿನಿಮಾ ರಂಗದ ಬೇರೆ ವಿಷಯಗಳ ಬಗ್ಗೆ ಚರ್ಚೆ ನಡೆಸುವಾಗ ರಾಮಾಯಣ ವಿಷಯವು ಬಂದಿತು. ಭಾರತೀಯ ಸಂಸ್ಕೃತಿಯನ್ನು ಜಗತ್ತಿಗೆ ಪ್ರಸ್ತುತಪಡಿಸುವ ಸಿನಿಮಾ ಇದಾಗಿದ್ದು, ಈ ಮಹಾಕಾವ್ಯ ಸಿನಿಮಾ ರೂಪ ತಾಳುತ್ತಿದೆ. ಆ ಅತ್ಯುತ್ತಮ ಅನುಭವನ್ನು ಜಗತ್ತಿಗೆ ನೀಡಲು ನಾವು ಕಾತರರಾಗಿದ್ದೇವೆ ಎಂದರು.

ನಮಿತ್ ಮಲ್ಹೋತ್ರಾ ಒಡೆತನದ ಪ್ರೈಮ್ ಫೋಕಸ್ ಸ್ಟುಡಿಯೋ ಜಾಗತಿಕ ಮಟ್ಟದ ಕಂಟೆಂಟ್ ಹಾಗೂ ವಿಭಿನ್ನ ಬಗೆಯ ಕ್ರಿಯೇಟ್ ಮಾಡುವ ಸ್ವತಂತ್ರ ನಿರ್ಮಾಣ ಕಂಪನಿಯಾಗಿದೆ. ಈ ಸಂಸ್ಥೆ ಸದ್ಯ ಮೂರು ಸಿನಿಮಾಗಳ ನಿರ್ಮಾಣದಲ್ಲಿ ತೊಡಗಿಸಿಕೊಂಡಿದೆ. ಆ ಪೈಕಿ ರಾಮಾಯಣ ಕೂಡ ಒಂದು. ಯಶ್ ತಮ್ಮದೇ ಮಾನ್ಸ್ಟರ್ ಮೈಂಡ್ ಕ್ರಿಯೇಷನ್ ಎಂಬ ನಿರ್ಮಾಣ ಸಂಸ್ಥೆ ಹೊಂದಿದ್ದಾರೆ. ಈ ಬ್ಯಾನರ್ ನಡಿ 'ಟಾಕ್ಸಿಕ್' ಸಿನಿಮಾವನ್ನು ನಿರ್ಮಾಣ ಮಾಡುತ್ತಿದ್ದಾರೆ. ಕೆವಿಎನ್ ಪ್ರೊಡಕ್ಷನ್ಸ್ ಜೊತೆಗೆ 'ಮಾನ್ಸ್ಟರ್ ಮೈಂಡ್' ಕ್ರಿಯೇಷನ್ಸ್ ಕೂಡ 'ಟಾಕ್ಸಿಕ್' ಸಿನಿಮಾದ ನಿರ್ಮಾಣದಲ್ಲಿ ಪಾಲುದಾರಿಕೆಯನ್ನು ಹೊಂದಿದೆ. ಇದೇ ಬ್ಯಾನರ್ ನಡಿ 'ರಾಮಾಯಣ' ಸಿನಿಮಾಗೂ ಯಶ್ ಬಂಡವಾಳ ಹೂಡುತ್ತಿದ್ದಾರೆ.

# ವಾಂಖೆಡೆಯಲ್ಲಿ ಹಿಸ್ಟರಿ ಬರೆದ ರೋಹಿತ್



ಇಂಡಿಯನ್ ಪ್ರೀಮಿಯರ್ ಲೀಗ್ ನಲ್ಲಿ ಹಿಟ್ ಮ್ಯಾನ್ ಖ್ಯಾತಿಯ ರೋಹಿತ್ ಶರ್ಮಾ ಭರ್ಜರಿ ಪ್ರದರ್ಶನ ನೀಡುತ್ತಿದ್ದಾರೆ. ಈ ಸ್ಫೋಟಕ ಬ್ಯಾಟಿಂಗ್ ನೊಂದಿಗೆ ಇದೀಗ ಹೊಸ ಇತಿಹಾಸ ನಿರ್ಮಿಸಿದ್ದಾರೆ. ಅದು ಸಹ ತವರು ಮೈದಾನದಲ್ಲಿ ಸಿಕ್ಸರ್ ಗಳ ಸುರಿಮಳೆಗೈಯ್ಯುವ ಮೂಲಕ ಎಂಬುದು ವಿಶೇಷ. ಮುಂಬೈನ ವಾಂಖೆಡೆ ಸ್ಟೇಡಿಯಂನಲ್ಲಿ ನಡೆದ ಐಪಿಎಲ್ ನ 25ನೇ ಪಂದ್ಯದಲ್ಲಿ ಮೊದಲು ಬ್ಯಾಟ್ ಮಾಡಿದ ಆರ್ ಸಿಬಿ 8 ವಿಕೆಟ್ ಕಳೆದುಕೊಂಡು 196 ರನ್ ಕಲೆಹಾಕಿತು.

197 ರನ್ ಗಳ ಗುರಿಯನ್ನು ಬೆನ್ನತ್ತಿದ ಮುಂಬೈ ಇಂಡಿಯನ್ಸ್ ಪರ ರೋಹಿತ್ ಶರ್ಮಾ 24 ಎಸೆತಗಳಲ್ಲಿ 3 ಭರ್ಜರಿ ಸಿಕ್ಸ್ ಹಾಗೂ 3 ಫೋರ್ ಗಳೊಂದಿಗೆ 38 ರನ್ ಬಾರಿಸಿದ್ದರು. ಈ ಮೂರು ಸಿಕ್ಸರ್ ಗಳೊಂದಿಗೆ ವಾಂಖೆಡೆ ಸ್ಟೇಡಿಯಂನಲ್ಲಿ 100 ಸಿಕ್ಸ್ ಗಳನ್ನು ಬಾರಿಸಿದ ಮೊದಲ ಬ್ಯಾಟರ್ ಎನಿಸಿಕೊಂಡರು.

ಅಲ್ಲದೆ ಒಂದೇ ಸ್ಟೇಡಿಯಂನಲ್ಲಿ 100 ಸಿಕ್ಸ್ ಗಳನ್ನು ಸಿಡಿಸಿದ 2ನೇ ಭಾರತೀಯ ಆಟಗಾರ ಎಂಬ ಹೆಗ್ಗಳಿಕೆಗೂ ಪಾತ್ರರಾದರು. ಇದಕ್ಕೂ ಮುನ್ನ ಇಂತಹದೊಂದು ಅಪರೂಪದ ದಾಖಲೆಯನ್ನು ವಿರಾಟ್ ಕೊಹ್ಲಿ ಬರೆದಿದ್ದಾರೆ.

ಕಿಂಗ್ ಕೊಹ್ಲಿ ಬೆಂಗಳೂರಿನ ಚಿನ್ನಸ್ವಾಮಿ ಸ್ಟೇಡಿಯಂನಲ್ಲಿ ಇದುವರೆಗೆ 114 ಸಿಕ್ಸ್ ಗಳನ್ನು ಬಾರಿಸಿದ್ದಾರೆ. ಈ ಮೂಲಕ ಒಂದೇ ಸ್ಟೇಡಿಯಂನಲ್ಲಿ ಅತೀ ಹೆಚ್ಚು ಸಿಕ್ಸ್ ಸಿಡಿಸಿದ ಭಾರತೀಯ ಬ್ಯಾಟರ್ ಎನಿಸಿಕೊಂಡಿದ್ದಾರೆ. ಇದೀಗ ಈ ಪಟ್ಟಿಯಲ್ಲಿ ರೋಹಿತ್ ಶರ್ಮಾ ದ್ವಿತೀಯ ಸ್ಥಾನ ಅಲಂಕರಿಸಿದ್ದಾರೆ.

ಇದೀಗ ರೋಹಿತ್ ಶರ್ಮಾ ಮುಂಬೈನ ವಾಂಖೆಡೆ ಸ್ಟೇಡಿಯಂನಲ್ಲಿ 100 ಸಿಕ್ಸ್ ಗಳನ್ನು ಪೂರೈಸಿದ್ದಾರೆ. ಅಲ್ಲದೆ ಮುಂಬರುವ ಪಂದ್ಯಗಳಲ್ಲಿ 3 ಸಿಕ್ಸ್ ಗಳನ್ನು ಬಾರಿಸಿದರೆ ಟಿ20 ಕ್ರಿಕೆಟ್ ನಲ್ಲಿ 500 ಸಿಕ್ಸರ್ ಗಳನ್ನು ಸಿಡಿಸಿದ ಮೊದಲ ಭಾರತೀಯ ಬ್ಯಾಟರ್ ಎನಿಸಿಕೊಳ್ಳಲಿದ್ದಾರೆ.

ಇನ್ನು ಈ ಪಂದ್ಯದಲ್ಲಿ ಆರ್ ಸಿಬಿ ನೀಡಿದ 197 ರನ್ ಗಳ ಗುರಿಯನ್ನು ಬೆನ್ನತ್ತಿದ ಮುಂಬೈ ಇಂಡಿಯನ್ಸ್ ತಂಡವು 15.3 ಓವರ್ ಗಳಲ್ಲಿ 3 ವಿಕೆಟ್ ಕಳೆದುಕೊಂಡು 199 ರನ್ ಗಳಿಸಿ, 7 ವಿಕೆಟ್ ಗಳ ಭರ್ಜರಿ ಜಯ ಸಾಧಿಸಿದೆ. ಈ ಗೆಲುವಿನೊಂದಿಗೆ ಮುಂಬೈ ಇಂಡಿಯನ್ಸ್ ತಂಡವು ಅಂಕಪಟ್ಟಿಯಲ್ಲಿ 7ನೇ ಸ್ಥಾನಕ್ಕೇರಿದೆ.

# ಮೋಸದಾಟಕ್ಕೆ ಮುಂದಾಗಿ ಸಿಕ್ಕಿಬಿದ್ದ ರಿಷಭ್ ಪಂತ್



ಇಂಡಿಯನ್ ಪ್ರೀಮಿಯರ್ ಲೀಗ್‌ನ 26ನೇ ಪಂದ್ಯವು ನಾಟಕೀಯ ಸನ್ನಿವೇಶಕ್ಕೆ ಸಾಕ್ಷಿಯಾಗಿತ್ತು. ಲಕ್ನೋನ ಏಕಾನ ಸ್ಟೇಡಿಯಂನಲ್ಲಿ ನಡೆದ ಈ ಪಂದ್ಯದಲ್ಲಿ ಡೆಲ್ಲಿ ಕ್ಯಾಪಿಟಲ್ಸ್ ಮತ್ತು ಲಕ್ನೋ ಸೂಪರ್ ಜೈಂಟ್ಸ್ ತಂಡಗಳು ಮುಖಾಮುಖಿಯಾಗಿದ್ದವು.

ಈ ಪಂದ್ಯದಲ್ಲಿ ಟಾಸ್ ಗೆದ್ದ ಎಲ್ ಎಸ್ ಜಿ ತಂಡದ ನಾಯಕ ಕೆಎಲ್ ರಾಹುಲ್ ಬ್ಯಾಟಿಂಗ್ ಆಯ್ದುಕೊಂಡಿದ್ದರು. ಅದರಂತೆ ಇನಿಂಗ್ಸ್ ಆರಂಭಿಸಿದ ಲಕ್ನೋ ಸೂಪರ್ ಜೈಂಟ್ಸ್ ತಂಡವು 4ನೇ ಓವರ್ ನ 3 ಎಸೆತದಲ್ಲಿ ಕ್ವಿಂಟನ್ ಡಿಕಾಕ್ ವಿಕೆಟ್ ಕಳೆದುಕೊಂಡಿತು.



ಇನ್ನು ಪಂದ್ಯದ 5ನೇ ಓವರ್ ನಲ್ಲಿ ಇಶಾಂತ್ ಶರ್ಮಾ ಎಸೆದ ಚೆಂಡು ಲೆಗ್ ಸೈಡ್ ನತ್ತ ವೈಡ್ ಆಗಿತ್ತು. ತಕ್ಷಣವೇ ಫೀಲ್ಡ್ ಅಂಪೈರ್ ವೈಡ್ ನೀಡಿದ್ದರು.

ಈ ವೇಳೆ ಡೆಲ್ಲಿ ಕ್ಯಾಪಿಟಲ್ಸ್ ತಂಡದ ನಾಯಕ ರಿಷಭ್ ಪಂತ್ ರಿವ್ಯೂ ಮೊರೆ ಹೋದರು. ಮರು ಪರಿಶೀಲನೆ ವೇಳೆ ವೈಡ್ ಆಗಿರುವುದು ಸ್ಪಷ್ಟವಾಗಿತ್ತು. ಇತ್ತ ಅಂಪೈರ್ ನಿರ್ಧಾರ ಸರಿಯಾಗಿತ್ತು ಎಂಬುದು ಗೊತ್ತಾಗುತ್ತಿದ್ದಂತೆ ಪಂತ್ ನಾನು ರಿವ್ಯೂ ತೆಗೆದುಕೊಂಡಿಲ್ಲ ಎಂದು ವಾಗ್ವಾದಕ್ಕಿಳಿದರು.

ನಾನು ಯಾವುದೇ DRS ಬಯಸಿರಲಿಲ್ಲ. ಹೀಗಾಗಿ ನಮ್ಮ ರಿವ್ಯೂ ಅನ್ನು ಕಡಿತ ಮಾಡುವಂತಿಲ್ಲ ಎಂಬ ವಾದವನ್ನು ಮುಂದಿಟ್ಟಿದ್ದರು. ಈ ವೇಳೆ ಟಿವಿ ರಿಪ್ಲೇನಲ್ಲಿ ರಿಷಭ್ ಪಂತ್ ರಿವ್ಯೂಗೆ ಮನವಿ ಸಲ್ಲಿಸುತ್ತಿರುವುದನ್ನು ತೋರಿಸಲಾಯಿತು. ಅತ್ತ ಬಿಗ್ ಸ್ಕ್ರೀನ್ ನಲ್ಲಿ ರಿವ್ಯೂ ಅಪೀಲ್ ಗೆ ಮನವಿ ಸಲ್ಲಿಸುತ್ತಿರುವುದು ಕಾಣುತ್ತಿದ್ದಂತೆ ಪಂತ್ ಅಂಪೈರ್ ಜೊತೆಗಿನ ವಾಗ್ವಾದ ನಿಲ್ಲಿಸಿ ವಿಕೆಟ್ ಕೀಪಿಂಗ್ ಮಾಡಲು ತೆರಳಿದರು.

ಇದೀಗ ಮೋಸದಾಟಕ್ಕೆ ಮುಂದಾಗಿದ್ದ ರಿಷಭ್ ಪಂತ್ ಅವರ ವಿಡಿಯೋ-ಫೋಟೋಗಳು ಸೋಷಿಯಲ್ ಮೀಡಿಯಾದಲ್ಲಿ ವೈರಲ್ ಆಗಿದ್ದು, ಇಂತಹ ನಡೆಗಳ ಮೂಲಕ ಅಂಪೈರ್ ಅನ್ನು ಗೊಂದಲಕ್ಕೀಡಲು ಮಾಡಲು ಯತ್ನಿಸುವವರ ವಿರುದ್ಧ ಕ್ರಮ ಕೈಗೊಳ್ಳಬೇಕೆಂದು ಅನೇಕರು ಆಗ್ರಹಿಸಿದ್ದಾರೆ.

# ಏ.16ರಿಂದ ಮಂಡ್ಯದಲ್ಲಿ ಹೆಚ್‌ಡಿಕೆ ಪ್ರಚಾರ



**ಮಂಡ್ಯ:** ರಣ ಬಿಸಿಲಿನ ಕಾವು ಹೆಚ್ಚಾದ್ದಂತೆ ಮಂಡ್ಯ ಲೋಕ ಅಖಾಡದ ಕಾವು ಜೋರಾಗ್ತಿದೆ. ಮೈತ್ರಿ ಅಭ್ಯರ್ಥಿಯನ್ನ ಸೋಲಿಸಲೇಬೇಕೆಂದು ಪಣ ತೊಟ್ಟಿರುವ ?ಕೈ?ಪಡೆ ಹಳ್ಳಿ ಹಳ್ಳಿಗಳಲ್ಲಿ ಭರ್ಜರಿ ಪ್ರಚಾರ ನಡೆಸ್ತಿದೆ. ಕಾಂಗ್ರೆಸ್ ನ ಕ್ಯಾಂಪೇನ್ ಸ್ಪೀಡ್ ಹೆಚ್ಚಾಗ್ತಿದ್ದಂತೆ ಅಲರ್ಟ್ ಆಗಿರುವ ಮೈತ್ರಿ ಅಭ್ಯರ್ಥಿ ದೋಸ್ತಿ ನಾಯಕರೊಂದಿಗೆ ಮತ್ತೆ ಮಂಡ್ಯ ಪ್ರಚಾರ ಅಖಾಡಕ್ಕೆ ಧುಮುಕಲು ರೆಡಿಯಾಗಿದ್ದಾರೆ. ಆ ಮೂಲಕ ಕೈ ಅಭ್ಯರ್ಥಿ ಮಣಿಸುವ ಪ್ಲ್ಯಾನ್ ಮಾಡಿದ್ದಾರೆ.

ಮಂಡ್ಯ ಲೋಕಸಭಾ ಅಖಾಡ ದಿನೇ ದಿನೇ ರಂಗೇರುತ್ತಿದೆ. ಅದರಲ್ಲಿಯೂ ಮಾಜಿ ಸಿಎಂ ಕುಮಾರಸ್ವಾಮಿ ಮೈತ್ರಿ ಅಭ್ಯರ್ಥಿಯಾಗಿ ಅಖಾಡಕ್ಕೆ ಧುಮುಕಿರುವುದರಿಂದ ಪ್ರತಿಷ್ಠೆಯಾಗಿ ತೆಗೆದುಕೊಂಡಿರುವ ಕೈ ಪಡೆ, ಹೆಚ್ಡಿಕೆ ಸೋಲಿಸಿ ಮಣ್ಣು ಮುಕ್ಕಿಸಲೇಬೇಕೆಂದು ಪಣ ತೊಟ್ಟಿದೆ. ಜಿಲ್ಲೆಯಾದ್ಯಂತ ಭರ್ಜರಿ ಕ್ಯಾಂಪೇನ್ ನಡೆಸುತ್ತಿರುವ ಕೈ ಅಭ್ಯರ್ಥಿ ಸ್ಟಾರ್ ಚಂದ್ರು ಈಗಾಗಲೇ 3ನೇ ಸುತ್ತಿನ ಪ್ರಚಾರ ಆರಂಭಿಸಿದ್ದಾರೆ. ಮತ್ತೊಂದೆಡೆ ಸಚಿವರು, ಶಾಸಕರು ಸೇರಿದಂತೆ ಕೈ ನಾಯಕರು ಕ್ಯಾಂಪೇನ್ ನಲ್ಲಿ ತೊಡಗಿದ್ದಾರೆ. ಇದೀಗ ಕೈ ಪಡೆಯ ಪ್ರಚಾರದ ವೇಗ ಅರಿತಿರುವ ದೋಸ್ತಿ ಅಭ್ಯರ್ಥಿ ಹೆಚ್‌ಡಿಕೆ ಖುದ್ದು ತಾವೇ ಕ್ಯಾಂಪೇನ್ ಅಖಾಡಕ್ಕೆ ಧುಮುಕಲು ಸಜ್ಜಾಗಿದ್ದಾರೆ. ಮಂಡ್ಯ ಲೋಕಸಭಾ ಕ್ಷೇತ್ರದಲ್ಲಿ 8 ದಿನ 8 ವಿಧಾನಸಭಾ ಕ್ಷೇತ್ರಗಳಲ್ಲಿ ಮಿಂಚಿನ ವೇಗದಲ್ಲಿ ಪ್ರಚಾರ ನಡೆಸಲು ಡೇಟ್ ಕೂಡ ಫಿಕ್ಸ್ ಮಾಡಿಕೊಂಡಿದ್ದಾರೆ.

**ಮಂಡ್ಯದಲ್ಲಿ ಯಾವಾಗ-ಎಲ್ಲೆಲ್ಲಿ ಪ್ರಚಾರ?:** ಮಂಡ್ಯ ಲೋಕಸಭಾ ಕ್ಷೇತ್ರ 8 ವಿಧಾನಸಭಾ ಕ್ಷೇತ್ರಗಳನ್ನ ಒಳಗೊಂಡಿದ್ದು, 8 ಕ್ಷೇತ್ರದಲ್ಲಿಯೂ ಸಮಾವೇಶ ನಡೆಸಿ ಮತದಾರರ ಗಮನ ಸೆಳೆಯಲು, ಮತದಾರರ ಮನೆ, ಮನ ತಲುಪಲು ಹೆಚ್‌ಡಿಕೆ ಮುಂದಾಗಿದ್ದಾರೆ. ಆದ್ದರಿಂದ ಏ.16 ರಿಂದ ಏ.24ರ ವರೆಗೆ ಪ್ರಚಾರ ಸಮಾವೇಶ ನಡೆಸಲು ರೆಡಿಯಾಗಿದ್ದಾರೆ. ಏ.16 ಮಳವಳ್ಳಿ, 17 ಕೆ.ಆರ್ ಪೇಟೆ, 18 ಕೆ.ಆರ್ ನಗರ, 19 ಮೇಲುಕೋಟೆ, 21 ಶ್ರೀರಂಗಪಟ್ಟಣ, 22 ನಾಗಮಂಗಲ, 23 ಮದ್ದೂರು, 24 ರಂದು ಮಂಡ್ಯದಲ್ಲಿ ಬೃಹತ್ ಸಮಾವೇಶದ ಮೂಲಕ ಶಕ್ತಿ ಪ್ರದರ್ಶನಕ್ಕೆ ಸಜ್ಜಾಗಿದ್ದಾರೆ. ಆ ಮೂಲಕ ಕೈ ಅಭ್ಯರ್ಥಿಗೆ ಸೋಲುಣಿಸಿ, ಕೈ ನಾಯಕರಿಗೆ ಟಕ್ಕರ್ ಕೊಡಲು ಮಾಜಿ ಸಿಎಂ ಕುಮಾರಸ್ವಾಮಿ ರೆಡಿಯಾಗಿದ್ದಾರೆ. ಹೆಚ್‌ಡಿಕೆ ಜೊತೆ ಬಿಜೆಪಿಯ ರಾಜ್ಯ ನಾಯಕರು ಸಮಾವೇಶದಲ್ಲಿ ಭಾಗಿಯಾಗಲಿದ್ದು, ದೋಸ್ತಿ ಪಡೆ ಒಟ್ಟಾಗಿ ಕಾಂಗ್ರೆಸ್ ಮಣಿಸಲು ತಯಾರಾಗಿದ್ದಾರೆ.

ಇನ್ನೂ ಹೆಚ್‌ಡಿಕೆ ಒಂದು ಕಡೆ ತಾಲೂಕು ಮಟ್ಟದಲ್ಲಿ ಬೃಹತ್ ಸಮಾವೇಶದ ಮೂಲಕ ಕ್ಯಾಂಪೇನ್ ಮಾಡಿದ್ರೆ, ಇತ್ತ ಪುತ್ರ ನಿಖಿಲ್ ತಂದೆ ಗೆಲುವಿಗಾಗಿ ಜಿಲ್ಲೆಯ ಎಲ್ಲ ಕ್ಷೇತ್ರದಲ್ಲಿಯೂ ಹೋಬಳಿವಾರು ಸಭೆ, ರೋಡ್ ಶೋಗೆ ಸಿದ್ಧತೆ ಮಾಡಿಕೊಂಡಿದ್ದಾರೆ. ಶನಿವಾರದಿಂದಲೇ ನಿಖಿಲ್ ಅಖಾಡಕ್ಕೆ ಧುಮುಕಲಿದ್ದಾರೆ. ಅದರ ಜೊತೆ ಆಯಾ ವಿಧಾನಸಭಾ ಕ್ಷೇತ್ರದ ಶಾಸಕ, ಮಾಜಿ ಶಾಸಕರು ಸ್ಥಳೀಯ ಮೈತ್ರಿ ನಾಯಕರು, ಕಾರ್ಯಕರ್ತರೊಂದಿಗೆ ಹಳ್ಳಿ ಹಳ್ಳಿಗಳಲ್ಲಿ ಪ್ರಚಾರ ನಡೆಸಲಿದ್ದಾರೆ. ಇಂದಿನಿಂದಲೇ ಶಾಸಕ, ಮಾಜಿ ಶಾಸಕರು ತಮ್ಮ ನಾಯಕ, ಮೈತ್ರಿ ಅಭ್ಯರ್ಥಿ ಹೆಚ್ಡಿಕೆ ಪರ ಕ್ಯಾಂಪೇನ್ ನಲ್ಲಿ ತೊಡಗುತ್ತಿದ್ದಾರೆ.

ಕೈ ಪಡೆಯ ಕ್ಯಾಂಪೇನ್ ಸ್ಪೀಡ್ ಕಂಡ ದೋಸ್ತಿ ಪಡೆ ಫೈ ಅಲರ್ಟ್ ಆಗಿದೆ. ಖುದ್ದು ತಾವು ಅಖಾಡಕ್ಕೆ ಧುಮುಕುವ ಮೂಲಕ ಕೈ ಪಡೆಗೆ ಸೋಲಿಣಿಸಲು ಸರ್ವ ಪ್ರಯತ್ನ ಮಾಡಲು ಪ್ಲ್ಯಾನ್ ಮಾಡಿಕೊಂಡಿದೆ. ಆದ್ರೆ ಮತದಾರರು ಯಾರಿಗೆ ಜೈ ಅಂತಾನೆ, ಯಾರಿಗೆ ಕೈ ಕೊಡ್ತಾನೆ ಎಂದು ಚುನಾವಣೆ ನಡೆದು ಫಲಿತಾಂಶ ಬರುವವರೆಗೂ ಕಾಯಬೇಕಿದೆ.

# ಪ್ರತಿ ಬಾರಿ ಮೈಸೂರಿನಲ್ಲಿ ಕದ್ದು ಮುಚ್ಚಿ ಪ್ರತಾಪ್ ಸಿಂಹಗೆ ಮತ ಹಾಕುತ್ತಿದ್ವಿ



**ಮಂಡ್ಯ:** ಲೋಕಸಭಾ ಚುನಾವಣೆ ಸಮೀಪಿಸುತ್ತಿದ್ದು, ಉಭಯ ಪಕ್ಷಗಳು ಅಬ್ಬರದ ಪ್ರಚಾರದಲ್ಲಿ ತೊಡಗಿಕೊಂಡಿವೆ. ಜೊತೆಗೆ ಹೇಗಾದರೂ ಗೆಲುವು ಸಾಧಿಸಬೇಕೆಂದು ತಂತ್ರಗಳನ್ನು ಹೆಣೆಯುತ್ತಿವೆ.

ಈ ಮಧ್ಯೆ ಮಂಡ್ಯದ ಬಿಜೆಪಿ-ಜೆಡಿಎಸ್ ಸಭೆಯಲ್ಲಿ ಮಾಜಿ ಸಚಿವ ಪುಟ್ಟರಾಜು ಮಾತನಾಡಿ, 'ಪ್ರತಿ ಬಾರಿ ಮೈಸೂರಿನಲ್ಲಿ ಜೆಡಿಎಸ್‌ನವರು ಕದ್ದು ಮುಚ್ಚಿ ಪ್ರತಾಪ್ ಸಿಂಹಗೆ ಮತ ಹಾಕುತ್ತಿದ್ದೇವೆ. ಈಗ ಅಧಿಕೃತವಾಗಿ ಬಿಜೆಪಿ ಜೊತೆ ಮೈತ್ರಿಯಾಗಿದೆ. ಪ್ರತಾಪ್ ಸಿಂಹ ಅವರನ್ನು ಹೊತ್ತು ಮೆರಸಬೇಕು ಅಂದುಕೊಂಡಿದ್ದೇವು, ಆದ್ರೆ, ಪಕ್ಷದ ತೀರ್ಮಾನದಿಂದ ಮಹಾರಾಜರ ವಂಶಸ್ಥರು ನಿಂತಿದ್ದು ಸ್ವಾಗತ ಎಂದರು.

ಇದೇ ವೇಳೆ ಸಚಿವ ಚಲುವರಾಯಸ್ವಾಮಿ ವಿರುದ್ಧ ಏಕವಚನದಲ್ಲಿಯೇ ವಾಗ್ದಾಳಿ ನಡೆಸಿದ ಅವರು, ಚಲುವರಾಯಸ್ವಾಮಿ ಬಿಜೆಪಿ-ಜೆಡಿಎಸ್‌ನ ನಿಜವಾದ ಫಲಾನುಭವಿ. ದೇವೇಗೌಡರ ಭಿಕ್ಷೆಯಿಂದ ಈಗ ನಾಯಕರಾಗಿ ದೇವೇಗೌಡರ ಬಗ್ಗೆ ಕೀಳಾಗಿ ಮಾತಾಡುತ್ತಾ ಇದ್ದಾರೆ. ನಾವು ಚುಂಚನಗಿರಿ ಮಠಕ್ಕೆ ಹೋಗಿ ಶ್ರೀಗಳ ಆಶೀರ್ವಾದ ಪಡೆದಿದ್ದೇವೆ. ಅದನ್ನೇ ದೊಡ್ಡದಾಗಿ ಚಲುವರಾಯಸ್ವಾಮಿ ಮಾತಾಡುತ್ತಾ ಇದ್ದಾರೆ. ಚುಂಚನಗಿರಿ ಮಠ ಹೊಡೆಯಬೇಕು ಎಂದು ಹೇಳಿದ್ದು ಯಾರು?, ಬಾ ನಾನು ಭೈರವನ ಮೇಲೆ ಪ್ರಮಾಣ ಮಾಡ್ತೀನಿ, ನೀನು ಮಾಡು ಬಾ ಎಂದು ಸವಾಲ್ ಹಾಕಿದ್ದಾರೆ. ನೀನು ಇದೇ ರೀತಿ ಪುಂಡಾಟಿಕೆ ಮಾತು ಆಡಿದ್ರೆ, ನಿನ್ನ ಮಂಡ್ಯ ಜಿಲ್ಲೆಯಲ್ಲಿ ಅಡ್ಡ ಹಾಕುತ್ತಾರೆ. ದೇವೇಗೌಡರ ಬಗ್ಗೆ ಮಾತಾಡುತ್ತೀಯಾ, ದೇವೇಗೌಡರನ್ನು ಕಾಲು ಹಿಡಿದುಕೊಂಡು ಕುಮಾರಣ್ಣನ ಸಿಎಂ ಮಾಡಿದ್ರಿ. ಬಳಿಕ ಕುಮಾರಣ್ಣ ಮುಳ್ಳಿನ ಹಾಸಿಗೆ ಮೇಲೆ ಮಲಗಿದರು. ಉತ್ತರ ಕರ್ನಾಟಕದ ಎಂಎಲ್‌ಎ ಇದಕ್ಕೆ ಸೈನ್ ಹಾಕು ಅಂತಾನೆ, ನೀವು ಹೊಂದಾಣಿಕೆ ಬಗ್ಗೆ ಮತಾಡುತ್ತೀರಾ?, ನಿಜವಾದ ಮೈತ್ರಿ ಅಂದ್ರೆ ಬಿಜೆಪಿ-ಜೆಡಿಎಸ್‌ನದ್ದು, ಕುಮಾರಣ್ಣ ದೇವೇಗೌಡರ ಕುಟುಂಬದ ಬಗ್ಗೆ ಮಾತಾಡಿದ್ರೆ ನಿನ್ನ ಬಂಡವಾಳ ಹೊರ ತೆಗೆಯುತ್ತೇನೆ. ಈಗ ಹಣ ಇರುವ ಸ್ಟಾರ್ ಚಂದ್ರುನನ್ನು ತಂದಿದ್ದೀರಾ?, ಹಣದಿಂದ ಮಂಡ್ಯ ಜನರ ಜೇಬು ತುಂಬಿಸೋಕೆ ಆಗಲ್ಲ. ಮೋದಿ ಅವರು ಮತ್ತೊಮ್ಮೆ ಪ್ರಧಾನಿ ಆಗುವುದು ಕೂಡ ತಪ್ಪಿಸೋಕೆ ಆಗಲ್ಲ ಎಂದು ಕಿಡಿಕಾರಿದರು.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com

## ಇರಾನ್, ಇಸ್ರೇಲ್‌ಗೆ ಪ್ರಯಾಣಿಸ್ಬೇಡಿ ಪ್ರಯಾಣಿಕರಿಗೆ ಕೇಂದ್ರ ಸರ್ಕಾರದ ಸಲಹೆ



**ನವದೆಹಲಿ:** ಇರಾನ್ ಮತ್ತು ಇಸ್ರೇಲ್ ನಡುವೆ ಚಾಲ್ತಿಯಲ್ಲಿರುವ ಉದ್ವಿಗ್ನ ಪರಿಸ್ಥಿತಿಯ ಹಿನ್ನೆಲೆಯಲ್ಲಿ, ವಿದೇಶಾಂಗ ಸಚಿವಾಲಯ ಶುಕ್ರವಾರ ಭಾರತೀಯ ನಾಗರಿಕರಿಗೆ ಪ್ರಯಾಣ ಸಲಹೆ ನೀಡಿದೆ.

ಈ ಕುರಿತು ಹೇಳಿಕೆ ಬಿಡುಗಡೆ ಮಾಡಿರುವ ವಿದೇಶಾಂಗ ಸಚಿವಾಲಯ, ಈ ಪ್ರದೇಶದಲ್ಲಿ ಚಾಲ್ತಿಯಲ್ಲಿರುವ ಪರಿಸ್ಥಿತಿಯನ್ನ ಗಮನದಲ್ಲಿಟ್ಟುಕೊಂಡು, ಮುಂದಿನ ಸೂಚನೆ ಬರುವವರೆಗೆ ಎಲ್ಲಾ ಭಾರತೀಯರು ಇರಾನ್ ಅಥವಾ ಇಸ್ರೇಲ್ಗೆ ಪ್ರಯಾಣಿಸದಂತೆ ಸೂಚಿಸಲಾಗಿದೆ.

ಪ್ರಸ್ತುತ ಇರಾನ್ ಅಥವಾ ಇಸ್ರೇಲ್ನಲ್ಲಿ ವಾಸಿಸುತ್ತಿರುವ ಎಲ್ಲರೂ ಅಲ್ಲಿನ ಭಾರತೀಯ ರಾಯಭಾರ ಕಚೇರಿಗಳೊಂದಿಗೆ ಸಂಪರ್ಕದಲ್ಲಿರಲು ಮತ್ತು ತಮ್ಮನ್ನು ನೋಂದಾಯಿಸಿಕೊಳ್ಳಲು ವಿನಂತಿಸಲಾಗಿದೆ. ಇನ್ನು ಅವರ ಸುರಕ್ಷತೆಯ ಬಗ್ಗೆ ಹೆಚ್ಚಿನ ಮುನ್ನೆಚ್ಚರಿಕೆಗಳನ್ನು ಅನುಸರಿಸಲು ಮತ್ತು ಅವರ ಚಲನೆಯನ್ನು ಕನಿಷ್ಠಕ್ಕೆ ನಿರ್ಬಂಧಿಸಲು ಅವರನ್ನ ವಿನಂತಿಸಲಾಗಿದೆ ಎಂದು ತಿಳಿಸಿದೆ.

## ಬಾಬಾಸಾಹೇಬ್ ಅಂಬೇಡ್ಕರ್ ಹುಟ್ಟಿಬಂದರೂ ಸಂವಿಧಾನ ಬದಲಾಯಿಸಲಾಗದು: ಮೋದಿ



**ಜೈಪುರ:** ಬಿಜೆಪಿ ನೇತೃತ್ವದ ಸರ್ಕಾರಕ್ಕೆ ದೇಶದ ಸಂವಿಧಾನವೇ ಎಲ್ಲ. ಬಾಬಾಸಾಹೇಬ್ ಅಂಬೇಡ್ಕರ್ ಅವರೇ ಹುಟ್ಟಿಬಂದರೂ, ಅವರಿಂದಲೂ ಈಗ ದೇಶದ ಸಂವಿಧಾನ ಬದಲಾಯಿಸಲಾಗದು ಎಂದು ಪ್ರಧಾನಿ ನರೇಂದ್ರ, ಮೋದಿ ಜೈಪುರದ ಬಾರ್ಮೇರ್ನಲ್ಲಿ ಶುಕ್ರವಾರ ಹೇಳಿದರು. ಬಿಜೆಪಿ ಅಭ್ಯರ್ಥಿ ಪರ ಚುನಾವಣಾ ಪ್ರಚಾರ ನಡೆಸಿದ ಅವರು, ಬಿಜೆಪಿ ಎಂದಿಗೂ ಸಂವಿಧಾನ ಬದಲಾಯಿಸುವುದಿಲ್ಲ. ಆದರೆ, ದೇಶದ ಮೇಲೆ ತುರ್ತು ಪರಿಸ್ಥಿತಿ ಹೇರಿ ಸಂವಿಧಾನವನ್ನು ದುರ್ಬಲಗೊಳಿಸಿದ ಕಾಂಗ್ರೆಸ್, ಈಗ ಸಂವಿಧಾನ ರಕ್ಷಣೆ ಹೆಸರಿನಲ್ಲಿ ಮೋದಿಯನ್ನು ಟೀಕಿಸುತ್ತಿದೆ ಎಂದರು.

## ಗೋಧಿ ಬೆಳೆ ಕಟಾವು ಮಾಡಿದ ನಟಿ ಹೇಮಾ ಮಾಲಿನಿ

**ಮಥುರಾ:** ಮಥುರಾ ಲೋಕಸಭಾ ಸಂಸದೆ ಹಾಗೂ ನಟಿ ಹೇಮಾ ಮಾಲಿನಿ ಅವರು ಚುನಾವಣಾ ಪ್ರಚಾರದ ವೇಳೆ ರೈತರ ಜೊತೆಗೂಡಿ ಸುಡು ಬಿಸಿಲಿನಲ್ಲಿ ಕೈಯಲ್ಲಿ ಗದ್ದೆಗೆ ತೆರಳಿ ಗೋಧಿ ಬೆಳೆ ಕಟಾವು ಮಾಡುತ್ತಿದ್ದ ದೃಶ್ಯ ಕಂಡು ಬಂತು.ತಮ್ಮ ಸಾಮಾಜಿಕ ಮಾಧ್ಯಮ ಖಾತೆಯಲ್ಲಿ ಬೆಳೆ ಕಟಾವು ಮಾಡುತ್ತಿರುವ ಚಿತ್ರ ಹಾಗೂ ಅಲ್ಲಿ ರೈತ ಮಹಿಳೆಯರೊಂದಿಗೆ ತೆಗೆದ ಫೋಟೊಗಳನ್ನು ಹಂಚಿಕೊಂಡಿರುವ ಹೇಮಾ ಮಾಲಿನಿ ಅವರು, ನಾನು ಕಳೆದ ಹತ್ತು ವರ್ಷಗಳಿಂದ ಈ ಗ್ರಾಮಕ್ಕೆ ಬರುತ್ತಿದ್ದೇನೆ, ರೈತರೊಂದಿಗೆ ಮಾತನಾಡಲು ಅವಕಾಶ ಸಿಕ್ಕಿರುವುದು ಸಂತಸ ತಂದಿದೆ ಎಂದು ಎಕ್ಸ್ ಖಾತೆಯಲ್ಲಿ ಬರೆದುಕೊಂಡಿದ್ದಾರೆ. ಚಿತ್ರದಲ್ಲಿ ಅವರು ಕಾಂಜೀವರಂ ಸೀರೆಯನ್ನು ಧರಿಸಿ ಮಧ್ಯಾಹ್ನದ ಸಮಯದಲ್ಲಿ ರೈತರೊಂದಿಗೆ ಬೆಳೆ ಕಟಾವು ಮಾಡುತ್ತಿರುವುದನ್ನು ಕಾಣಬಹುದು.ಹೇಮಾ ಮಾಲಿನಿ ಸತತ ಎರಡು ಬಾರಿ ಈ ಕ್ಷೇತ್ರದಿಂದ ಸಂಸದರಾಗಿದ್ದಾರೆ. ಈ ಬಾರಿಯೂ ಬಿಜೆಪಿ ಅವರಿಗೆ ಲೋಕಸಭೆ ಚುನಾವಣೆಗೆ ಟಿಕೆಟ್ ನೀಡಿದೆ. ಇದಕ್ಕೂ ಮುನ್ನ 2019ರ ಲೋಕಸಭೆ ಚುನಾವಣೆಯಲ್ಲಿ ಹೇಮಾ ಮಾಲಿನಿ ಇದೇ ರೀತಿ ರೈತರೊಂದಿಗೆ ಕಾಣಿಸಿಕೊಂಡಿದ್ದರು.



## ಕರಡಿಯಾಗಿ ಬದಲಾಗುತ್ತಿರುವ ಬಾಲಕ

**ದೆಹಲಿ:** ಗರ್ಭಾವಸ್ಥೆಯಲ್ಲಿ ಮಹಿಳೆಯರು ತಮ್ಮ ದೇಹ ಮತ್ತು ಆರೋಗ್ಯದ ಬಗ್ಗೆ ಸಂಪೂರ್ಣ ಕಾಳಜಿ ವಹಿಸಬೇಕು ಎಂದು ವೈದ್ಯರು ಯಾವಾಗಲೂ ಹೇಳುತ್ತಾರೆ. ಏಕೆಂದರೆ ಈ ಸಮಯದಲ್ಲಿ ತಾಯಿಯ ದೇಹವು ತಾಯಿಗೆ ಮಾತ್ರ ಸೇರಿದ್ದಲ್ಲ.ಮಗುವು ತಾಯಿಯ ದೇಹದಿಂದ ಪೋಷಕಾಂಶಗಳನ್ನು ಸಹ ಪಡೆಯುತ್ತದೆ.

ಮಕ್ಕಳು ಜನಿಸಿದಾಗ, ಅವರು ತಾಯಿಯಿಂದ ಪಡೆಯುವ ಪೌಷ್ಠಿಕಾಂಶದಂತೆಯೇ ಇರುತ್ತಾರೆ. ಆದರೆ ಹೆಚ್ಚಿನ ಸಮಯದಲ್ಲಿ ಮಕ್ಕಳು ಜನ್ಮಜಾತ ಕಾಯಿಲೆಗಳಿಗೆ ಒಳಗಾಗುತ್ತಾರೆ. ಇದೀಗ ಫಿಲಿಪೈನ್ಸ್ ನಲ್ಲಿ ವಿಚಿತ್ರ ಪ್ರಕರಣವೊಂದು ಬೆಳಕಿಗೆ ಬಂದಿದೆ. ಸದ್ಯ ಈ ಪ್ರಕರಣ ಎಲ್ಲರನ್ನೂ ಅಚ್ಚರಿಗೊಳಿಸಿದೆ. ವೈರಲ್ ಆಗುತ್ತಿರುವ ಈ ಪ್ರಕರಣವು ಫಿಲಿಪೈನ್ಸ್ ನ ಅಪಯಾವೊಗೆ ಸಂಬಂಧಿಸಿದೆ. ಇಲ್ಲಿ ವಾಸಿಸುವ ಅಲ್ಮಾ ಅವರ ಮಗ ಜರೆನ್ ಗಮೊಂಗನ್ ವಿಚಿತ್ರ ಕಾಯಿಲೆಯಿಂದ ಬಳಲುತ್ತಿದ್ದಾರೆ. ಈ ರೋಗದ ಹೆಸರು ಹೈಪರ್ಟ್ರೈಕೋಸಿಸ್. ಇದು ದೇಹದ ಮೇಲೆ ಕೂದಲು ಬೆಳೆಯುವ ರೋಗವಾಗಿದೆ. ಆದರೆ, ಮಹಿಳೆ ತನ್ನ ಮಗುವನ್ನು ನೋಡಿದಾಗ, ಅವಳು ವಿಚಿತ್ರ ವಾದಗಳನ್ನು ಮಾಡಿದಳು. ವಾಸ್ತವಾಗಿ, ಇದು ತನ್ನ ಮಗುವಿಗೆ ಸಂಭವಿಸುತ್ತಿದೆ ಎಂದು ಮಹಿಳೆ ಭಾವಿಸಲಿಲ್ಲ. ತಾನು ಗರ್ಭಿಣಿಯಾಗಿದ್ದಾಗ ಬೆಕ್ಕನ್ನು ತಿಂದಿದ್ದೇನೆ ಎಂದು ಅವಳು ವರದಿಯಲ್ಲಿ ತಿಳಿಸಿದ್ದಾಳೆ.



### ಮಗುವಿಗೆ ಈ ರೋಗ ಏಕೆ ಬಂತು?

ವರದಿಯ ಪ್ರಕಾರ, ಮಹಿಳೆ ತನ್ನ ಮಗುವನ್ನು ಜನನದ ನಂತರ ನೋಡಿದಾಗ, ಅವಳು ಸಂಪೂರ್ಣವಾಗಿ ಮೂಢನಂಬಿಕೆಗಳಿಂದ ತುಂಬಿದ್ದಳು. ಗರ್ಭಾವಸ್ಥೆಯಲ್ಲಿ ಬೆಕ್ಕು ತಿನ್ನುವುದರಿಂದ ಮಗು ಶಾಪಗ್ರಸ್ತವಾಗಿದೆ ಎಂದು ಅವಳು ಹೇಳಲು ಪ್ರಾರಂಭಿಸಿದಳು. ವಾಸ್ತವವಾಗಿ, ಮಹಿಳೆ ವಾಸಿಸುವ ಸ್ಥಳದಲ್ಲಿ, ಬೆಕ್ಕುಗಳಿಂದ ವಿಶೇಷ ಖಾದ್ಯವನ್ನು ತಯಾರಿಸಲಾಗುತ್ತದೆ. ತಾನು ಗರ್ಭಿಣಿಯಾಗಿದ್ದಾಗ ಕಾಡು ಬೆಕ್ಕುಗಳನ್ನು ತಿನ್ನುವ ಬಲವಾದ ಬಯಕೆಯನ್ನು ಹೊಂದಿದ್ದೆ ಮತ್ತು ಅವುಗಳನ್ನು ತಿನ್ನುತ್ತಿದ್ದೆ ಎಂದು ಮಹಿಳೆ ಹೇಳುತ್ತಾರೆ.

## ಜಮ್ಮು ಮತ್ತು ಕಾಶ್ಮೀರದಲ್ಲಿ ವಿಧಾನಸಭೆ ಚುನಾವಣೆ ದೂರವಿಲ್ಲ: ಪ್ರಧಾನಿ ಮೋದಿ





**ಉಧಂಪುರ:** ಜಮ್ಮು ಮತ್ತು ಕಾಶ್ಮೀರಕ್ಕೆ ರಾಜ್ಯ ಸ್ಥಾನಮಾನ ಸಿಗಲಿದೆ, ವಿಧಾನಸಭೆ ಚುನಾವಣೆಗೆ ಸಮಯ ದೂರವಿಲ್ಲ' ಎಂದು ಪ್ರಧಾನಿ ಮೋದಿ ಅವರು ಹೇಳಿದ್ದಾರೆ.

ಅವರು ಇಂದು ಜಮ್ಮು – ಕಾಶ್ಮೀರದ ಉಧಂಪುರದಲ್ಲಿ ಚುನಾವಣಾ ರ್ಯಾಲಿಯಲ್ಲಿ ಭಾಗವಹಿಸಿ, ಮಾತನಾಡಿದ್ದಾರೆ.

ಈ ಚುನಾವಣೆ ಕೇವಲ ಸಂಸದರನ್ನು ಆಯ್ಕೆ ಮಾಡುವ ಚುನಾವಣೆಯಲ್ಲ, ಇದು ದೇಶದಲ್ಲಿ ಪ್ರಬಲ ಸರ್ಕಾರವನ್ನು ರಚಿಸುವ ಚುನಾವಣೆಯಾಗಿದೆ.

ಸರ್ಕಾರವು ಪ್ರಬಲವಾದಾಗ ಅದು ಉತ್ತಮ ಕೆಲಸ ಮಾಡುತ್ತದೆ. ನನ್ನನ್ನು ನಂಬಿ ಮತ್ತು 60 ವರ್ಷಗಳ ಸಮಸ್ಯೆಗಳನ್ನು ನಾನು ಪರಿಹರಿಸುತ್ತೇನೆ, ಇಲ್ಲಿನ ತಾಯಂದಿರು ಮತ್ತು ಸಹೋದರಿಯರಿಗೆ ನಾನು ಗೌರವವನ್ನು ಸಲ್ಲಿಸುವ ಅವಕಾಶವನ್ನು ನೀಡಬೇಕು. ನಾನು ಬಡವರಿಗೆ ಭರವಸೆ ನೀಡಿದ್ದೇನೆ. ಎರಡು ಹೊತ್ತಿನ ಊಟದ ಬಗ್ಗೆ ಚಿಂತಿಸಬೇಕಾಗಿಲ್ಲ, ಇಂದು ಜಮ್ಮು ಮತ್ತು ಕಾಶ್ಮೀರದ ಲಕ್ಷಾಂತರ ಕುಟುಂಬಗಳು ಮುಂದಿನ 5 ವರ್ಷಗಳವರೆಗೆ ಉಚಿತ ಪಡಿತರವನ್ನು ಪಡೆಯಲಿದೆ ಎಂದರು.

ಜಮ್ಮುವಿನ ರೈತರ ಹೊಲಗಳು ಒಣಗಿತ್ತು ಮತ್ತು ಹಳ್ಳಿಗಳು ಕತ್ತಲೆಯಲ್ಲಿತ್ತು, ನಮ್ಮ ರವಿಯ ನೀರು ಪಾಕಿಸ್ತಾನಕ್ಕೆ ಹೋಗುತ್ತಿದೆ. ಇದನ್ನೆಲ್ಲ ಸರಿ ಮಾಡಬೇಕಿದೆ. ಈಗಾಗಲೇ ರೈತರ ಬೇಡಿಕೆಗಳನ್ನು ಈಡೇರಿಸಿದ್ದೇನೆ ಎಂದರು.

## ದೆಹಲಿ ಸರ್ಕಾರದ ಮುಖ್ಯ ಕಾರ್ಯದರ್ಶಿ ವಿರುದ್ಧ ಎಫ್‌ಐಆರ್

**ದೆಹಲಿ:** ಸಿಎಂ ಅರವಿಂದ ಕೇಜ್ರಿವಾಲ್ ನೇತೃತ್ವದ ದೆಹಲಿ ಸರ್ಕಾರದ ಮುಖ್ಯ ಕಾರ್ಯದರ್ಶಿ ನರೇಶ್ ಕುಮಾರ್ ಮತ್ತು ಅವರ ಅಧೀನ ಕಾರ್ಯದರ್ಶಿ ವೈವಿಜೆ ರಾಜಶೇಖರ್ ವಿರುದ್ಧ ಎಫ್‌ಐಆರ್ ದಾಖಲಿಸಲಾಗಿದೆ.

ಉತ್ತರಾಖಂಡದ ಅಲ್ಮೋರಾ ಪಟ್ಟಣದ ನ್ಯಾಯಾಲಯದ ಆದೇಶದ ಮೇರೆಗೆ ಎಫ್‌ಐಆರ್ ದಾಖಲಿಸಲಾಗಿದೆ.

ಪ್ಲೆಸೆಂಟ್ ವ್ಯಾಲಿ ಫೌಂಡೇಶನ್ ಎಂಬ ಎನ್ಜಿಒ ನೀಡಿದ ದೂರನ್ನು ಆಧರಿಸಿ ನ್ಯಾಯಾಲಯವು ಅಧಿಕಾರಿಗಳ ವಿರುದ್ಧ ಪ್ರಕರಣ ದಾಖಲಿಸಿ ತನಿಖೆ ನಡೆಸುವಂತೆ ಕಂದಾಯ ಪೊಲೀಸರಿಗೆ ಸೂಚಿಸಿದೆ.

ಫೆಬ್ರವರಿ 14ರಂದು ದಡಕಡ ಗ್ರಾಮದಲ್ಲಿ ಎನ್ಜಿಒ ನಡೆಸುತ್ತಿರುವ ಶಾಲೆಗೆ ಅಧಿಕಾರಿಗಳು ನಾಲ್ವರನ್ನು ಹಗರಣವೊಂದಕ್ಕೆ ಸಂಬಂಧಿಸಿದ ಕಡತ ಪರಿಶೀಲನೆ ಹೆಸರಿನಲ್ಲಿ ದಾಳಿಗೆ ಕಳುಹಿಸಿದ್ದು, ಕಡತಗಳನ್ನು ಕೊಂಡೊಯ್ದು ನಾಪತ್ತೆ ಮಾಡಿದ್ದಾರೆ ಎಂದು ಪ್ಲೆಸೆಂಟ್ ವ್ಯಾಲಿ ಫೌಂಡೇಶನ್ ಆರೋಪಿಸಿದೆ.

ನಾಲ್ವರು ಅಧಿಕಾರಿಗಳು ಕಚೇರಿ ಕೊಠಡಿಯನ್ನು ಧ್ವಂಸಗೊಳಿಸಿದರು ಮತ್ತು ಸಾಕ್ಷ್ಯಾಧಾರಗಳಿರುವ ಕಡತಗಳು, ದಾಖಲೆಗಳು, ದಾಖಲೆಗಳು ಮತ್ತು ಪೆನ್ ಡ್ರೈವ್ಗಳನ್ನು ತೆಗೆದುಕೊಂಡು ಹೋಗಿದ್ದಾರೆ ಎಂದು ಎನ್ಜಿಒ ಜಂಟಿ ಕಾರ್ಯದರ್ಶಿ ಆರೋಪಿಸಿದ್ದಾರೆ.

ಎನ್ಜಿಒ ಸಿಬ್ಬಂದಿ ತಮ್ಮ ವಿರುದ್ಧ ವಿಜಿಲೆನ್ಸ್ ಇಲಾಖೆ ಮತ್ತು ಇತರ ವೇದಿಕೆಗಳಲ್ಲಿ ಸಲ್ಲಿಸಿರುವ ಭ್ರಷ್ಟಾಚಾರದ ದೂರುಗಳನ್ನು ತಕ್ಷಣವೇ ಹಿಂಪಡೆಯದಿದ್ದರೆ ಅವರನ್ನು ಬಂಧಿಸುವುದಾಗಿ ಅಧಿಕಾರಿಗಳು ಬೆದರಿಕೆ ಹಾಕಿದ್ದಾರೆ ಎಂದು ದೂರುದಾರರು ಹೇಳಿದ್ದಾರೆ. ಅವರು ತಮ್ಮೊಂದಿಗೆ ತಂದಿದ್ದ ಟೈಪ್ ಮಾಡಿದ ದಾಖಲೆಗಳಿಗೆ ಸಹಿ ಹಾಕುವಂತೆ ದೂರುದಾರರನ್ನು ಒತ್ತಾಯಿಸಿದರು ಎಂದು ಅವರು ಹೇಳಿದರು. ಇದನ್ನು ಎನ್ಜಿಒ ಸಿಬ್ಬಂದಿ ವಿರೋಧಿಸಿದ್ದು, ನಂತರ ಈ ದುಷ್ಕರ್ಮಿಗಳು ಡ್ರಾಯರ್ನಲ್ಲಿಟ್ಟ ?63,000 ನಗದನ್ನು ತೆಗೆದುಕೊಂಡು ಹೋಗಿದ್ದಾರೆ ಎಂದು ದೂರುದಾರರು ತಿಳಿಸಿದ್ದಾರೆ.



## ವಿದ್ಯಾರ್ಥಿನಿಯರಿಗೆ ಮುಟ್ಟಿನ ರಜೆ ಘೋಷಿಸಿದ ವಿಶ್ವವಿದ್ಯಾನಿಲಯ




**ಚಂಡೀಗಢ:** ತಿಂಗಳ ಮುಟ್ಟಿನ ಸಮಯದಲ್ಲಿ ಬಹುತೇಕ ಹೆಣ್ಮಕ್ಕಳು ಪಡುವ ಯಾತನೆ ಅದು ಅವರಿಗೆ ಮಾತ್ರ ಗೊತ್ತಿರುತ್ತೆ. ಪೀರಿಯಡ್ಸ್ ನೋವು ಅನುಭವಿಸದವರಿಗೆ ಅದರ ಕಷ್ಟ ಅರ್ಥವಾಗೋದು ಕಡಿಮೆ.ಇದೀಗ ಹೆಣ್ಮಕ್ಕಳಿಗೆ ವಿಶ್ವವಿದ್ಯಾಲಯವೊಂದು ಗುಡ್ನ್ಯೂಸ್ ನೀಡಿದೆ. ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿನಿಯರಿಗೆ ಹೆರಿಗೆ ಮತ್ತು ಋತುಚಕ್ರ ಅವಧಿಯ ರಜೆಯನ್ನು ಕೇರಳ ಸರ್ಕಾರ ಕಳೆದ ವರ್ಷ ಘೋಷಿಸಿತ್ತು. ಇದೀಗಾ ಚಂಡೀಗಢದ ಪಂಜಾಬ್ ವಿಶ್ವವಿದ್ಯಾನಿಲಯವು ವಿದ್ಯಾರ್ಥಿನಿಯರಿಗೆ ಋತುಚಕ್ರದ ಸಮಯದಲ್ಲಿ ಒಂದು ದಿನದ ರಜೆ ನೀಡಲು ಹೊಸ ನೀತಿಯನ್ನು ಜಾರಿಗೆ ತಂದಿದೆ. ಈ ನೀತಿಯನ್ನು 2024–25ರ ಶೈಕ್ಷಣಿಕ ಅಧಿವೇಶನದ ಮುಂಬರುವ ಸೆಮಿಸ್ಟರ್ನಿಂದ ಜಾರಿಗೊಳಿಸಲಾಗುವುದು ಎಂದು ಪಂಜಾಬ್ ವಿಶ್ವವಿದ್ಯಾಲಯದ ಉಪಕುಲಪತಿಗಳು ಮಾಹಿತಿ ನೀಡಿದ್ದಾರೆ. ರಜೆ ಪಡೆಯಲು ವಿದ್ಯಾರ್ಥಿಗಳು ಇಲಾಖೆ ಕಚೇರಿಯಲ್ಲಿ ನಮೂನೆಯನ್ನು ಭರ್ತಿ ಮಾಡಿ ಅಧ್ಯಕ್ಷರು ಅಥವಾ ನಿರ್ದೇಶಕರಿಂದ ಅನುಮೋದನೆ ಪಡೆಯಬೇಕು. ವಿದ್ಯಾರ್ಥಿಯ ಸ್ವಯಂ ಪ್ರಮಾಣೀಕರಣದ ಆಧಾರದ ಮೇಲೆ ರಜೆಯನ್ನು ನೀಡಲಾಗುವುದು. ಆದರೆ ಮಧ್ಯ–ಸೆಮಿಸ್ಟರ್ ಮತ್ತು ಅಂತಿಮ–ಸೆಮಿಸ್ಟರ್ ಪರೀಕ್ಷೆಗಳು, ಆಂತರಿಕ ಅಥವಾ ಬಾಹ್ಯ ಅಥವಾ ಪ್ರಾಯೋಗಿಕ ಪರೀಕ್ಷೆಗಳು ಸೇರಿದಂತೆ ಯಾವುದೇ ಪರೀಕ್ಷೆಗಳ ಸಮಸ್ಯೆದಲ್ಲಿ ಈ ರಜೆ ನೀಡಲಾಗುವುದಿಲ್ಲ ಎಂದು ತಿಳಿಸಿದೆ.



## ನಿಗೂಢವಾಗಿ ಸಾವನ್ನಪ್ಪಿದ ಖ್ಯಾತ ಗಾಯಕಿ ಪಾರ್ಕ್ ಬೋ ರಾಮ್

**ದಕ್ಷಿಣ ಕೊರಿಯಾ:** ದಕ್ಷಿಣ ಕೊರಿಯಾದ ಗಾಯಕಿ ಪಾರ್ಕ್ ಬೋ ರಾಮ್ ತನ್ನ 30ನೇ ವಯಸ್ಸಿನಲ್ಲಿ ಇಹಲೋಕ ತ್ಯಜಿಸಿದ್ದಾರೆ. ಕೆ–ಪಾಪ್ ಗಾಯಕಿಯ ನಿಧನ ಸುದ್ದಿಯನ್ನು ಕೇಳಿ ದಕ್ಷಿಣ ಕೊರಿಯಾದ ಮ್ಯೂಸಿಕ್ ಇಂಡಸ್ಟ್ರಿಗೆ ಶಾಕ್ ಆಗಿದೆ.

ಪಾರ್ಕ್ ಬೋ ರಾಮ್ ಸಾವಿನ ಸುದ್ದಿಯನ್ನು ಆಕೆಯ ಏಜೆನ್ಸಿ ಖಚಿತಪಡಿಸಿದೆ.

ಏಪ್ರಿಲ್ 11 ರಂದು ತಡರಾತ್ರಿ ಪಾರ್ಕ್ ಬೋ ರಾಮ್ ಹಠಾತ್ ನಿಧನರಾದರೆಂದು ಹೇಳಲು ನಮಗೆ ಅತೀವ ದುಃಖವಾಗುತ್ತಿದೆ. ಪಾರ್ಕ್ ಬೋ ರಾಮ್ ಅವರನ್ನು ಬೆಂಬಲಿಸುವ ಎಲ್ಲಾ ಅಭಿಮಾನಿಗಳಿಗೆ ನಾವು ಈ ಹಠಾತ್ ಸುದ್ದಿಯನ್ನು ಹೇಳಬೇಕಾಗಿರುವುದು ಇನ್ನಷ್ಟು ದುಃಖಕರವಾಗಿದೆ ಎಂದು ಕ್ಸಾನಾಡು ಎಂಟರ್ಟೈನ್ಮೆಂಟ್ ಹೇಳಿದೆ.

ಪಾರ್ಕ್ ಬೋ ರಾಮ್ ಈ ವರ್ಷ ಸಂಗೀತ ಕ್ಷೇತ್ರದಲ್ಲಿ 10 ವರ್ಷಗಳನ್ನು ಪೂರ್ಣಗೊಳಿಸಲಿದ್ದರು. ಈ ಸಂದರ್ಭದಲ್ಲಿ ಹೊಸ ಹಾಡನ್ನು ಬಿಡುಗಡೆ ಮಾಡಲು ತಯಾರಿ ನಡೆಸುತ್ತಿದ್ದು ಈ ಮಧ್ಯೆ ಪಾರ್ಕ್ ನಿಧ ಅಘಾತ ಉಂಟುಮಾಡಿದೆ. ಪಾರ್ಕ್ ಬೋ ರಾಮ್ ಅವರು ಸಾಯುವ ಕೆಲ ಗಂಟೆಗಳ ಮೊದಲು ಸ್ನೇಹಿತರೊಂದಿಗೆ ಪಾರ್ಟಿಯಲ್ಲಿದ್ದರು. ಈ ವೇಳೆ ಅವರು ಮದ್ಯಪಾನ ಮಾಡುತ್ತಿದ್ದರು. ಗಾಯಕಿ ರಾತ್ರಿ 9:55 ಕ್ಕೆ ವಾಶ್ರೂಮ್ಗೆ ಹೋಗುವುದಾಗಿ ಹೇಳಿ ಹೋದವರು ವಾಪಾಸ್ ಬಾರದೇ ಇರುವುದನ್ನು ಕಂಡಾಗ ಅವರ ಸ್ನೇಹಿತರು ವಾಶ್ ರೂಮ್ ನತ್ತ ಹೋಗಿದ್ದಾರೆ. ಆದರೆ ಈ ವೇಳೆ ಅವರು ಸಿಂಕ್ ಬಳಿ ಪ್ರಜ್ಞಾಹೀನರಾಗಿ ಬಿದ್ದಿದ್ದರು. ತಕ್ಷಣ ಅವರನ್ನು ಸಿಪಿಆರ್ ನೀಡಿ ಆಸ್ಪತ್ರೆಗೆ ದಾಖಲಿಸಿದ್ದಾರೆ. ಆದರೆ ರಾತ್ರಿ 11:17 ಕ್ಕೆ ಅವರು ಸಾವನ್ನಪ್ಪಿದ್ದಾರೆ ಎಂದು ವರದಿಯಲ್ಲಿ ಉಲ್ಲೇಖಿಸಲಾಗಿದೆ.

## ಕೇವಲ 2 ವೋಟಿಗಾಗಿ ಕಾಡು ಹಾದಿಯಲ್ಲಿ 107 ಕಿಮೀ ಸಾಗಿದ ಅಧಿಕಾರಿಗಳು



**ಮುಂಬೈ:** ಲೋಕಸಭಾ ಚುನಾವಣೆಗೆ ಕೇವಲ 2 ಮತಕ್ಕಾಗಿ ಚುನಾವಣಾ ಅಧಿಕಾರಿಗಳು 107 ಕಿಲೋಮೀಟರ್ ದೂರ ಕಾಡು ಹಾದಿಯಲ್ಲಿ ಸಾಗಿರುವ ಘಟನೆ ಮಹಾರಾಷ್ಟ್ರದ ಗಡ್ಚಿರೋಲಿ ಜಿಲ್ಲೆಯಲ್ಲಿ ನಡೆದಿದೆ.

ಚುನಾವಣೆಗೆ ಇಬ್ಬರು ವೃದ್ಧರು ತಮ್ಮ ಮನೆಯಿಂದಲೇ ಮತ ಚಲಾಯಿಸುವುದಕ್ಕೆ ಅನುವು ಮಾಡಿಕೊಡಲು ಅಧಿಕಾರಿಗಳು ಕಾಡು ಹಾದಿಯಲ್ಲಿ 107 ಕಿ.ಮೀ ಸಾಗಿದ್ದಾರೆ. ಏ.19 ರಿಂದ ಮೊದಲ ಹಂತದ ಮತದಾನ ನಡೆಯಲಿದೆ. ಹಿರಿಯ ನಾಗರಿಕರಿಗೆ ಮನೆಯಿಂದಲೇ ಮತ ಚಲಾವಣೆಗೆ ಅವಕಾಶವಿದ್ದು, ನಾಳೆಯಿಂದ ಮತದಾನ ಆರಂಭವಾಗಲಿದೆ. ಹೀಗಾಗಿ, ಗಡ್ಚಿರೋಲಿ–ಚಿಮೂರ್ ಕ್ಷೇತ್ರದಿಂದ 100 ಮತ್ತು 86 ವರ್ಷ ವಯಸ್ಸಿನ ಇಬ್ಬರು ಮತದಾರರು ತಮ್ಮ ಹಕ್ಕು ಚಲಾಯಿಸಲಿದ್ದಾರೆ. ಮುಂಬರುವ ಸಾರ್ವತ್ರಿಕ ಚುನಾವಣೆಯಲ್ಲಿ 85 ವರ್ಷಕ್ಕಿಂತ ಮೇಲ್ಪಟ್ಟವರು ಮತ್ತು 40%ಕ್ಕಿಂತ ಹೆಚ್ಚು ಅಂಗವೈಕಲ್ಯ ಹೊಂದಿರುವ ವ್ಯಕ್ತಿಗಳು ಮನೆಯಿಂದಲೇ ಮತ ಚಲಾಯಿಸುವ ಅವಕಾಶವನ್ನು ಚುನಾವಣಾ ಆಯೋಗವು ನೀಡಿದೆ.

## ಉಕ್ರೇನ್‌ನವಿದ್ಯುತ್ ಸ್ಥಾವರ ಉಡಾಯಿಸಿದ ರಷ್ಯಾ

**ಕೀವ್:** ಆರು ತಿಂಗಳಿನಿಂದ ಸಸತವಾಗಿ ನಡೆಯುತ್ತಿರುವ ಯುದ್ಧದಲ್ಲಿ ರಷ್ಯಾ ತನ್ನ ಗಮನವನ್ನು ಮೂಲಸೌಕರ್ಯಗಳ ಮೇಲೆ ತಿರುಗಿಸಿದ್ದು, ಕಿಪಣಿ ಹಾಗು ಡ್ರೋನ್ ಬಳಸಿ ಉಕ್ರೇನ್ನ ದೊಡ್ಡ ವಿದ್ಯುತ್ ಸ್ಥಾವರದ ಮೇಲೆ ದಾಳಿ ನಡೆಸಿ ಅದನ್ನು ನಾಶಪಡಿಸಿದೆ. ಉಕ್ರೇನ್ನ ಕೀವ್, ಚೆರ್ಕಾಸಿ, ಝೈಟೋಮಿರ್ ಪ್ರದೇಶಗಳು ಸೇರಿದಂತೆ 30ಲಕ್ಷ ಜನರಿಗೆ ವಿದ್ಯುತ್ ಒದಗಿಸುತ್ತಿದ್ದ ಟ್ರಿಪಿಲ್ಸ್ಕ ಸ್ಥಾವರದ ಮೇಲೆ ದಾಳಿಯಾಗಿದ್ದು, ಪರಿಣಾಮವಾಗಿ ಟ್ರಾನ್ಸ್ಫಾರ್ಮರ್, ಟರ್ಬೈನ್, ಜನರೇಟರ್ಗಳು ಹೊತ್ತಿ ಉರಿದಿವೆ. ಸುರಕ್ಷಿತ ಅಡಗುತಾಣಗಳನ್ನು ಸೇರುವ ಮೂಲಕ ಕಾರ್ಮಿಕರು ಪ್ರಾಣವನ್ನು ರಕ್ಷಿಸಿಕೊಂಡಿದ್ದಾರೆ ಎಂದು ಸ್ಥಾವರವನ್ನು ನಿರ್ವಹಿಸುವ ಕಂಪನಿಯ ಮೇಲ್ವಿಚಾರಣಾ ಮಂಡಳಿಯ ಅಧ್ಯಕ್ಷ ಆಂಡ್ರಿ, ಗೋಟಾ ಹೇಳಿದ್ದಾರೆ. ಈ ದಾಳಿಯಿಂದಾಗಿ ಇಡೀ ಸ್ಥಾವರವು ಬೆಂಕಿಗೆ ಆಹುತಿಯಾಗಿ ಸುಟ್ಟು ಹೋಗಿದ್ದು, ಸುತ್ತಲು ದಟ್ಟ ಹೊಗೆ ಕವಿದಿತ್ತು. ಇದಾದ ಕೆಲ ಗಂಟೆಗಳ ನಂತರ ರಕ್ಷಣಾ ಸಿಬ್ಬಂದಿಗಳು ಅಶೇಷಗಳ ತೆರವು ಕಾರ್ಯಕ್ಕೆ ಕೈ ಹಾಕಿದರು ಎಂದು ಗೋಟ ಹೇಳಿದ್ದಾರೆ. ರಷ್ಯಾದ ತೈಲ ಸಂಸ್ಕರಣಾಗಾರಗಳನ್ನು ಗುರಿಯಾಗಿಸಿ ಉಕ್ರೇನ್ ನಡೆಸಿದ ದಾಳಿಗೆ ಈ ಮೂಲಕ ಪ್ರತಿಕಾರ ತೀರಿಸಿಕೊಳ್ಳಲಾಗಿದೆ ಎಂದು ರಷ್ಯಾ ಅಧ್ಯಕ್ಷ ವ್ಲಾದಿಮಿರ್ ಪುಟಿನ್ ಹೇಳಿದ್ದಾರೆ.



## ಅಣ್ಣಾಮಲೈ ವಿರುದ್ಧ ದೂರು

**ಚೆನ್ನೈ:** ಸಾರ್ವಜನಿಕರಿಗೆ ತೊಂದರೆ ನೀಡಿದ ಆರೋಪ ಜೊತೆಗೆ ರಾತ್ರಿ 10 ಗಂಟೆಯ ನಂತರವೂ ಪ್ರಚಾರ ನಡೆಸಿದ ಆರೋಪದ ಮೇಲೆ ಬಿಜೆಪಿ ಅಭ್ಯರ್ಥಿ ಹಾಗೂ ತಮಿಳುನಾಡು ಬಿಜೆಪಿ ರಾಜ್ಯಾಧ್ಯಕ್ಷ ಕೆ.ಅಣ್ಣಾಮಲೈ ವಿರುದ್ಧ ಕೊಯಮತ್ತೂರು ಪೊಲೀಸರು ಎಫ್‌ಐಆರ್ ದಾಖಲಿಸಿದ್ದಾರೆ.

ಗಡುವು ಮೀರಿ ಬಿಜೆಪಿ ಪ್ರಚಾರ ನಡೆಸಿದ್ದಕ್ಕೆ ಡಿಎಂಕೆ ಮತ್ತು ಎಡಪಕ್ಷಗಳ ಕಾರ್ಯಕರ್ತರು ಆಕ್ಷೇಪ ವ್ಯಕ್ತಪಡಿಸಿದ್ದರು.

ಸೆಕ್ಷನ್ 143, 341 ಮತ್ತು 290 ರ ಅಡಿಯಲ್ಲಿ ಎಫ್‌ಐಆರ್ ದಾಖಲಿಸಲಾಗಿದೆ. ತಮ್ಮ ಪಕ್ಷದ ಕಾರ್ಯಕರ್ತರ ಮೇಲೆ ಹಲ್ಲೆ ನಡೆಸಲಾಗಿದೆ ಎಂದು ಡಿಎಂಕೆ ನೀಡಿದ ದೂರಿನ ಮೇಲೆ ಬಿಜೆಪಿ ವಿರುದ್ಧ ಮತ್ತೊಂದು ಪ್ರಕರಣ ದಾಖಲಿಸಲಾಗಿದೆ ಎಂದು ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಅಣ್ಣಾಮಲೈ ಅವರು ಸೋಲಿನ ಭಯದಿಂದ ಭಯೋತ್ಪಾದನೆ ಮತ್ತು ಗಲಭೆಗಳನ್ನು ಪ್ರಚೋದಿಸುತ್ತಾರೆ. ದುರಹಂಕಾರದ ಬಗ್ಗೆ ಮಾತನಾಡುವ ಪ್ರಧಾನಿಗಳು, ಅಣ್ಣಾಮಲೈ ಅವರಿಗೆ ಜ್ಞಾನಾರ್ಜನೆ ನೀಡಬೇಕು ಎಂದು ಡಿಎಂಕೆ ವಕ್ತಾರ ಎ.ಸರವಣನ್ ಹೇಳಿದ್ದರು. ನಾನು ಯಾವುದೇ ನಿಯಮ ಉಲ್ಲಂಘಿಸಿಲ್ಲ. ರಾತ್ರಿ 10 ಗಂಟೆಯ ನಂತರ ಜನರನ್ನು ಭೇಟಿ ಮಾಡಲು ನನಗೆ ಎಲ್ಲ ಹಕ್ಕಿದೆ. ಯಾವ ಚುನಾವಣಾ ಆಯೋಗವು ನಿಮ್ಮನ್ನು ತಡೆಯುತ್ತದೆ ಆದೇಶ ಎಲ್ಲಿದೆ, ನೀವು ನನಗೆ ತೋರಿಸುತ್ತೀರಾ ಎಂದು ಅಣ್ಣಾಮಲೈ ಪ್ರಶ್ನಿಸಿದ್ದಾರೆ.






"ಜನರ ಜೀವನ ಮಟ್ಟವನ್ನು ಉತ್ತಮಗೊಳಿಸಲು
ಶಿಕ್ಷಣವು ಪ್ರಮುಖ ಅಸ್ತ್ರವಾಗಿದೆ"

-ಡಾ. ಬಿ.ಆರ್. ಅಂಬೇಡ್ಕರ್

# 133ನೇ ಜನ್ಮದಿನಾಚರಣೆ

ಸಂವಿಧಾನ ಶಿಲ್ಪಿ, ಮಹಾ ಮಾನವತಾವಾದಿ, ಭಾರತ ರತ್ನ

## ಡಾ. ಬಿ.ಆರ್. ಅಂಬೇಡ್ಕರ್ ರವರ

## ಪ್ರತಿಮೆಗೆ ಮಾಲಾರ್ಪಣೆ

ಏಪ್ರಿಲ್ 14, 2024 ಭಾನುವಾರ, ಬೆಳಿಗ್ಗೆ 10.00 ಗಂಟೆಗೆ
ವಿಧಾನಸೌಧದ ಮುಂಭಾಗ, ಬೆಂಗಳೂರು

**``ನಮ್ಮ ವೈವಿಧ್ಯಮಯ ಸಂಸ್ಕೃತಿ ಮತ್ತು ಪರಂಪರೆಯನ್ನು ಗೌರವಿಸುವುದು ಮತ್ತು ಕಾಪಾಡುವುದು"**
-ಪ್ರತಿಯೊಬ್ಬ ಭಾರತೀಯನ ಸಂವಿಧಾನಬದ್ಧ ಮೂಲಭೂತ ಕರ್ತವ್ಯ.

ಆಯುಕ್ತರು
ಸಮಾಜ ಕಲ್ಯಾಣ ಇಲಾಖೆ

@SWDGok